ಸಂಪುಟ: 04 ಸಂಚಿಕೆ: 297 ಪುಟಗಳು: 08 ಗುರುವಾರ 09 ಜನವರಿ 2025
www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ
RNI No. KARKAN/2021/80833
9448225696 +91 8035841833
₹5

**ಮುಂಜಾನೆ ಮಾತು**
ಮುದುಕರು ಮರಗಳನ್ನು ನೆಟ್ಟಾಗ ಸಮಾಜವು ಉತ್ತಮವಾಗಿ ಬೆಳೆಯುತ್ತದೆ, ಅವರ ನೆರಳಿನಲ್ಲಿ ಅವರು ಎಂದಿಗೂ ಕುಳಿತುಕೊಳ್ಳುವುದಿಲ್ಲ.

# ಉದಯ ವಾಹಿನಿ
ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

# ಸಿಟಿ ರವಿ ಬಂಧನ ಪ್ರಕರಣಕ್ಕೆ ರಾಜ್ಯಪಾಲರ ಎಂಟ್ರಿ

• ಉದಯವಾಹಿನಿ, ಬೆಂಗಳೂರು

ಸಿಟಿ ರವಿ ಬಂಧನ ಪ್ರಕರಣಕ್ಕೆ ರಾಜ್ಯಪಾಲರ ಎಂಟ್ರಿಯಾಗಿದ್ದು, ಸಿಎಂ ಸಿದ್ದರಾಮಯ್ಯಗೆ ರಾಜ್ಯಪಾಲರು ಪತ್ರ ಬರೆದಿದ್ದಾರೆ. ಪತ್ರದಲ್ಲಿ ಪೊಲೀಸ್ ಅಧಿಕಾರಿಗಳ ವಿರುದ್ಧ ಕ್ರಮಕ್ಕೆ ಸಿಎಂ ಸಿದ್ದರಾಮಯ್ಯಗೆ ರಾಜ್ಯಪಾಲರು ಸಲಹೆ ನೀಡಿದ್ದಾರೆ. ಹಾಗೂ ಪ್ರಕರಣಕ್ಕೆ ನೀವು ಮಧ್ಯಪ್ರವೇಶಿಸಿ ಗಂಭೀರವಾಗಿ



ಪರಿಗಣಿಸಿ ಎಂದು ಸಲಹೆ ನೀಡಿದ್ದಾರೆ. ಸಚಿವ ಲಕ್ಷ್ಮೀ ಹೆಬ್ಬಾಳಕರ್ ಬಗ್ಗೆ ಅಶ್ಲೀಲ ಪದ ಬಳಕೆ ಮಾಡಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಬಿಜೆಪಿ ಎಂಎಲ್ ಸಿ ಸಿ.ಟಿ.ರವಿ ರಾಜ್ಯಪಾಲರನ್ನು ಭೇಟಿಯಾಗಿದ್ದರು. ಬೆಳಗಾವಿಯಲ್ಲಿ ನಡೆದ ಚಳಿಗಾಲದ ಅಧಿವೇಶನದ ವೇಳೆ ಡಿ. 19ರಂದು ವಿಧಾನಪರಿಷತ್ ಕಲಾಪದ ಸಂದರ್ಭದಲ್ಲಿ ಎಂಎಲ್ ಸಿ ಸಿ.ಟಿ.ರವಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಬಗ್ಗೆ ಆಕ್ಷೇಪಾರ್ಹ ಪದ ಬಳಕೆ ಮಾಡಿದ್ದರು. ಪ್ರಕರಣ ಸಂಬಂಧ ಸಿ.ಟಿ.ರವಿ ಬಂಧನವಾಗಿತ್ತು. ಜಾಮೀನಿನ ಮೇಲೆ ಬಿಡುಗಡೆಯಾಗಿದ್ದರು. ಈ ಪ್ರಕರಣವನ್ನು ರಾಜ್ಯ ಸರ್ಕಾರ ಸಿಐಡಿ ತನಿಖೆಗೆ ವಹಿಸಿದೆ. ಈ ನಡುವೆ ರಾಜ್ಯ ಬಿಜೆಪಿ ನಾಯಕರು ರಾಜ್ಯಪಾಲರನ್ನು ಭೇಟಿಯಾಗಿ ಚರ್ಚೆ ನಡೆಸಿದ್ದರು. ಈ ಎಲ್ಲಾ ಬೆಳವಣಿಗೆ ಬಳಿಕ ಎಂಎಲ್ ಸಿ ಸಿ.ಟಿ.ರವಿ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರನ್ನು ಭೇಟಿಯಾಗಿದ್ದರು. ರಾಜಭವನಕ್ಕೆ ಆಗಮಿಸಿದ ಸಿ.ಟಿ.ರವಿ ರಾಜ್ಯಪಾಲರನ್ನು ಭೇಟಿಯಾಗಿ ಅಂದು ನಡೆದ ಘಟನೆಗಳ ಬಗ್ಗೆ ಮಾಹಿತಿ ನೀಡಿದರು.

**ಪೊಲೀಸರ ವಿರುದ್ಧ ಕ್ರಮಕ್ಕೆ ಸಿಎಂ ಸೂಚನೆ.!**

## ಸ್ಥಿರಾಸ್ತಿ ನೋಂದಣಿ ಮಾಡಿಸುವವರಿಗೆ ಸರ್ಕಾರದ ಶಾಕ್

• ಉದಯವಾಹಿನಿ, ಬೆಂಗಳೂರು

ಕರ್ನಾಟಕದಲ್ಲಿ ಸ್ಥಿರಾಸ್ತಿ ನೋಂದಣಿ ಮಾಡಿಸುವವರಿಗೆ ಕಂದಾಯ ಇಲಾಖೆ ಶಾಕ್ ನೀಡಲು ಸಜ್ಜಾಗಿದೆ. ಇದೂ ಗ್ಯಾರಂಟಿಗಳ ಫಲವೇ ಎಂದು ಜನ ಆಕ್ರೋಶ ವ್ಯಕ್ತಪಡಿಸುವಂತಾಗಿದೆ. ಇತ್ತೀಚೆಗಷ್ಟೇ ರಾಜ್ಯ ಸರ್ಕಾರ ಬಸ್ ಪ್ರಯಾಣ ದರ ಹೆಚ್ಚಳ ಮಾಡಿತ್ತು. ಇದರ ಬೆನ್ನಲ್ಲೇ ಸಂಕ್ರಾಂತಿ ಬಳಿಕ ಹಾಲಿನ ದರ ಏರಿಕೆ ಮಾಡುವ ಪ್ರಸ್ತಾವನೆಯೂ ಇದೆ. ಇದರ ನಡುವೆಯೇ ಈಗ ಜನರಿಗೆ ಮತ್ತೊಂದು ಬೆಲೆ ಏರಿಕೆಯ ಶಾಕ್ ಎದುರಾಗಿದೆ.

ರಾಜ್ಯದಲ್ಲಿ ಮುಂದಿನ ತಿಂಗಳಿನಿಂದಲೇ ಸ್ಥಿರಾಸ್ತಿಗಳ ನೋಂದಣಿ ಶುಲ್ಕ ಹೆಚ್ಚಳ ಮಾಡಲು ಕಂದಾಯ ಇಲಾಖೆ ಸಿದ್ಧತೆ ನಡೆಸಿದೆ. ಈ ಬಗ್ಗೆ ಸ್ವತಃ ಕಂದಾಯ ಸಚಿವ ಕೃಷ್ಣಭೈರೇಗೌಡ ಸುಳಿವು ನೀಡಿದ್ದಾರೆ. ಕಂದಾಯ ಇಲಾಖೆಯ ಹಿರಿಯ ಅಧಿಕಾರಿಗಳ ಜೊತೆ ಸಭೆ ನಡೆಸಿದ ಬಳಿಕ ಕೃಷ್ಣಭೈರೇಗೌಡ ಈ ಮಾಹಿತಿ ನೀಡಿದ್ದಾರೆ. ಬಜೆಟ್ ಮಂಡನೆಗೆ ಮುನ್ನ ಸಿಎಂ ಸಿದ್ದರಾಮಯ್ಯ ಸಂಪನ್ಮೂಲ ಸಂಗ್ರಹಣೆ ಇಲಾಖೆ ಅಧಿಕಾರಿಗಳ ಜೊತೆ ಸಭೆ ನಡೆಸಿದ್ದರು. ಈ ವೇಳ ನಿರೀಕ್ಷಿಸಿದಷ್ಟು ಸಂಪನ್ಮೂಲ ಕ್ರೋಢೀಕರಣವಾಗಿಲ್ಲ ಎನ್ನುವುದು ತಿಳಿದುಬಂದಿತ್ತು. ಹೀಗಾಗಿ ಈಗ ಸಂಪನ್ಮೂಲ ಹೆಚ್ಚಳಕ್ಕೆ ನೋಂದಣಿ ದರ ಪರಿಷ್ಕರಣೆಗೆ ಮುಂದಾಗಿದೆ ಎನ್ನಲಾಗಿದೆ. ಮುಂದಿನ ತಿಂಗಳಿನಿಂದಲೇ ಪರಿಷ್ಕೃತ ಮಾರ್ಗಸೂಚಿ ಜಾರಿಗೆ ಬರಲಿದೆ.

## ಪೊಲೀಸ್ ಠಾಣೆ ಉದ್ಘಾಟನೆ ಮಾಡಿದ ಸಿಎಂ, ಡಿಸಿಎಂ



• ಉದಯವಾಹಿನಿ, ಬೆಂಗಳೂರು

ಮುಖ್ಯಮಂತ್ರಿ ಸಿದ್ದರಾಮಯ್ಯ ತಮ್ಮ ಸಂಪುಟದ ಕೆಲ ಸಹೋದ್ಯೋಗಿ ಮತ್ತು ನಗರದ ಟಾಪ್ ಪೊಲೀಸ್ ಅಧಿಕಾರಿಗಳೊಂದಿಗೆ ಚಾಮರಾಜಪೇಟೆಯಲ್ಲಿ ನೂತನವಾಗಿ ನಿರ್ಮಿಸಲಾಗಿರುವ ಪೊಲೀಸ್ ಠಾಣೆಯನ್ನು ಉದ್ಘಾಟಿಸಿದರು. ನೂತನ ಕಟ್ಟಡದ ರಿಬ್ಬನ್ ಕಟ್ ಮಾಡಿದರು. ನಂತರ ರಾಜ್ಯದಲ್ಲಿ ಅಪರಾಧಗಳ ಪ್ರಮಾಣ ಕಡಿಮೆ ಆಗುತ್ತಿರುವುದು ನೆಮ್ಮದಿಯ ಸಂಗತಿ. ಆದರೆ ಪೊಲೀಸರು ಚಾಪೆ ಕೆಳಗೆ ತೂರಿದರೆ ಅಪರಾಧಿಗಳು ರಂಗೋಲಿ ಕೆಳಗೆ ತೂರಿ ಕಾನೂನಿನಿಂದ ತಪ್ಪಿಸಿಕೊಳ್ಳಲು ಯತ್ನಿಸುತ್ತಾರೆ. ಇದಕ್ಕೆ ಅವಕಾಶ ಆಗಬಾರದು ಎಂದರು.

## ಜ.13 ರಂದು ಸಿಎಂ ಸಿದ್ದರಾಮಯ್ಯ ಸಿಎಲ್‌ಪಿ ಸಭೆ

• ಉದಯವಾಹಿನಿ, ಬೆಂಗಳೂರು



ಸದ್ಯ ರಾಜ್ಯ ರಾಜಕಾರಣದಲ್ಲಿ ಡಿನ್ನರ್ ಪಾಲಿಟಿಕ್ಸ್ ಸದ್ದು ಮಾಡುತ್ತಿದ್ದು, ಇದರ ನಡುವೆಯೇ ಜನವರಿ 13 ರಂದು ಬೆಂಗಳೂರಿನ ಖಾಸಗಿ ಹೋಟೆಲ್ ನಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ನೇತೃತ್ವದಲ್ಲಿ ಕಾಂಗ್ರೆಸ್ ಪಕ್ಷದ ಶಾಸಕಾಂಗ ಸಭೆ ನಡೆಯಲಿದೆ. ಹೌದು ಡಿನ್ನರ್ ಕಾಳಗದ ನಡುವೆ ಇದೀಗ ಸಂಸದರಮಯ್ಯ ಅವರು ಸಿಎಲ್‌ಪಿ ಸಭೆಯನ್ನು ನಿಗದಿ ಮಾಡಿದ್ದಾರೆ ಜನವರಿ 13 ರಂದು ಬೆಂಗಳೂರಿನಲ್ಲಿ ಖಾಸಗಿ ಹೋಟೆಲ್ ನಲ್ಲಿ ಈ ಸಿಎಲ್‌ಪಿ ಸಭೆ ನಡೆಯಲಿದೆ. ಜನವರಿ 13 ರಂದು ಬೆಂಗಳೂರಿನಲ್ಲಿ ಖಾಸಗಿ ಹೋಟೆಲ್ ನಲ್ಲಿ ಈ ಸಿಎಲ್‌ಪಿ ಸಭೆ ನಡೆಯಲಿದೆ. ಗೊಂದಲದ ನಡುವೆ ಕಾಂಗ್ರೆಸ್ ಶಾಸಕಾಂಗ ಪಕ್ಷದ ಸಭೆ ನಿಗದಿಯಾಗಿದೆ. ಜನವರಿ 13ರಂದು ಸೋಮವಾರ ಸಂಜೆ 6 ಗಂಟೆಗೆ ಶಾಸಕಾಂಗ ಪಕ್ಷದ ಸಭೆ. ನಡೆಯಲಿದೆ. ಬೆಂಗಳೂರಿನ ಖಾಸಗಿ ಹೋಟೆಲ್ ನಲ್ಲಿ ಸಿಎಂ ಸಿದ್ದರಾಮಯ್ಯ ನೇತೃತ್ವದಲ್ಲಿ ಈ ಒಂದು ಸಿ.ಎಲ್‌ಪಿ ಸಭೆ ನಡೆಯಲಿದೆ. ವಿಶೇಷ ಸಂದರ್ಭದಲ್ಲಿ ಅವರು ಕಾಂಗ್ರೆಸ್ ಶಾಸಕಾಂಗ ಪಕ್ಷದ ಸಭೆಯನ್ನು ಕರೆದಿದ್ದಾರೆ. ವಿಧಾನ ಮಂಡಲ ಅಧಿವೇಶನದ ಬಳಿಕ ಈ ಒಂದು ಸಿ ಎಲ್ ಪಿ ಸಭೆ ಕರೆದಿದ್ದಾರೆ.

# ಶಸ್ತ್ರಸ್ತ್ರಕ್ಕೆ ಗುಡ್‌ಬೈ ಹೇಳಿದ ನಕ್ಸಲರು

**ಸಿಎಂ ಸಮ್ಮುಖದಲ್ಲಿ ಶರಣಾದ 6 ನಕ್ಸಲರು**



### ಸರ್ಕಾರ ಸುಮ್ಮನೇ ಕೂರುವುದು ಸಾಧ್ಯವಿಲ್ಲ

ನಕ್ಸಲೀಯ ಚಟುವಟಿಕೆಗಳು ಕರ್ನಾಟಕದಲ್ಲಿ ಎಂದೂ ನೆರೆಯ ರಾಜ್ಯಗಳಂತೆ ವಿಪರೀತ ಪ್ರಮಾಣದಲ್ಲಿ ನಡೆದಿಲ್ಲ. ಆದರೆ, ಮಲೆನಾಡಿನಲ್ಲಿ ಎರಡು ದಶಕಗಳಿಂದ ಆಗಾಗ್ಗೆ ನಕ್ಸಲೀಯ ಚಟುವಟಿಕೆಗಳು ಕಾಣುತ್ತಲಿವೆ ಮತ್ತು ಆ ಕಾರಣದಿಂದ ಹಿಂಸೆ ಹಾಗೂ ಸಾವು-ನೋವುಗಳು ಸಂಭವಿಸಿವೆ. ಹಲವಾರು ಅಮಾಯಕರ, ಪೊಲೀಸರ ಮತ್ತು ನಕ್ಸಲೀಯ ಚಟುವಟಿಕೆಗಳಲ್ಲಿ ಇದ್ದವರ ಜೀವಹಾನಿಯೂ ಆಗಿದೆ. ಆದರೆ, ಪ್ರಜಾತಾಂತ್ರಿಕ ಸಮಾಜದಲ್ಲಿ ಬಂದೂಕಿನ ಮೂಲಕ ಬದಲಾವಣೆ ತರಲು ಹೊರಟಿರುವ ಆದರ್ಶವಾದಿಗಳು ತಮ್ಮ ಜೀವವನ್ನೂ ತೆತ್ತುಕೊಳ್ಳುತ್ತಾರೆ, ಇತರರ ಜೀವಹಾನಿಗೂ ಕಾರಣವಾಗುತ್ತಾರೆ. ಇದು ನೋವಿನ ವಿಚಾರವಾದರೂ, ಸಂವಿಧಾನಬದ್ಧವಾಗಿ ಆಡಳಿತ ನಡೆಸುವ ಸರ್ಕಾರ ಸುಮ್ಮನೇ ಕೂರುವುದು ಸಾಧ್ಯವಿಲ್ಲ' ಎಂದು ತಿಳಿಸಿದ್ದರು.

## ಬಂದೂಕು ಮೂಲೆಗಿಟ್ರು ನಕ್ಸಲರು ಶರಣಾಗಿ ಬಿಟ್ರು

**ನಕ್ಸಲರ ಅಟ್ಟಹಾಸಕ್ಕೆ ಬ್ರೇಕ್!**

• ಉದಯವಾಹಿನಿ, ಬೆಂಗಳೂರು

ಕರ್ನಾಟಕದ ಇತಿಹಾಸದಲ್ಲೇ ಸುವರ್ಣಾಕ್ಷರದಲ್ಲಿ ಬರೆದಿಡುವ ದಿನ. ಯಾಕಂದ್ರೆ, ಕಳೆದ ಹಲವು ವರ್ಷಗಳಿಂದ ಕಾಡಿನೊಳಗೆ ಅಡಗಿ ಕುಳಿತು ಸದಾ ಸಂಘರ್ಷ, ರಕ್ತಚರಿತ್ರೆ ಬರೆಯುತ್ತಿದ್ದ ನಕ್ಸಲರು ಇದೀಗ ಮುಖ್ಯವಾಹಿನಿಗೆ ಬಂದಿದ್ದಾರೆ. ಪಶ್ಚಿಮ ಘಟ್ಟದಲ್ಲಿ ಕಳೆದ ಹಲವು ವರ್ಷಗಳಿಂದ ಮಾವೋವಾದಿ ಚಟುವಟಿಕೆಯಲ್ಲಿ ಸಕ್ರಿಯರಾಗಿದ್ದ 6 ಮಂದಿ ನಕ್ಸಲರು ಸಿಎಂ ಸಿದ್ದರಾಮಯ್ಯ ಮುಂದೆ ಬುಧವಾರ ಶರಣಾಗತರಾದರು. ಸಿಎಂ ಗೃಹ ಕಚೇರಿ ಕೃಷ್ಣಾದಲ್ಲಿ ನಕ್ಸಲ್ ಶರಣಾಗತಿ ಮತ್ತು ಪುನರ್ವಸತಿ ಸಮಿತಿ ಸದಸ್ಯರು, ಶಾಂತಿಗಾಗಿ ನಾಗರೀಕರ ವೇದಿಕೆ ಸದಸ್ಯರ ಸಮ್ಮುಖದಲ್ಲಿ 6 ಮಂದಿ ನಕ್ಸಲರು ಶರಣಾದರು. ಮುಂಡಗಾರು ಲತಾ, ಸುಂದರಿ ಕುತ್ಲೂರು, ವನಜಾಕ್ಷಿ ಬಾಳೆಹೊಳೆ, ಜಯಣ್ಣ ಅರೋಲಿ, ಕೆ.ವಸಂತ ಟಿ.ಎನ್ ಹಾಗೂ ಜೀಶ್ ಶರಣಾಗಿದ್ದಾರೆ. ಪೊಲೀಸ್ ಭದ್ರತೆಯೊಂದಿಗೆ ನಕ್ಸಲರನ್ನು ಬೆಂಗಳೂರಿನ ಮುಖ್ಯಮಂತ್ರಿ ಗೃಹ ಕಚೇರಿ ಕೃಷ್ಣಗೆ ಕರೆತರಲಾಯಿತು. ಬಳಿಕ ಸಿಎಂ ಸಿದ್ದರಾಮಯ್ಯ ಅವರನ್ನು ನಕ್ಸಲರು ಭೇಟಿಯಾದರು. ಈ ವೇಳೆ ನಕ್ಸಲರ ಜೊತೆ ಸಿಎಂ ಮಾತುಕತೆ ನಡೆಸಿದರು. ಪೊಲೀಸರು ಶರಣಾದ ನಕ್ಸಲರನ್ನು ತಮ್ಮ ವಶಕ್ಕೆ ಪಡೆದದ್ದು, ಕೋರ್ಟ್‌ಗೆ ಹಾಜರುಪಡಿಸಿ ಮುಂದಿನ ಪ್ರಕ್ರಿಯೆಗಳನ್ನು ಕೈಗೊಳ್ಳಲಿದ್ದಾರೆ.

ನಕ್ಸಲರು ಕಳೆದ ಮೂರು ದಿನಗಳಿಂದ ಶಾಂತಿಗಾಗಿ ನಾಗರಿಕ ವೇದಿಕೆ ಸದಸ್ಯರ ಜೊತೆ ಶರಣಾಗುವ ಕುರಿತು ಮಾತುಕತೆಯನ್ನು ಚಿಕ್ಕಮಗಳೂರು ಕಾಡಿನಲ್ಲಿ ನಡೆಸುತ್ತಿದ್ದರು. ಬುಧವಾರ ಅವರುಗಳು ಶರಣಾಗಲು ದಿನಾಂಕ ನಿಗದಿ ಮಾಡಲಾಯಿತು. ಮೊದಲು ಚಿಕ್ಕಮಗಳೂರು ಜಿಲ್ಲಾಧಿಕಾರಿಗಳ ಕಛೇರಿಯಲ್ಲಿ ಶರಣಾಗಲಿದ್ದಾರೆ ಎಂಬ ಮಾಹಿತಿ ಇತ್ತು.ಆದರೆ ಬುಧವಾರ ಬೆಳಗ್ಗೆ ಚಿಕ್ಕಮಗಳೂರಿನಿಂದ ಶಾಂತಿಗಾಗಿ ನಾಗರಿಕ ವೇದಿಕೆ ಸದಸ್ಯರ ಜೊತೆ ಪೊಲೀಸರ ಭದ್ರತೆಯಲ್ಲಿ ಬೆಂಗಳೂರು ನಗರಕ್ಕೆ ಆಗಮಿಸಿದ ನಕ್ಸಲರು, ಮುಖ್ಯಮಂತ್ರಿಗಳ ಮುಂದೆ ಶರಣಾಗಿದ್ದಾರೆ. ನಕ್ಸಲರನ್ನು ಮೊದಲು ವೈದ್ಯಕೀಯ ಪರೀಕ್ಷೆಗೆ ಒಳಪಡಿಸಿ, ಕೋರ್ಟ್ ಮುಂದೆ ಹಾಜರುಪಡಿಸಬೇಕಿದೆ.

ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಹಾಕಿದ್ದ ಮುಖ್ಯಮಂತ್ರಿಗಳು, 'ನಕ್ಸಲೀಯ ಚಟುವಟಿಕೆಗಳಲ್ಲಿ ತೊಡಗಿರುವವರು ಶರಣಾಗಿ ಸಮಾಜದ ಮುಖ್ಯವಾಹಿನಿಗೆ ಬರಬೇಕೆಂದು ಸರ್ಕಾರವು ಬಯಸುತ್ತದೆ.

ಕರ್ನಾಟಕದಲ್ಲಿ ಕಾನೂನು ಮತ್ತು ಸುವ್ಯವಸ್ಥೆ ಕಾಪಾಡಲು ಮತ್ತು ಶಾಂತಿ ನೆಲೆಸುವಂತೆ ಮಾಡಲು ಸರ್ಕಾರವು ಕಟ್ಟುನಿಟ್ಟಿನ ಕ್ರಮಕೈಗೊಳ್ಳಲು ಹಿಂಜರಿಯುವುದಿಲ್ಲ. ಈ ಪ್ರಕ್ರಿಯೆ ಸರ್ಕಾರ ಕಾನೂನಿನ ಚೌಕಟ್ಟಿನಲ್ಲಿ ಸ್ವಾಗತಿಸಿ, ಸಹಾನುಭೂತಿಯಿಂದ ನಡೆದುಕೊಳ್ಳುತ್ತದೆ' ಎಂದು ಹೇಳಿದ್ದರು.

ಡಿಸಿಎಂ ಡಿ.ಕೆ.ಶಿವಕುಮಾರ್, ಗೃಹ ಸಚಿವ ಜಿ.ಪರಮೇಶ್ವರ್ ಮತ್ತು ಡಿಜಿಪಿ ಅಲೋಕ್ ಮೋಹನ್ ಸಮ್ಮುಖದಲ್ಲಿ ನಕ್ಸಲರು ಸಿಎಂ ಮುಂದೆ ಶರಣಾಗತಿ ಪ್ರಕ್ರಿಯೆ ನಡೆಯಿತು. 6 ಮಂದಿ ನಕ್ಸಲರು ಶಸ್ತ್ರತ್ಯಜಿಸಿ ಶರಣಾದರು.

ಈ ವೇಳೆ ನಕ್ಸಲರ ಜೊತೆ ಅವರ ಕುಟುಂಬಸ್ಥರು ಸಹ ಹಾಜರಿದ್ದರು. ಬೆಳಗ್ಗೆ 7 ಗಂಟೆಗೆ ಶೃಂಗೇರಿಯಿಂದ ಹೊರಟ ನಕ್ಸಲರ ತಂಡ ಚಿಕ್ಕಮಗಳೂರಿನಲ್ಲಿ ಮಾತುಕತೆ ಮುಗಿಸಿ ಬೆಂಗಳೂರಿನತ್ತ ಪ್ರಯಾಣ ಬೆಳೆಸಿತು. ಸಂಜೆ 6 ಗಂಟೆ ಹೊತ್ತಿಗೆ ಸಿಎಂ ಗೃಹ ಕಚೇರಿ ಕೃಷ್ಣಗೆ ತಲುಪಿತು. ಆ ತಂಡವನ್ನು ಚೆಕ್ ಇನ್ ಮಾಡಿ ಪೊಲೀಸರು ಒಳಗೆ ಬಿಟ್ಟರು. ಸಿಎಂ ಕಚೇರಿ ಮುಂದೆ ಪೊಲೀಸ್ ಬಿಗಿ ಭದ್ರತೆ ಕಲ್ಪಿಸಲಾಗಿತ್ತು. ಬಳಿಕ ಸಿಎಂ ಮುಂದೆಯೇ ನಕ್ಸಲರು ಶಸ್ತ್ರ ತ್ಯಾಗ ಮಾಡಿದರು. ನಕ್ಸಲ್ ಶರಣಾಗತಿ ಮತ್ತು ಪುನರ್ವಸತಿ ಸಮಿತಿ ಸದಸ್ಯರು ಈ ವೇಳೆ ಉಪಸ್ಥಿತರಿದ್ದರು.

**1** ಮುಖ್ಯಮಂತ್ರಿ ಸಿದ್ದರಾಮಯ್ಯ ಎದುರು ಶರಣಾದ ನಕ್ಸಲ್ ಗುಂಪು

**2** ಮಾವೋವಾದಿ ಚಟುವಟಿಕೆಯಲ್ಲಿ ಸಕ್ರಿಯರಾಗಿದ್ದ ನಕ್ಸಲರು ಸಿಎಂ ಗೃಹ ಕಚೇರಿ ಕೃಷ್ಣಾದಲ್ಲಿ ಶರಣಾಗತಿ

**3** ಶರಣಾಗತರಾದ ಮಾವೋವಾದಿಗಳನ್ನು ಭೇಟಿ ಮಾಡಲು ಬೆಂಗಳೂರಿಗೆ ಆಗಮಿಸಿರುವ ಅವರ ಕುಟುಂಬದ ಸದಸ್ಯರು



### ಮುಂದಿನ ಪ್ರಕ್ರಿಯೆ ಏನು..?


ಶರಣಾಗತರಾದ ನಕ್ಸಲರ ವಿರುದ್ಧ ಇರುವ ಘೋರ ಅಪರಾಧಗಳ ಕಾನೂನು ಪ್ರಕ್ರಿಯೆ ನ್ಯಾಯಾಲಯದಲ್ಲಿ ಮುಂದುವರಿಯುತ್ತವೆ. ರಾಜ್ಯ ಸರ್ಕಾರವು ಸರಿಯಾದ ಕಾರ್ಯ ವಿಧಾನಗಳ ಮೂಲಕ ಶರಣಾದ ನಕ್ಸಲರ ವಿರುದ್ಧ ಬಾಕಿ ಇರುವ ಪ್ರಕರಣಗಳನ್ನು ಹಿಂಪಡೆಯಲು ಪರಿಗಣಿಸಬಹುದು. ಶರಣಾದ ನಕ್ಸಲರಿಗೆ ಉಚಿತ ಕಾನೂನು ಸಹಕಾರ ನೀಡಲು ವಕೀಲರನ್ನು ಒದಗಿಸಬಹುದು. ಅಲ್ಲದೆ ತ್ವರಿತ ವಿಚಾರಣೆಗಾಗಿ ತ್ವರಿತಗತಿ ನ್ಯಾಯಾಲಯ ರಚನೆ ಮಾಡಲು ಸರ್ಕಾರಕ್ಕೆ ಅವಕಾಶ ಇದೆ.

**ಆರ್ಥಿಕ ನೆರವು**

'ಕರ್ನಾಟಕದ ಎಲ್ಲಾ ನಕ್ಸಲೀಯರು ಸಂಪೂರ್ಣವಾಗಿ ಶರಣಾಗತರಾಗಿ ಮುಖ್ಯವಾಹಿನಿಗೆ ಬರಲು ನಮ್ಮ ಸರ್ಕಾರವು ಬಯಸುತ್ತದೆ. ನಕ್ಸಲೀಯರು ಮುಖ್ಯವಾಹಿನಿಗೆ ಬರಲು ಮುಂದಾದ್ದಲ್ಲಿ ಶರಣಾಗತಿ ಕುರಿತು ಈಗಾಗಲೇ ಸರ್ಕಾರವು ನೀತಿಯನ್ನು ರೂಪಿಸಿದ್ದು, ಈ ನೀತಿಯನ್ನು ಸರಳೀಕರಣಗೊಳಿಸಿ, ಸಮರ್ಪಕವಾಗಿ ಜಾರಿ ಮಾಡಲಾಗುವುದೆಂದು ಭರವಸೆ ನೀಡುತ್ತೇನೆ. ನಕ್ಸಲೀಯರ ಶರಣಾಗತಿ ನೀತಿಯನ್ವಯ ಹಂತ ಹಂತವಾಗಿ ಆರ್ಥಿಕ ನೆರವು ನೀಡಲಾಗುವುದು ಹಾಗೂ ಆಯುಧಗಳನ್ನು ಸರ್ಕಾರಕ್ಕೆ ಅದ್ಯಾರ್ಪಣೆ ಮಾಡುವ ನಕ್ಸಲೀಯರಿಗೆ ಪ್ರೋತ್ಸಾಹ ಧನ, ಕೌಶಲ್ಯ ತರಬೇತಿಗಳು ನೀಡುವುದಲ್ಲದೆ ಅವರ ಪುನರ್ವಸತಿಗೂ ಸಹ ಎಲ್ಲಾ ಕ್ರಮಗಳನ್ನು ಸಹಾನುಭೂತಿಯಿಂದ ಹಾಗೂ ಆದ್ಯತೆ ಮೇರೆಗೆ ಪರಿಗಣಿಸಲು ಕ್ರಮವಹಿಸಲಾಗುವುದು' ಎಂದು ಭರವಸೆ ನೀಡಿದ್ದರು.

## ಸಿಎಂ ಸಿದ್ದರಾಮಯ್ಯಗೆ ಕುರ್ಚಿಗೆ ಕಂಟಕದ ಆತಂಕ

• ಉದಯವಾಹಿನಿ, ಬೆಂಗಳೂರು



ಕಾಂಗ್ರೆಸ್ ಆಡಳಿತದಲ್ಲಿ ಭ್ರಷ್ಟಾಚಾರ ಮಿತಿ ಮೀರಿದೆ. ನಿಯಂತ್ರಿಸಲು ಮುಂದಾದರೆ ತಮ್ಮ ಕುರ್ಚಿಗೆ ಧಕ್ಕೆಯಾಗುತ್ತದೆ ಎಂಬ ಆತಂಕದಲ್ಲಿ ಸಿಎಂ ಸಿದ್ದರಾಮಯ್ಯ ಇದ್ದಾರೆ ಎಂದು ಮಾಜಿ ಸಿಎಂ, ಸಂಸದ ಬಸವರಾಜ್ ಬೊಮ್ಮಾಯಿ ವಾಗ್ದಾಳಿ ನಡೆಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಬಸವರಾಜ್ ಬೊಮ್ಮಾಯಿ, ಈ ಸರ್ಕಾರ ಎಲ್ಲಾದರಲ್ಲಿ ಕಮೀಷನ್, ಭ್ರಷ್ಟಾಚಾರ ನಡೆಸುತ್ತಿದೆ.

ಇದರಿಂದ ಜನ ಹೈರಾಣಾಗಿದ್ದಾರೆ. ಅಬಕಾರಿ ಗುತ್ತಿಗೆದಾರರು, ಪಿಡಬ್ಲ್ಯುಡಿ, ನೀರಾವರಿ ಇಲಾಖೆಯ ಗುತ್ತಿಗೆದಾರರು ಅನುಭವಿಸುತ್ತಿದ್ದಾರೆ. ಜನ ಸಾಮಾನ್ಯರು ರೋಸಿ ಹೋಗಿದ್ದಾರೆ. ಮಧ್ಯಮ ವರ್ಗದವರು ಹೈರಾಣಾಗಿದ್ದಾರೆ. ಗ್ರಾಮೀಣ ಹಾಗೂ ನಗರ ಪ್ರದೇಶದಲ್ಲಿ ಒಂದು ಸೈಟ್ ತೆಗೆದುಕೊಳ್ಳಲಾಗದ ವಾತಾವರಣವನ್ನು ಸರ್ಕಾರ ನಿರ್ಮಾಣ ಮಾಡಿದೆ. ಎಸ್‌ಸಿ, ಎಸ್ಟಿ ಬೋರ್ ವೆಲ್ ಗಳಿಗೂ ಕಮೀಷನ್ ಪಡೆಯುತ್ತಿದ್ದಾರೆ. ಭ್ರಷ್ಟಾಚಾರ ಪದೇ ಪದೇ ಮುನ್ನೆಲೆಗೆ ಬರುತ್ತಿದೆ ಎಂದರು.

ಭ್ರಷ್ಟಾಚಾರವನ್ನು ಸಿಎಂ ನಿರಾಕರಿಸಿರಬಹುದು, ಅವರಿಗೆ ಹಿಡಿತ ಕೈ ತಪ್ಪಿರಬಹುದು, ಅವರೇ ಭಾಗಿಯಾಗಿರಬಹುದು ಅಥವಾ ಅದರ ಬಗ್ಗೆ ಮಾತನಾಡಿದರೆ ಅಧಿಕಾರಕ್ಕೆ ಧಕ್ಕೆ ಬರುತ್ತದೆ ಎನ್ನುವ ಭಾವನೆ ಮೂಡಿದೆ. ಸರ್ಕಾರದಲ್ಲಿ ಒಂದೊಂದು ಇಲಾಖೆಯಲ್ಲಿ ಒಂದೊಂದು ರೀತಿಯ ಪರ್ಸೆಂಟ್ ಕಮೀಷನ್ ಇದೆ. ಇಷ್ಟೇ ಇದೆ ಅಂತ ಹೇಳಲು ಆಗುವುದಿಲ್ಲ. ಭ್ರಷ್ಟಾಚಾರ ಮಿತಿಮೀರಿದೆ ಎಂದು ಹೇಳಿದರು.

ಕಾಂಗ್ರೆಸ್ ನಲ್ಲಿ ಡಿನ್ನರ್ ಮೀಟಿಂಗ್ ಗಳು ಅವರ ಆಂತರಿಕ ವಿಚಾರ, ಈ ಬಗ್ಗೆ ಹೆಚ್ಚು ವಿಶ್ಲೇಷಣೆ ಮಾಡುವುದಿಲ್ಲ. ಆದರೆ, ಆಡಳಿತ ಯಂತ್ರ ಕುಸಿದಿದೆ.

ಇದರಿಂದ ಸಾಮಾನ್ಯ ಜನರು ತೊಂದರೆ ಅನುಭವಿಸುವಂತಾಗಿದೆ. ತಾಯಂದಿರು ಸಾಯುತ್ತಿದ್ದಾರೆ. ಶಾಲಾ ಮಕ್ಕಳಿಗೆ ಮಧ್ಯಾಹ್ನದ ಬಿಸಿಯೂಟ ಸರಿಯಾಗಿ ದೊರೆಯುತ್ತಿಲ್ಲ. ಅಂಗನಾವಡಿ ಕಾರ್ಯಕರ್ತರು ಸರಿಯಾಗಿ ಗೌರವಧನ ಪಡೆಯುತ್ತಿಲ್ಲ. ನಾವು ಪ್ರತಿಪಕ್ಷವಾಗಿ ಜನರ ಸಮಸ್ಯೆಗಳಿಗೆ ಸ್ಪಂದಿಸುವ ಕೆಲಸ ಮಾಡುತ್ತೇವೆ ಎಂದು ಹೇಳಿದರು.

# ನಿತಿನ್ ಗಡ್ಕರಿ ಭೇಟಿಯಾಗಿ ರಾಜ್ಯ ಹೆದ್ದಾರಿ ಯೋಜನೆಗಳ ಬಗ್ಗೆ ಹೆಚ್‌ಡಿಕೆ ಚರ್ಚೆ

**● ಬೈಪಾಸ್ ರಸ್ತೆ ಸಂಪೂರ್ಣವಾಗಿ ಹಾಳಾಗಿದ್ದು, ಹಳ್ಳದಿಣ್ಣೆ ಬಿದ್ದು ವಾಹನ ಸವಾರರಿಗೆ ಬಹಳಷ್ಟು ತೊಂದರೆ**

• ಉದಯವಾಹಿನಿ, ನವದೆಹಲಿ

ರಾಜ್ಯದ ವಿವಿಧ ಹೆದ್ದಾರಿ ಯೋಜನೆಗಳ ಬಗ್ಗೆ ಕೇಂದ್ರ ಹೆದ್ದಾರಿ ಮತ್ತು ಭೂಸಾರಿಗೆ ಖಾತೆ ಸಚಿವ ನಿತಿನ್ ಗಡ್ಕರಿ ಅವರನ್ನು ಭೇಟಿಯಾಗಿ ಚರ್ಚೆ ನಡೆಸಿದ ಬೃಹತ್ ಕೈಗಾರಿಕೆ ಮತ್ತು ಉಕ್ಕು ಸಚಿವ ಹೆಚ್.ಡಿ ಕುಮಾರಸ್ವಾಮಿಯವರು ಹಲವಾರು ಮನವಿಗಳನ್ನು ಸಲ್ಲಿಸಿ ಆದಷ್ಟು ಬೇಗ ಕ್ರಮ ವಹಿಸುವಂತೆ ಕೋರಿದರು. ನವದೆಹಲಿಯಲ್ಲಿ ಬುಧವಾರ ಬೆಳಗ್ಗೆ ನಿತಿನ್ ಗಡ್ಕರಿ ಅವರನ್ನು ಅವರ ನಿವಾಸದಲ್ಲಿ ಭೇಟಿಯಾದ ಕುಮಾರಸ್ವಾಮಿಯವರು ರಾಜ್ಯದಲ್ಲಿ ಹಲವಾರು ಹೆದ್ದಾರಿ ಯೋಜನೆಗಳ ಅಭಿವೃದ್ಧಿ ಆಗಬೇಕಿದ್ದು, ಆ ಬಗ್ಗೆ ಕ್ರಮ ವಹಿಸಬೇಕು ಎಂದು 10ಕ್ಕೂ ಹೆಚ್ಚು ಯೋಜನೆಗಳ ಮನವಿ ಪತ್ರಗಳನ್ನು ಸಲ್ಲಿಸಿದರು. ಈ ಪೈಕಿ ಕೆಲ ಯೋಜನೆಗಳ ಬಗ್ಗೆ ತಕ್ಷಣವೇ ಖುದ್ದಾಗಿ ಗಮನ ಹರಿಸುವುದಾಗಿ ಗಡ್ಕರಿ ಭರವಸೆ ನೀಡಿದರು.

**ಮಂಡ್ಯದ ಹೊರ ವರ್ತುಲ ರಸ್ತೆ:** ಮಂಡ್ಯ ಹೆದ್ದಾರಿಯ ಬೈಪಾಸ್ ರಸ್ತೆ, ಅಗಲೀಕರಣ ಮಾಡುವುದು, ಅದರ ವೈಟ್ ಟ್ಯಾಪಿಂಗ್ ಹಾಗೂ ಎನ್‌ಎಚ್-275ರಲ್ಲಿರುವ ಮಂಡ್ಯ ನಗರದ ಎಲ್ಲಾ ಜಂಕ್ಷನ್ ಗಳು, ಪಾದಚಾರಿ ಮಾರ್ಗಗಳನ್ನೂ ಅಭಿವೃದ್ಧಿ ಮಾಡಬೇಕು ಅಲ್ಲದೇ ಮಂಡ್ಯ ಹೆದ್ದಾರಿಯ ಬೈಪಾಸ್ ರಸ್ತೆ ಸಂಪೂರ್ಣವಾಗಿ ಹಾಳಾಗಿದ್ದು, ಹಳ್ಳದಿಣ್ಣೆ ಬಿದ್ದು ವಾಹನ ಸವಾರರಿಗೆ ಬಹಳಷ್ಟು ತೊಂದರೆ ಆಗಿದೆ. ರಾತ್ರಿ ಸಮಯದಲ್ಲಿ ಈ ರಸ್ತೆಯಲ್ಲಿ ಸಂಚಾರ ಮಾಡುವುದು ಅಪಾಯಕಾರಿ ಆಗಿದೆ ಎಂದು ಎಂದು ಗಡ್ಕರಿ ಅವರಿಗೆ ಹೆಚ್‌ಡಿಕೆ ಮನವರಿಕೆ ಮಾಡಿಕೊಟ್ಟರು. ಜೇವರ್ಗಿ- ಚಾಮರಾಜನಗರ ರಾಷ್ಟ್ರೀಯ ಹೆದ್ದಾರಿ (ಎನ್‌ಎಚ್-150ಎ) ಯಲ್ಲಿನ ಪಾಂಡವಪುರ ಪಟ್ಟಣ, ಕಿರಂಗೂರು ಬಳಿಯ ಹೆದ್ದಾರಿ ಅಭಿವೃದ್ಧಿ ಮಾಡುವ ಬಗ್ಗೆಯೂ ಸಚಿವರು ಗಡ್ಕರಿ ಅವರೊಂದಿಗೆ ಚರ್ಚೆ ನಡೆಸಿದರು.

ಇನ್ನು ಆಂಧ್ರ ಪ್ರದೇಶದ ಕುಪ್ಪಂ- ಬಂಗಾರಪೇಟೆ- ಕೋಲಾರ -ಚಿಂತಾಮಣಿ; ಚಿಂತಾಮಣಿಯ ಗಜಾನನ ಸಂಪರ್ಕ ಕಲ್ಪಿಸುವ ಎನ್‌ಎಚ್-69, ಎನ್‌ಎಚ್-42ರಿಂದ ಹೊಸಕೋಟೆ -ಗೌನಿಪಲ್ಲಿ- ಶ್ರೀನಿವಾಸಪುರ ಮೂಲಕ ಎನ್‌ಎಚ್-75ಕ್ಕೆ ಸಂಪರ್ಕ ಕಲ್ಪಿಸುವ ಹೆದ್ದಾರಿ ಯೋಜನೆಗಳ ಬಗ್ಗೆಯೂ ಸಚಿವರು ಸಾರಿಗೆ ಸಚಿವರ ಗಮನ ಸೆಳೆದರು.



**10ಕ್ಕೂ ಹೆಚ್ಚು ಯೋಜನೆಗಳ ಮನವಿ ಪತ್ರ**

### ಅಭಿವೃದ್ಧಿ ಬಗ್ಗೆ ಸಮಾಲೋಚನೆ

ಮಂಡ್ಯ, ಕೋಲಾರ, ಚಿಕ್ಕಬಳ್ಳಾಪುರ, ಚಾಮರಾಜನಗರ, ಮೈಸೂರು ಮುಂತಾದ ಜಿಲ್ಲೆಗಳ ಹೆದ್ದಾರಿಗಳ ಅಭಿವೃದ್ಧಿ ಬಗ್ಗೆ ಸಾರಿಗೆ ಸಚಿವರ ಜೊತೆ ಕುಮಾರಸ್ವಾಮಿ ಅವರು ಸಮಾಲೋಚನೆ ನಡೆಸಿದರು. ನಮ್ಮ ಮನವಿಗೆ ಅತ್ಯಂತ ಸಕಾರಾತ್ಮಕವಾಗಿ ಸ್ಪಂದಿಸಿದ ಮಾನ್ಯ ಸಾರಿಗೆ ಸಚಿವರು, ಎಲ್ಲಾ ಯೋಜನೆಗಳ ಬಗ್ಗೆ ಖುದ್ದು ಗಮನ ಹರಿಸುವುದಾಗಿ ಗಡ್ಕರಿ ಅವರು ಭರವಸೆ ನೀಡಿದರು ಎಂಬುದಾಗಿ ಹೆಚ್ ಡಿಕೆ ತಿಳಿಸಿದ್ದಾರೆ.

### ಮಹಾ ಕುಂಭಮೇಳಕ್ಕೆ ಕೇಂದ್ರ ಸಚಿವ ಹೆಚ್ಡಿಕೆಗೆ ಆಹ್ವಾನ



ತ್ರಿವೇಣಿ ಸಂಗಮ ಸ್ಥಳ ಪ್ರಯಾಗ್ ರಾಜ್ ನಲ್ಲಿ ನಡೆಯಲಿರುವ ಕುಂಭಮೇಳದಲ್ಲಿ ಭಾಗಿಯಾಗುವಂತೆ ಉತ್ತರಪ್ರದೇಶದ ಹಣಕಾಸು ಸಚಿವ ಸುರೇಶ್ ಖನ್ನಾ ಅವರು ಕೇಂದ್ರದ ಬೃಹತ್ ಕೈಗಾರಿಕೆ ಹಾಗೂ ಉಕ್ಕು ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರಿಗೆ ಆಹ್ವಾನ ನೀಡಿದ್ದಾರೆ. ಗಂಗಾ ಜಲದ ಜತೆಯಲ್ಲಿ ಆಹ್ವಾನ ಪತ್ರಿಕೆ ನೀಡಿದರು. ಭಾರತದ ಅತಿದೊಡ್ಡ ಧಾರ್ಮಿಕ ಕಾರ್ಯಕ್ರಮ ಆಗಿರುವ ಕುಂಭಮೇಳದಲ್ಲಿ ತಪ್ಪದೇ ಪಾಲ್ಗೊಳ್ಳುವುದಾಗಿ ಕುಮಾರಸ್ವಾಮಿ ಅವರು ಸಚಿವ ಖನ್ನಾ ಅವರಿಗೆ ತಿಳಿಸಿದರು. ಕುಂಭಮೇಳದಲ್ಲಿ ಪಾಲ್ಗೊಳ್ಳುವುದು ನಿಜಕ್ಕೂ ಸಂತೋಷದ ಸಂಗತಿ. ಅದರಲ್ಲಿಯೂ ಮೂರು ಪುಣ್ಯನದಿಗಳು ಸಂಗಮವಾಗುವ ಪುಣ್ಯಸ್ಥಳದಲ್ಲಿ ತಾಯಿ ಗಂಗೆಯ ಅನುಗ್ರಹಕ್ಕೆ ಪಾತ್ರವಾಗಲು ತಾವು ಕಾತುರದಿಂದ ಕಾಯುತ್ತಿರುವುದಾಗಿ ಕೇಂದ್ರ ಸಚಿವರು ಹೇಳಿದರು. ಕುಂಭಮೇಳ ದೊಡ್ಡ ಪ್ರಮಾಣದಲ್ಲಿ ಯಶಸ್ವಿ ಆಗಲಿ. ಭಾರತೀಯ ಸನಾತನ ಪರಂಪರೆಯ ಅನನ್ಯ ಪ್ರತೀಕವಾಗಿರುವ ಕುಂಭಮೇಳ ಯಶಸ್ವಿ ಆಗಲಿ ಎಂದು ಕುಮಾರಸ್ವಾಮಿ ಅವರು ಶುಭ ಹಾರೈಸಿದರು.

**ಈ ದಿನದ ದರ** ಪೆಟ್ರೋಲ್: 103.50 ₹/L | ಡೀಸೆಲ್ : 90.03 ₹/L | ಬಂಗಾರ: ₹7,882/Gram24ct ₹7,225/Gram22ct | ಬೆಳ್ಳಿ: ₹92.50/Gram



## ಸಿದ್ಧಸೂಕ್ತಿ

ಡಾ ಆರೂಢಭಾರತೀ ಸ್ವಾಮೀಜಿ
ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ
ರಾಮೋಹಳ್ಳಿ

## ಕಲ್ಲೇ ದೇವರಲ್ಲ

ಸಿದ್ಧಾರೂಢ ಸ್ವಾಮಿಗಳು ಏಳು-ಎಂಟನೇ ವಯಸ್ಸಿನಲ್ಲಿ ಆಧ್ಯಾತ್ಮಿಕ ಗುರುಗಳನ್ನು ಹುಡುಕಿಕೊಂಡು ಮನೆ ತೊರೆದು ಹೊರಟರು. ಮಿತ್ರರಾದ ಸೋಮ ಭೀಮ ಇಬ್ಬರೂ ಜೊತೆಗೂಡಿದರು. ಒಂದು ರಾತ್ರಿ ಸದಾಶಿವಪೇಟೆಯ ಒಂದು ಶಿವದೇವಾಲಯದಲ್ಲಿ ಉಳಿದರು. ಮಾರನೇ ದಿನ ಬೆಳಿಗ್ಗೆ ಸಿದ್ಧಾರೂಢರು ಅಲ್ಲಿನ ಬಸವಣ್ಣನ ಮೂರ್ತಿಯ ಮೇಲೆ ಕುಳಿತರು. ಅರ್ಚಕ ಬಂದು ನೋಡಿ ಸಿಟ್ಟಾಗಿ ನಿನ್ನ ಭಯ ಭಕ್ತಿ ಎಲ್ಲಿಟ್ಟೆ ಎಂದ. ಬಾಲ ಸಿದ್ಧ ನಾನು ದೇವರಲ್ಲಿಟ್ಟಿರುವೆ, ನೀನು ಕಲ್ಲಿನಲ್ಲಿಟ್ಟಿರುವಿ ಎಂದ. ಆತ ತಕ್ಕ ಶಾಸ್ತಿ ಮಾಡುವೆ ಎನ್ನುತ್ತಾ ಊರೊಳಗೆ ಹೋಗಿ ಜನರನ್ನು ಕರೆತಂದ. ಅವರೊಳಗೊಬ್ಬ ಸಿದ್ಧನನ್ನು ಹೊಡೆಯಲು ಮುಂದಾದ. ಗೋಡೆಯೊಳಗಿನ ಮೊಳೆ ತಗುಲಿ ರಕ್ತ ಸುರಿಯಿತು. ಭಯ ಭೀತರಾದ ಜನ ಈಗ ವಿನಯಪೂರ್ವಕ ಕೇಳಿದರು: ದೇವರ ಮೇಲೇಕೆ ಕುಳಿತಿರುವಿ? ಕೆಳಗಿಳಿ ಎಂದರು. ಆಗ ಸಿದ್ಧ ಹೇಳಿದ ಇದು ಮೊದಲು ಕಲ್ಲು. ಶಿಲ್ಪಿಯಿಂದ ಮೂರ್ತಿ. ಮಹಾತ್ಮರಿಂದ ಪ್ರಾಣ ಪ್ರತಿಷ್ಠೆಯಿಂದ ದೇವರು. ಲೌಕಿಕ ಜನ ಲೌಕಿಕ ಹರಕೆಯಿಂದ ಇದರ ದೇವತಾಶಕ್ತಿ ಕ್ಷೀಣವಾಗಿ ಶಿಲಾಮಾತ್ರವಾಗಿ ಉಳಿದಿದೆ. ಮತ್ತೆ ಪ್ರಾಣ ಪ್ರತಿಷ್ಠಾಪನೆ ಮಾಡಲು ಇದರ ಮೇಲೆ ಕುಳಿತಿರುವೆ ಎಂದು. ಕಲ್ಲು ದೇವರೆಂದು ಪೂಜೆ ಮಾಡುವುದು ತಪ್ಪಲ್ಲ, ಕಲ್ಲೇ ದೇವರನ್ನುವುದು ತಪ್ಪು. ಚೈತನ್ಯ ದೇವರು. ಅರಿವು ದೇವರು. ಗುರು ದೇವರು.

# ರಾಜ್ಯದ ಜನತೆಗೆ ಎಂಎಸ್ಐಎಲ್ ಟೂರ್ ಪ್ಯಾಕೇಜ್ ಆರಂಭ

## ಬೃಹತ್, ಮಧ್ಯಮ ಕೈಗಾರಿಕಾ ಎಂ ಬಿ ಪಾಟೀಲ ಚಾಲನೆ, ಡೈರಿ, ಕ್ಯಾಲೆಂಡರ್, ಬಾಂಡ್ ಜೆರಾಕ್ಸ್ ಪೇಪರ್ ಕೂಡ ಬಿಡುಗಡೆ

• ಉದಯವಾಹಿನಿ ಬೆಂಗಳೂರು

ಮಧ್ಯಮ ಮತ್ತು ಕೆಳಮಧ್ಯಮ ವರ್ಗದವರು, ವಿದ್ಯಾರ್ಥಿಗಳು, ಹಿರಿಯ ನಾಗರಿಕರು ಮತ್ತು ಸರಕಾರಿ ನೌಕರರನ್ನು ಗಮನದಲ್ಲಿಟ್ಟುಕೊಂಡು ಸರಕಾರಿ ಸ್ವಾಮ್ಯದ ಎಂಎಸ್ ಐಎಲ್ ಸಂಸ್ಥೆ ರೂಪಿಸಿರುವ ನಾನಾ ತರಹದ ಆಕರ್ಷಕ ಟೂರ್ ಪ್ಯಾಕೇಜುಗಳಿಗೆ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ ಬಿ ಪಾಟೀಲ ಬುಧವಾರ ಚಾಲನೆ ನೀಡಿದರು. ಇದೇ ಸಂದರ್ಭದಲ್ಲಿ ಅವರು ಸಂಸ್ಥೆಯ ಡೈರಿ, ಕ್ಯಾಲೆಂಡರ್ ಮತ್ತು ಬಾಂಡ್ ಜೆರಾಕ್ಸ್ ಪೇಪರ್ ಕೂಡ ಬಿಡುಗಡೆ ಮಾಡಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, 'ಎಂಎಸ್ ಐಎಲ್ ಮೊದಲಿನಿಂದಲೂ ಗುಣಮಟ್ಟ ಮತ್ತು ವಿಶ್ವಾಸಾರ್ಹತೆಗೆ ಹೆಸರಾಗಿದೆ.

ಈಗ ಟೂರ್ ಪ್ಯಾಕೇಜುಗಳ ಮೂಲಕ ಸಂಸ್ಥೆಯು ಜನರಿಗೆ ಮತ್ತಷ್ಟು ಹತ್ತಿರವಾಗುತ್ತಿದೆ. ಈ ಪ್ಯಾಕೇಜುಗಳ ಅಡಿಯಲ್ಲಿ ಈ ವರ್ಷದ ಸೆಪ್ಟೆಂಬರ್ ತಿಂಗಳಲ್ಲಿ ಆದಿಕೈಲಾಸ ಮತ್ತು ವಾರಣಾಸಿಗೆ ಪ್ರವಾಸ ಆಯೋಜಿಸಲಾಗುವುದು. ಮುಖ್ಯವಾಗಿ ನಾವು ಆಫ್-ಲೈನ್ ಪ್ರವಾಸಿಗರಿಗೆ ಆದ್ಯತೆ ಕೊಡುತ್ತಿದ್ದೇವೆ,' ಎಂದಿದ್ದಾರೆ. ಈ ಪ್ಯಾಕೇಜುಗಳಲ್ಲಿ ಸುರಕ್ಷತೆ, ಶುಚಿರುಚಿಯಾದ ಆಹಾರ, ಮನೆ ಬಾಗಿಲಿನಿಂದಲೇ



ಉದಯವಾಹಿನಿ ಚಿತ್ರ

**ಪ್ಯಾಕೇಜಿನಲ್ಲಿ ಶೇ.50ರಷ್ಟು ಹಣ ಪಾವತಿಸಿ**

ಕರೆದುಕೊಂಡು ಹೋಗಿ ವಾಪಸ್ ಅಲ್ಲಿಗೇ ಬಿಡುವುದು, ಸಹಾಯಕರ ನೆರವು, ಮಾಸಿಕ ಕಂತುಗಳಲ್ಲಿ ಹಣ ಪಾವತಿ, ಲಕ್ಕಿ ಡ್ರಾ, ಕೈಗೆಟುಕುವ ವೆಚ್ಚದಲ್ಲಿ ಉತ್ತರ ಭಾರತ ಪ್ರವಾಸ ಮುಂತಾದ ಸೌಲಭ್ಯ, ಆಕರ್ಷಣೆಗಳಿವೆ. ಗುಂಪು ಪ್ರವಾಸ ಮಾಡಲು ಬಯಸುವವರಿಗೆ ಪ್ರತಿ ಬ್ಯಾಚಿನಲ್ಲಿ ಗರಿಷ್ಠ 100 ಮಂದಿಗೆ ಅವಕಾಶ ಇರಲಿದೆ ಎಂದು ಅವರು ಮಾಹಿತಿ ನೀಡಿದ್ದಾರೆ.

ಇದಲ್ಲದೆ ಶಾಲಾ ಕಾಲೇಜು ವಿದ್ಯಾರ್ಥಿಗಳಿಗೆಂದು 'ಸ್ಟಡಿ-ಕಂ-ಪ್ರೆಷರ್ ಟೂರ್), ಇಕೋ ಟೂರಿಸಂ ಮತ್ತು ಕರಾವಳಿ ಪ್ರದೇಶಗಳ ವೀಕ್ಷಣೆ ಇರುವ ಕೋಸ್ಟಲ್ ಟೂರಿಸಂ ಮುಂತಾದ ಪ್ಯಾಕೇಜುಗಳನ್ನು ರೂಪಿಸಲು ಎಂಎಸ್ ಐಎಲ್ ಚಿಂತಿಸುತ್ತಿದೆ. ಸಂಸ್ಥೆಯು ಸದ್ಯಕ್ಕೆ ರೂಪಿಸಿರುವ ಪ್ಯಾಕೇಜಿನಲ್ಲಿ ಕೇವಲ 20 ಸಾವಿರ ರೂ. ವೆಚ್ಚದಲ್ಲಿ 15ರಿಂದ 18 ದಿನಗಳ ಉತ್ತರ ಭಾರತ ಪ್ರವಾಸ ಮಾಡಿಕೊಂಡು ಬರಬಹುದು ಎಂದು ಅವರು ವಿವರಿಸಿದ್ದಾರೆ. ಸರಕಾರಿ ಉದ್ಯೋಗಿಗಳನ್ನು ಗಮನದಲ್ಲಿ ಇಟ್ಟುಕೊಂಡು ಮಾಡಿರುವ ಪ್ಯಾಕೇಜಿನಲ್ಲಿ ಮೊದಲು ಶೇ.50ರಷ್ಟು ಹಣ ಪಾವತಿಸಿ, ಪ್ರವಾಸ ಕೈಗೊಳ್ಳಬಹುದು.

ಪ್ರವಾಸ ಮುಗಿಸಿಕೊಂಡು ಬಂದ ಬಳಿಕ ಉಳಿದ ಶೇ.50 ರಷ್ಟು ಹಣವನ್ನು ಮಾಸಿಕ ಕಂತುಗಳಲ್ಲಿ ಕಟ್ಟಬಹುದು. ಹಾಗೆಯೇ ಲಕ್ಕಿ ಡ್ರಾದಲ್ಲಿ ವಿಜೇತರಾಗುವ ಅದೃಷ್ಟಶಾಲಿಗಳು ಡ್ರಾ ನಂತರದ ಹಣವನ್ನು ಪಾವತಿಸಬೇಕಾಗಿಲ್ಲ. ಈ ಎಲ್ಲಾ ಪ್ಯಾಕೇಜುಗಳಲ್ಲೂ ಎಂಎಸ್ ಐಎಲ್ ವತಿಯಿಂದ ಟೂರ್ ಮ್ಯಾನೇಜರ್ ಅಥವಾ ಸಹಾಯಕರೊಬ್ಬರು ಜತೆಗಿರಲಿದ್ದು, ಪ್ರವಾಸಿಗರ ಬೇಕು-ಬೇಡಗಳನ್ನು ಆಲಿಸಿ, ನೆರವು ನೀಡಲಿದ್ದಾರೆ ಎಂದು ಅವರು ನುಡಿದಿದ್ದಾರೆ. ಕಾರ್ಯಕ್ರಮದಲ್ಲಿ ಎಂಎಸ್ ಐಎಲ್ ಅಧ್ಯಕ್ಷ ಪುಟ್ಟರಂಗಶೆಟ್ಟಿ, ಕೈಗಾರಿಕಾ ಇಲಾಖೆ ಪ್ರಧಾನ ಕಾರ್ಯದರ್ಶಿ ಸೆಲ್ವಕುಮಾರ್, ಎಂಎಸ್ಐಎಲ್ ವ್ಯವಸ್ಥಾಪಕ ನಿರ್ದೇಶಕ ಮನೋಜ್‌ಕುಮಾರ್ ವಾಣಿಜ್ಯ ಇಲಾಖೆ ಆಯುಕ್ತ ಗುಂಜನ್ ಕೃಷ್ಣ, ಎಂಎಸ್ಐಎಲ್ ನಿರ್ದೇಶಕ ಚಂದ್ರಪ್ಪ, ಪ್ರವಾಸ ವಿಭಾಗದ ಮುಖ್ಯಸ್ಥ ರವಿಕುಮಾರ್ ಮುಂತಾದವರು ಭಾಗವಹಿಸಿದ್ದರು.

> **ಎಂಎಸ್ ಐಎಲ್ ಸಂಸ್ಥೆಯ ಟೂರ್ಸ್ ಅಂಡ್ ಟ್ರಾವೆಲ್ಸ್ ವಿಭಾಗವು ಈ ಟೂರ್ ಪ್ಯಾಕೇಜುಗಳನ್ನು ನಿರ್ವಹಿಸಲಿದೆ. ಇದರಡಿಯಲ್ಲಿ ಕಾಶಿ, ಅಯೋಧ್ಯೆ, ಪುರಿ, ಆದಿ ಕೈಲಾಸ ಮುಂತಾದ ಧಾರ್ಮಿಕ ಮತ್ತು ಐತಿಹಾಸಿಕ ತಾಣಗಳಿಗೆ ಪ್ರವಾಸಿಗರನ್ನು ಅದು ಕರೆದೊಯ್ಯಲಿದೆ. ಜೊತೆಗೆ ದುಬೈ, ಸಿಂಗಪುರ್, ವಿಯಟ್ನಾಂ, ಶ್ರೀಲಂಕಾ, ನೇಪಾಳ, ಥಾಯ್ಲೆಂಡ್ ಮತ್ತು ಯೂರೋಪಿನ ಹಲವು ದೇಶಗಳಿಗೂ ಎಂಎಸ್ ಐಎಲ್ ಟೂರ್ ಪ್ಯಾಕೇಜುಗಳನ್ನು ರೂಪಿಸಿದೆ.**

> **ಪ್ರವಾಸಿಗರಿಗೆ ಆದಷ್ಟು ಕಡಿಮೆ ವೆಚ್ಚದಲ್ಲಿ ಪ್ರೇಕ್ಷಣೀಯ ಸ್ಥಳಗಳ ವೀಕ್ಷಣೆ ಸಾಧ್ಯವಾಗಬೇಕು ಎನ್ನುವ ಆಶಯದೊಂದಿಗೆ ಎಂಎಸ್ ಐಎಲ್ ಮೂಲಕ ಈ ಹೆಜ್ಜೆ ಇಡಲಾಗುತ್ತಿದೆ. ಖಾಸಗಿ ಸಂಸ್ಥೆಗಳ ದರಕ್ಕೆ ಹೋಲಿಸಿದರೆ ನಾವು ನಿಗದಿ ಪಡಿಸಿರುವ ದರ ತುಂಬಾ ಕಡಿಮೆ ಇದೆ. ಹಾಗೆಯೇ ಪ್ರತಿಯೊಂದು ಸೇವೆಯನ್ನೂ ಗುಣಮಟ್ಟದೊಂದಿಗೆ ಒದಗಿಸಲಾಗುವುದು ಎಂದು ಪಾಟೀಲ ಹೇಳಿದ್ದಾರೆ.**
> ಕೈಗಾರಿಕಾ ಸಚಿವ ಎಂ ಬಿ ಪಾಟೀಲ

## ರಾಜ್ಯದ ಪ್ರೌಢಶಾಲಾ ಶಿಕ್ಷಕಿಯರಿಗೆ ಶಿಶುಪಾಲನಾ ರಜೆ ಸೌಲಭ್ಯ

• ಉದಯವಾಹಿನಿ ಬೆಂಗಳೂರು

ರಾಜ್ಯದ ಪ್ರೌಢಶಾಲಾ ಶಿಕ್ಷಕಿಯರಿಗೆ ಶಿಶುಪಾಲನಾ ರಜೆ ಸೌಲಭ್ಯ ಕಲ್ಪಿಸುವ ಕುರಿತು ಶಿಕ್ಷಣ ಇಲಾಖೆ ಮಹತ್ವದ ಆದೇಶ ಹೊರಡಿಸಿದೆ.ಏನಿದೆ ಆದೇಶದಲ್ಲಿ...? ಕರ್ನಾಟಕ ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಉಲ್ಲೇಖಿತ ದಿನಾಂಕ: 22.01.2024 ರ ಸರ್ಕಾರದ ಪತ್ರದಲ್ಲಿ ಅನುದಾನಿತ ಪ್ರೌಢ ಶಾಲಾ ಮಹಿಳಾ ನೌಕರರಿಗೆ ಶಿಶುಪಾಲನಾ ರಜೆ ಸೌಲಭ್ಯವನ್ನು ವಿಸ್ತರಿಸಿದಲ್ಲಿ ಆಡಳಿತಾತ್ಮಕವಾಗಿ ಹಾಗೂ ವಿದ್ಯಾರ್ಥಿಗಳ ಶಿಕ್ಷಣಕ ತೊಂದರೆಯಾಗದಂತೆ ರಜೆ ಸೌಲಭ್ಯವನ್ನು ವಿಸ್ತರಿಸಲು ಪರ್ಯಾಯ ವ್ಯವಸ್ಥೆಯನ್ನು ಸಂಬಂಧಿಸಿದ ಆಯಾ ಶಿಕ್ಷಣ ಸಂಸ್ಥೆಯ ಆಡಳಿತ ಮಂಡಳಿಯವರೇ ಸ್ವಂತ ಸಂಪನ್ಮೂಲದಿಂದಲೇ ಒದಗಿಸಿಕೊಂಡು ಅನುದಾನಿತ ಶಾಲಾ ಮಹಿಳಾ ನೌಕರರಿಗೆ ಶಿಶುವಾಲನೆ ರಜೆ ಮಂಜೂರು ಮಾಡುವ ಬಗ್ಗೆ ಕ್ರಮ ವಹಿಸುವಂತೆ ತಿಳಿಸಲಾಗಿದೆ.

## ಗುತ್ತಿಗೆದಾರರ ಸಂಘದ ವತಿಯಿಂದ ಕಂಟ್ರಾಕ್ಟರ್ಸ್ ಡೈರಿ ಬಿಡುಗಡೆ

• ಉದಯವಾಹಿನಿ ಬೆಂಗಳೂರು

ಕರ್ನಾಟಕ ಲಾನ್ ಟೆನಿಸ್ ಅಸೋಸಿಯನ್ ನಲ್ಲಿ ಬಿಬಿಎಂಪಿ ಕಾರ್ಯನಿರತ ಗುತ್ತಿಗೆದಾರರ ಸಂಘದ ನೂತನ ವರ್ಷದ ಕಂಟ್ರಾಕ್ಟರ್ಸ್ ಡೈರಿ-2025ರ ಬಿಡುಗಡೆ ಸಮಾರಂಭ. ಬೆಂಗಳೂರುನಗರ ವಿಶ್ವಮಾನ್ಯತೆ ಪಡೆಯಲು ಬಿಬಿಎಂಪಿ ಗುತ್ತಿಗೆದಾರರು ಕಾರಣ-ಮುಖ್ಯ ಆಯುಕ್ತ ತುಷಾರ್ ಗಿರಿನಾಥ್

ಬಿಬಿಎಂಪಿ ಮುಖ್ಯ ಆಯುಕ್ತರಾದ ತುಷಾರ್ ಗಿರಿನಾಥ್ ರವರು, ಹಣಕಾಸು ವಿಶೇಷ ಆಯುಕ್ತರಾದ ಡಾ||ಹರೀಶ್ ಕುಮಾರ್ ರವರು, ಕರ್ನಾಟಕ ರಾಜ್ಯ ಗುತ್ತಿಗೆದಾರರ ಸಂಘದ ಅಧ್ಯಕ್ಷರಾದ ಜಗನ್ನಾಥ ಶೇಗಜಿ, ಪ್ರಧಾನ ಕಾರ್ಯದರ್ಶಿ ಜಿ.ಎಂ.ರವೀಂದ್ರ, ಬಿಬಿಎಂಪಿ ಕಾರ್ಯನಿರತ ಗುತ್ತಿಗೆದಾರರ ಸಂಘದ ಅಧ್ಯಕ್ಷರಾದ ಕೆ.ಟಿ.ಮಂಜುನಾಥ್ ರವರು ಕಂಟ್ರಾಕ್ಟರ್ಸ್ ಡೈರಿ-2025ಅನ್ನು ಉದ್ಘಾಟನೆ ಮಾಡಿದರು. ಮುಖ್ಯ ಆಯುಕ್ತರಾದ ತುಷಾರ್ ಗಿರಿನಾಥ್ ರವರು ಮಾತನಾಡಿ ಬಿಬಿಎಂಪಿ ಮತ್ತು ಗುತ್ತಿಗೆದಾರರು ಸಮನ್ವಯತೆ ಕೆಲಸ



ಉದಯವಾಹಿನಿ ಚಿತ್ರ

**ಗುತ್ತಿಗೆದಾರರಿಗೆ ಬಿಲ್ಲು ಬಿಡುಗಡೆ**

ಮಾಡಬೇಕು ಬೆಂಗಳೂರುನಗರ ವಿಶ್ವಮಾನ್ಯತೆ ಗಳಿಸಲು ಗುತ್ತಿಗೆದಾರರು ಕಾರಣ.

ಗುತ್ತಿಗೆದಾರರಿಗೆ ಬಿಲ್ಲು ಬಿಡುಗಡೆ ಸೀನಿಯರಿಟ್ ಪಾಲಿಸಲಾಗಿದೆ, ಯಾವುದೇ ಗುತ್ತಿಗೆದಾರನಿಗೆ ಅನ್ಯಾಯವಾಗುವುದಿಲ್ಲ. ಬೆಂಗಳೂರುನಗರದಲ್ಲಿ 1ಕೋಟಿ 40ಲಕ್ಷ ಜನಸಂಖ್ಯೆ ಇದೆ , ಸಮಸ್ಯೆಗಳಿಗೆ ಶಾಶ್ವತ ಪರಿಹಾರ ಮಾಡಬೇಕು. ಗುತ್ತಿಗೆದಾರರ ಸಹಕಾರದಿಂದ ನಗರದ ನಾಗರಿಕರಿಗೆ ಉತ್ತಮ ಮೂಲಭೂತ ಸೌಲಭ್ಯ ಕಲ್ಪಿಸಲಾಗುವುದು ಎಂದು ಹೇಳಿದರು. ಉಪಾಧ್ಯಕ್ಷರಾದ ಜಿ.ವೆಂಕಟೇಶ್, ಪ್ರಧಾನ ಕಾರ್ಯದರ್ಶಿ ಟಿ.ವೆಂಕಟೇಶ್, ಖಜಾಂಚಿ ಕೆ.ಪ್ರಕಾಶ್ ಬಾಬು, ತಾಂತ್ರಿಕ ಸಲಹೆಗಾರ ಎನ್.ಮಂಜುನಾಥ್ ರವರು ಪದಾಧಿಕಾರಿಗಳು, ಸದಸ್ಯರು ಭಾಗವಹಿಸಿದ್ದರು

## ವಿದ್ಯಾರ್ಥಿನಿ ಕಿಡ್ನಾಪ್ 45 ದಿನಗಳ ನಂತರ ಸಿಕ್ಕಿಬಿದ್ದ ಆರೋಪಿ!

• ಉದಯವಾಹಿನಿ ಬೆಂಗಳೂರು

ಪ್ರೀತಿ-ಪ್ರೇಮದ ಹೆಸರಿನಲ್ಲಿ ಟ್ಯೂಷನ್ ಟೀಚರ್‌ನಿಂದಲೇ 10ನೇ ತರಗತಿ ವಿದ್ಯಾರ್ಥಿನಿ ಕಿಡ್ನಾಪ್ ಮಾಡಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಆರೋಪಿ ಶಿಕ್ಷಕನನ್ನು ಬಂದಿಸಲಾಗಿದೆ. ಅಭೀಷೇಕ್ ಗೌಡ ಬಂಧಿತ ಆರೋಪಿಯಾಗಿದ್ದು, ತನ್ನ ಮಗಳನ್ನು ಟ್ಯೂಷನ್ ಟೀಚರ್ ಕರೆದೊಯ್ದಿರುವುದಾಗಿ ತಂದೆ ನೀಡಿದ ದೂರಿನ ಮೇರೆಗೆ ಪ್ರಕರಣ ದಾಖಲಿಸಿಕೊಂಡ ಪೊಲೀಸರು, ಆರೋಪಿಯನ್ನು ಬಂಧಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದಾರೆ.

ಕಳೆದ ನ.23 ರಂದು ಎಂದಿನಂತೆ ಆರೋಪಿ ಬಳಿ ಟ್ಯೂಷನ್‌ಗೆ ವಿದ್ಯಾರ್ಥಿನಿ ಬಂದಿದ್ದಳು. ಟ್ಯೂಷನ್ ಮುಗಿದು ರಾತ್ರಿಯಾದರೂ ಮನೆಗೆ ವಾಪಸ್ ಆಗಿರಲಿಲ್ಲ. ರಾತ್ರಿ ಟ್ಯೂಷನ್ ಸೆಂಟರ್ ಬಳಿ ಹೋದಾಗ ಬಾಲಕಿಯನ್ನ ಟ್ಯೂಷನ್ ಟೀಚರ್ ಕರೆದೊಯ್ದಿರೋದು ಗೊತ್ತಾಗಿದೆ.



ಉದಯವಾಹಿನಿ ಚಿತ್ರ

ಪ್ರಕರಣದ ತನಿಖೆ ಕೈಗೆತ್ತಿಕೊಂಡ ಪೊಲೀಸರು 45 ದಿನಗಳ ಬಳಿಕ ಆರೋಪಿಯನ್ನು ಅರೆಸ್ಟ್ ಮಾಡುವಲ್ಲಿ ಯಶಸ್ವಿಯಾಗಿದ್ದಾರೆ.

ಇನ್ನೂ ಆರೋಪಿಯ ಮನೆ ಜಾಲಾಡಿದಾಗ ಉದ್ದೇಶಪೂರ್ವಕವಾಗಿ ಮೊಬೈಲ್ ಬಿಟ್ಟುಹೋಗಿರುವುದನ್ನು ಕಂಡು ಕೊಂಡಿದ್ದರು.

ಒಂದು ವರ್ಷದಿಂದ ಬಾಲಕಿಯನ್ನು ಪ್ರೀತಿಸುತ್ತಿರುವುದಾಗಿ ಹಾಗೂ ಮದುವೆಯಾಗಿರುವ ಬಗೆಗಿನ ವಿಡಿಯೋ ಮೊಬೈಲ್‌ನಲ್ಲಿ ಇರುವುದನ್ನು ಪೊಲೀಸರು ಗಮನಿಸಿದ್ದರು. ಆರೋಪಿ ಹಾಗೂ ಬಾಲಕಿ ಬಳಿ ಮೊಬೈಲ್ ಇರದ ಕಾರಣ ಆರಂಭದಲ್ಲಿ ಪೊಲೀಸರಿಗೆ ಪತ್ತೆ ಹಚ್ಚುವುದು ಕಷ್ಟವಾಗಿತ್ತು. ದಾರಿಯಲ್ಲಿ ಆರೋಪಿ ಆಕೆಯನ್ನು ಕರೆದುಕೊಂಡು ಹೋಗಿರುವ ಬಗ್ಗೆ ಸಿಸಿಟಿವಿ ಕ್ಯಾಮರಾ ಮೂಲಕ ಖಚಿತಪಡಿಸಿದ್ದರು.

> **ಪೊಲೀಸರಿಗೆ ತಾವಿರುವ ಬಗ್ಗೆ ಗೊತ್ತಾಗದಿರಲು ಆರೋಪಿ ಮನೆಯಲ್ಲೇ ಮೊಬೈಲ್ ಬಿಟ್ಟು ಹೋಗಿದ್ದ. ಅಲ್ಲದೇ ಹೋಗುವಾಗ 70 ಸಾವಿರ ರೂಪಾಯಿ ಹಣ ತೆಗೆದುಕೊಂಡಿದ್ದ ಎಂದು ಪೊಲೀಸರು ತಿಳಿಸಿದ್ದಾರೆ. ಆರೋಪಿ ಸುಳಿವು ಕೊಟ್ಟವರಿಗೆ ಬಹುಮಾನ ನೀಡುವುದಾಗಿ ಪೊಲೀಸ್ ಪ್ರಕಟಣೆಯಲ್ಲಿ ಘೋಷಿಸಲಾಗಿತ್ತು.**

## ಬೆಂಗಳೂರಿನ ನೆಹರೂ ತಾರಾಲಯದಲ್ಲಿ ಜ. 10ರಂದು ರಾತ್ರಿ ಆಕಾಶ ವೀಕ್ಷಣೆ

• ಉದಯವಾಹಿನಿ ಬೆಂಗಳೂರು

ಜ. 10ರಂದು ನೆಹರು ತಾರಾಲಯದಲ್ಲಿ ರಾತ್ರಿ ಆಕಾಶ ವೀಕ್ಷಣೆಗೆ ಅವಕಾಶ ಮಾಡಿಕೊಡಲಾಗಿದ್ದು, ಈ ರೀತಿ ಹೆಸರು ನೋಂದಾಯಿಸಿಕೊಳ್ಳಬಹುದಾಗಿದೆ. ಜನವರಿ 10ರಂದು ಜವಾಹರಲಾಲ್ ನೆಹರು ತಾರಾಲಯದಲ್ಲಿ ರಾತ್ರಿ ಆಕಾಶ ವೀಕ್ಷಣೆ ಎಂಬ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ಟೆಲಿಸ್ಕೋಪಿಕ್ ಅವಲೋಕನಗಳು, ಬೈನಾಕ್ಯುಲರ್ ಆಧಾರಿತ ಅಧ್ಯಯನಗಳು ಹೀಗೆ ಹಲವು ಅಚ್ಚರಿ ವಿಷಯಗಳನ್ನು ತಿಳಿದುಕೊಳ್ಳುವ ಆಸಕ್ತಿ ನಿಮ್ಮಲ್ಲಿದ್ದರೆ ಈ ಕೂಡಲೇ ನಿಮ್ಮ ಹೆಸರನ್ನು ನೋಂದಾಯಿಸಿಕೊಳ್ಳಿ. ದಿನಾಂಕ ಜನವರಿ 10, 2025 ರಾತ್ರಿ 10 ರಿಂದ ಬೆಳಗ್ಗೆ 4.30 ಪ್ರವೇಶ ಶುಲ್ಕ: ತಲಾ ?750 13 ವರ್ಷ ಮತ್ತು ಅದಕ್ಕಿಂತ ಮೇಲ್ಪಟ್ಟವರಿಗೆ ಮಾತ್ರ ಅವಕಾಶ ನೋಂದಣಿಗಾಗಿ ನಿಮ್ಮ ವಿವರಗಳನ್ನು info@taralaya.org ಕಳುಹಿಸಿ (ಭಾಗವಹಿಸುವ ಪ್ರತಿಯೊಬ್ಬರ ವಿವರವೂ ಇರಲಿ)

## ಕಾಂಗ್ರೆಸ್ ಆಯ್ತು ಈಗ ಬಿಜೆಪಿಯಲ್ಲೂ ಶುರುವಾದ ಡಿನ್ನರ್ ಪಾಲಿಟಿಕ್ಸ್, ಗುಟ್ಟಾಗಿ ಸಭೆ

• ಉದಯವಾಹಿನಿ ಬೆಂಗಳೂರು

ಸದ್ಯಕ್ಕೆ ರಾಜ್ಯ ರಾಜಕಾರಣದಲ್ಲಿ ಡಿನ್ನರ್ ಪಾಲಿಟಿಕ್ಸ್ ಭಾರಿ ಸದ್ದು ಮಾಡುತ್ತಿದ್ದು, ಸಚಿವ ಸತೀಶ್ ಜಾರಕಿಹೊಳಿ ಔತಣ ಕೂಟ ನಡೆಸಿದ್ದೇ ತಡ, ಇತ್ತ ಅಗ್ರ ಸಚಿವ ಜಿ ಪರಮೇಶ್ವರ್ ಡಿನ್ನರ್ ಪಾರ್ಟಿ ನೀಡಲು ಮುಂದಾಗಿದ್ದರು. ಆದರೆ ಹೈಕಮಾಂಡ್ ಖಡಕ್ ಸೂಚನೆ. ಮೇರೆಗೆ ಇದೀಗ ಡಿನ್ನರ್ ಪಾರ್ಟಿ ರದ್ದಾಗಿದೆ. ಆದರೆ ಇದೀಗ ಈ ಒಂದು ಸಂಪ್ರದಾಯ ಬಿಜೆಪಿಯಲ್ಲೂ ನಡೆದಿದ್ದು ನಿನ್ನೆ ಬೆಂಗಳೂರಿನ ಖಾಸಗಿ ಹೋಟೆಲಲ್ಲಿ ಬಿಜೆಪಿಯ ಹಲವು ಮುಖಂಡರು ಗುಟ್ಟಾಗಿ ಸಭೆ ನಡೆಸಿದ್ದಾರೆ ಎನ್ನಲಾಗಿದೆ.



ಉದಯವಾಹಿನಿ ಚಿತ್ರ

ಹೌದು ಕಾಂಗ್ರೆಸ್ ಪಕ್ಷದಲ್ಲಿ ಸಿಎಂ ಬದಲಾವಣೆ ಬಗ್ಗೆ ಚರ್ಚೆ ಹಾಗೂ ಡಿನ್ನರ್ ಪಾಲಿಟಿಕ್ಸ್ ಗಳು ಪ್ರಾರಂಭವಾಗಿರುವ ಬೆನ್ನಲ್ಲೇ ಬಿಜೆಪಿಯಲ್ಲೂ ಈ ಸಂಸ್ಕೃತಿ ಮುಂದುವರೆದಿದೆ. ಮಂಗಳವಾರ ರಾತ್ರಿ ಬಿಜೆಪಿಯ ಹಲವು ಮುಖಂಡರು ಖಾಸಗಿ ಹೋಟೆಲ್ ಒಂದರಲ್ಲಿ ಸಭೆ ನಡೆಸಿ ಗುಟ್ಟಾಗಿ ಚರ್ಚೆ ನಡೆಸಿದ್ದಾರೆನ್ನಲಾಗಿದೆ. ಅಲ್ಲದೇ ಕಳೆದ ಹಲವು ತಿಂಗಳಿನಿಂದ ಬಿಜೆಪಿಯ ರಾಜ್ಯಾಧ್ಯಕ್ಷ ಬಿ ವೈ ವಿಜಯೇಂದ್ರ ಹಾಗೂ ವಿಜಯಪುರ ನಗರ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಇವರಿಬ್ಬರ ಬಣಗಳ ನಡುವೆ ಬಡ ಬಡಿದಾಟ ಇತ್ತು. ಇದೇ ವಿಚಾರವಾಗಿ ಬಿವೈ ವಿಜಯೇಂದ್ರ ಅವರು ಕೇಂದ್ರ ಸಚಿವ ಅಮಿತ್ ಅವರಿಗೆ ಈ ಕುರಿತು ದೂರು ನೀಡಿದ್ದಾರೆ ಎನ್ನಲಾಗಿದೆ. ಇದರ ಬೆನ್ನಲ್ಲೇ ನಿನ್ನೆ ಯತ್ನಾಳ್ ಅವರು ಅಮಿತ್ ಶಾ ಅವರಿಗೆ ವಿಜಯೇಂದ್ರ ವಿರುದ್ಧ ದೂರು ನೀಡಿದ್ದಾರೆ ಎಂದು ತಿಳಿದುಬಂದಿದೆ. ವಿಜಯೇಂದ್ರ ಅವರು ಪಕ್ಷದಲ್ಲಿ ಎಲ್ಲರನ್ನೂ ಒಟ್ಟಿಗೆ ಕೊಂಡೊಯ್ಯುವ ಪ್ರಯತ್ನ ಮಾಡುತ್ತಿಲ್ಲ. ತಮ್ಮ ಆಪ್ತರನ್ನು ಬೆಂಬಲಿಗರನ್ನು ಮಾತ್ರ ಜತೆಗೆ ಕರೆದೊಯ್ಯುತ್ತಾರೆ.

> **ಪಕ್ಷದ ಪ್ರಮುಖ ನಿರ್ಧಾರಗಳನ್ನು ಕೈಗೊಳ್ಳುವಾಗ ಎಲ್ಲಾ ನಾಯಕರೊಂದಿಗೆ ಚರ್ಚೆ ನಡೆಸುವುದಿಲ್ಲ. ಇದು ಪಕ್ಷದ ಸಂಘಟನೆ ಮೇಲೆ ದೊಡ್ಡ ಪರಿಣಾಮ ಬೀರುತ್ತಿದೆ. ದೆಹಲಿಯಲ್ಲಿ ಅಮಿತ್ ಶಾ ಅವರನ್ನು ಭೇಟಿ ಮಾಡಿದ ಯತ್ನಾಳ ಬಣದ ಮುಖಂಡರು ವಕ್ಸ್ ವಿಚಾರವನ್ನು ಪ್ರಮುಖವಾಗಿ ಪ್ರಸ್ತಾಪಿಸಿ ಬಳಿಕ ವಿಜಯೇಂದ್ರ ಅವರ ಕಾರ್ಯವೈಖರಿಯ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿದರು.**

## ರಾಜಕಾರಣ ಮಾಡುವುದಾದರೆ ಓಪನ್ ಆಗಿಯೇ ಮಾಡುತ್ತೇವೆ: ಡಾ. ಜಿ ಪರಂ

• ಉದಯವಾಹಿನಿ ಬೆಂಗಳೂರು

ರಾಜಕಾರಣ ಮಾಡುವುದಾದರೆ ಓಪನ್ ಆಗಿಯೇ ಚಲನಚಿತ್ರ, ಕ್ರೀಡೆ ಕೃಷಿ ಮಾಡುತ್ತೇವೆ. ಮುಚ್ಚಿಟ್ಟು ಮಾಡುವಂಥದ್ದೇನೂ ಇಲ್ಲ ಎಂದು ಗೃಹ ಸಚಿವ ಡಾ. ಜಿ ಪರಮೇಶ್ವರ್ ಹೇಳಿದ್ದಾರೆ. ಹೈಕಮಾಂಡ್ ಡಿಸಿಎಂ ಡಿಕೆ ಶಿವಕುಮಾರ್ ದೂರು ನೀಡಿದ್ದಾರೆಯೇ ಎಂಬ ವಿಚಾರವಾಗಿ ಪ್ರತಿಕ್ರಿಯಿಸಿದ ಪರಮೇಶ್ವರ್, ಆ ಬಗ್ಗೆ ನನಗೆ ಗೊತ್ತಿಲ್ಲ. ತಂತ್ರಜ್ಞಾನ ನಮ್ಮ ಈ ಸಭೆಗೆ ಡಿಸಿಎಂ ಡಿಕೆ ಶಿವಕುಮಾರ್‌ರನ್ನೂ ಕರೆಯಬೇಕು ಎಂದು ಚರ್ಚೆ ಆಗಿತ್ತು. ರಾಜಕಾರಣ ಮಾಡುವುದಾದರೆ ಓಪನ್ ಆಗಿಯೇ ಮಾಡುತ್ತೇವೆ. ಮುಚ್ಚಿಟ್ಟು ಮಾಡುವಂಥದೇನೂ ಇಲ್ಲ ಎಂದರು. ದಲಿತ ಸಮುದಾಯದ ಮೇಲಿನ ದೌರ್ಜನ್ಯ ಬಗ್ಗೆ ಚರ್ಚೆ ಆಗಬೇಕಿದೆ. ಯಾರೂ ನಮ್ಮ ಸಭೆಯನ್ನು ಸಹಿಸುವುದಿಲ್ಲ ಎಂದು ಹೇಳಿಲ್ಲ. ನಮ್ಮ ನಮ್ಮ ಸಭೆ ಸಹಿಸಲ್ಲ ಅಂದರೆ ಅದಕ್ಕೆ ತಕ್ಕ ಉತ್ತರ ಕೊಡುತ್ತೇವೆ. ನಮಗೆ ಆ ಶಕ್ತಿ ಇದೆ ಎಂದು ಪರಮೇಶ್ವರ್ ಎಚ್ಚರಿಕೆ ನೀಡಿದರು. ಸದ್ಯದ ಮಟ್ಟಿಗೆ ಸಭೆ ಮುಂದಕ್ಕೆ ಹಾಕಿದ್ದೇವೆ. ಮತ್ತೆ ದಿನಾಂಕ ನಿಗದಿ ಆದಾಗ ತಿಳಿಸುತ್ತೇವೆ. ಏನಾಗಿದೆ ಎಂದು ಎಲ್ಲವನ್ನೂ ಹೇಳಲು ಆಗುವುದಿಲ್ಲವಲ್ಲ ಎಂದು ಪರಮೇಶ್ವರ್ ಹೇಳಿದರು.

## ಜನ ಸಾಮಾನ್ಯರಿಗೆ ಭಯ ಮುಕ್ತ ವಾತಾವರಣ ನಿರ್ಮಿಸಿ

• ಉದಯವಾಹಿನಿ ಬೆಂಗಳೂರು

ಅಪರಾಧಿಗಳಿಗೆ ಭಯದ ವಾತಾವರಣ, ಜನ ಸಾಮಾನ್ಯರಿಗೆ ಭಯ ಮುಕ್ತ ವಾತಾವರಣ ನಿರ್ಮಿಸಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಪೊಲೀಸ್ ಅಧಿಕಾರಿ ಮತ್ತು ಸಿಬ್ಬಂದಿಗೆ ಕರೆ ನೀಡಿದರು.

ನಗರದಲ್ಲಿ ನೂತನವಾಗಿ ನಿರ್ಮಿಸಿರುವ ಚಾಮರಾಜಪೇಟೆ, ಕಬ್ಬನ್ ಪಾರ್ಕ್ ಮತ್ತು ಹೈಗ್ರೌಂಡ್ಸ್ ಪೊಲೀಸ್ ಠಾಣೆ, ಕಚೇರಿಗಳನ್ನು ಉದ್ಘಾಟಿಸಿದ ಬಳಿಕ ಪುಲಕೇಶಿ ನಗರದಲ್ಲಿ ನೂತನವಾಗಿ ನಿರ್ಮಿಸಿರುವ ಪೊಲೀಸ್ ವಸತಿ ಸಮುಚ್ಚಯಗಳನ್ನು ಉದ್ಘಾಟಿಸಿ ಮಾತನಾಡಿದರು. ರಾಜ್ಯದ ಜನಸಂಖ್ಯೆ 7 ಕೋಟಿ ದಾಟಿ ಹೋಗುತ್ತಿದೆ. ಇವರೆಲ್ಲರ ರಕ್ಷಣೆ, ಆಸ್ತಿ ಪಾಸ್ತಿ ಮಾನ ಪ್ರಾಣ ರಕ್ಷಿಸಿ ನೆಮ್ಮದಿಯ ಬದುಕಿಗೆ ಸುರಕ್ಷಿತ ವಾತಾವರಣ ಸೃಷ್ಟಿಸುವ ಜವಾಬ್ದಾರಿ ಪೊಲೀಸ್ ಇಲಾಖೆ ಮೇಲಿದೆ. ಕರ್ನಾಟಕ ಇದಕ್ಕಾಗಿ ಇಲಾಖೆಗೆ ಅಗತ್ಯವಾದ ಸವಲತ್ತು ಮತ್ತು ನೂತನ ಠಾಣೆಗಳನ್ನು ಒದಗಿಸಲು



ಉದಯವಾಹಿನಿ ಚಿತ್ರ

ಸರ್ಕಾರ ಸದಾ ಸಿದ್ದವಿದೆ ಎಂದರು. ರಾಜ್ಯದಲ್ಲಿ ಶಾಂತಿ ಸುವ್ಯವಸ್ಥೆ ಇದ್ದಾಗ ಅಭಿವೃದ್ಧಿಯ ವೇಗ ಹೆಚ್ಚುತ್ತದೆ. ಹೀಗಾಗಿ ಜನಸ್ನೇಹಿ ಪೊಲೀಸ್ ವ್ಯವಸ್ಥೆಯನ್ನು ರೂಪಿಸಿ ಠಾಣೆಗೆ ಬರುವವರನ್ನು ಆರೋಗ್ಯಕರವಾಗಿ ನಡೆಸಿಕೊಳ್ಳಿ ಎಂದು ಸೂಚಿಸಿದರು. ರಾಜ್ಯದಲ್ಲಿ ಅಪರಾಧಗಳ ಪ್ರಮಾಣ ಕಡಿಮೆ ಆಗುತ್ತಿರುವುದು ನೆಮ್ಮದಿಯ ಸಂಗತಿ. ಆದರೆ ಪೊಲೀಸರು ಚಾಪೆ ಕೆಳಗೆ ತೂರಿದರೆ ಅಪರಾಧಿಗಳು ರಂಗೋಲಿ ಕೆಳಗೆ ತೂರಿ ಕಾನೂನಿನಿಂದ ತಪ್ಪಿಸಿಕೊಳ್ಳಲು ಯತ್ನಿಸುತ್ತಾರೆ. ಇದಕ್ಕೆ ಅವಕಾಶ ಆಗಬಾರದು ಎಂದರು. ಯಾವುದೇ ಕಾರಣಕ್ಕೂ ರಿಯಲ್ ಎಸ್ಟೇಟ್ ಗೆ ಬೆಂಬಲ ನೀಡುಬಾರದು. ಬೆಂಬಲ ಕೊಡುವ ಕೆಲಸ ಮಾಡಿದರೆ ಸರ್ಕಾರ ಸಹಿಸಲ್ಲ. ಅಪರಾಧಿಗಳಿಗೆ ಭಯದ ವಾತಾವರಣ, ಜನ ಸಾಮಾನ್ಯರಿಗೆ ಭಯ ಮುಕ್ತ ವಾತಾವರಣ ನಿರ್ಮಿಸಬೇಕು ಎಂದರು. ಪೇದೆಗಳು, ಎಸ್ ಐ ಗಳು, ಇನ್ಸ್ ಪೆಕ್ಟರ್ ಗಳೇ ಹೆಚ್ಚೆಚ್ಚು ಕೆಲಸ ಮಾಡ್ತಾರೆ. ಇವರ ಯೋಗಕ್ಷೇಮ ಕೂಡ ನಮ್ಮ ಜವಾಬ್ದಾರಿ. ಪೊಲೀಸ್ ಸಿಬ್ಬಂದಿಯ ಗೃಹ ಯೋಜನೆಯನ್ನು ಸರ್ಕಾರ ಮುಂದುವರೆಸುತ್ತದೆ ಎಂದು ಸಿಎಂ ಭರವಸೆ ನೀಡಿದರು.

> **ಜನರಿಗೆ ಉದ್ಯೋಗ ಇಲ್ಲದಿರುವುದು, ಬದುಕಿಗೆ ಅವಕಾಶ ಇಲ್ಲದಿರುವಾಗ ಅಪರಾಧ ಜಗತ್ತಿನ ಕಡೆಗೆ ಆಕರ್ಷಿತರಾಗುತ್ತಾರೆ. ನಗರದಲ್ಲಿ ರಿಯಲ್ ಎಸ್ಟೇಟ್ ದಂಧೆ ಕಾರಣದಿಂದ ಅಪರಾಧಗಳು ಹೆಚ್ಚಾಗುತ್ತಿವೆ. ಆದ್ದರಿಂದ ಶಿಕ್ಷೆಯ ಪ್ರಮಾಣ ಪೊಲೀಸರು ರಿಯಲ್ ಎಸ್ಟೇಟ್ ಮಾಫಿಯಾ ಜೊತೆ ಕೈ ಜೋಡಿಸಿದರೆ ಸಹಿಸಲ್ಲ.**

## ಎಚ್‌ಎಂಪಿವಿ ಟೆಸ್ಟ್ ಕಡ್ಡಾಯವಲ್ಲ: ಆಸ್ಪತ್ರೆಗೆ ಹೋಗುವವರಿಗೆ ಆರೋಗ್ಯ ಇಲಾಖೆ ಸೂಚನೆ!

• ಉದಯವಾಹಿನಿ ಬೆಂಗಳೂರು

ರಾಜ್ಯದಲ್ಲಿ ಎಚ್‌ಎಂಪಿವಿ ಟೆಸ್ಟ್ ಕಡ್ಡಾಯವಲ್ಲ ಎಂದು ಆಸ್ಪತ್ರೆಗೆ ಹೋಗುವವರಿಗೆ ಆರೋಗ್ಯ ಇಲಾಖೆ ಸೂಚನೆ ನೀಡಿದೆ. ಚಳಿಗಾಲದಲ್ಲಿ ಇಂತಹ ವೈರಸ್ ಕಾಣಿಸಿ ಕೊಳ್ಳುವುದು ಸಾಮಾನ್ಯ. ರಾಜ್ಯದಲ್ಲಿ 'ಎಚ್‌ಎಂಪಿವಿ ಟೆಸ್ಟ್ ಕಡ್ಡಾಯವಲ್ಲ ಖಾಸಗಿ ಆಸ್ಪತ್ರೆಗಳಲ್ಲಿ ಈ ಟೆಸ್ಟ್'ಗೆ 10 ರಿಂದ 12 ಸಾವಿರ ತೆಗೆದುಕೊಳ್ಳಲಾಗುತ್ತಿದೆ. ಹಾಗಾಗಿ ಹೆಚ್ ಎಂಪಿ ಟೆಸ್ಟಿಂಗ್ ಕಡ್ಡಾಯ ಎನ್ನುವ ಆಸ್ಪತ್ರೆ ಮೇಲೆ ಆರೋಗ್ಯ ಇಲಾಖೆ ನಿಗಾ ವಹಿಸಿದೆ. ಸರ್ಕಾರಿ ಆಸ್ಪತ್ರೆಗಳಲ್ಲಿ ಟೆಸ್ಟಿಂಗ್ ಮಾಡುತ್ತಿಲ್ಲ. ಟೆಸ್ಟಿಂಗ್ ಕಡ್ಡಾಯವೇನಲ್ಲ ಎಂದು ಸಲಹೆ ನೀಡಿದೆ.

ಎಚ್‌ಎಂಪಿವಿ ವೈರಸ್ ಅಪಾಯಕಾರಿ ಅಲ್ಲ ಎಂದು ರಾಜ್ಯ ಆರೋಗ್ಯ ಇಲಾಖೆ ಇಂದು ಅಧಿಕೃತವಾಗಿ ಪ್ರಕಟಣೆ ಹೊರಡಿಸುವ ಸಾಧ್ಯತೆಯಿದೆ.

ಎಚ್‌ಎಂಪಿವಿ ವೈರಸ್ ಬಗ್ಗೆ ಆತಂಕ ಬೇಡ, ಇರಲಿ ಈ ಎಚ್ಚರ

★ ಸೀನುವಾಗ ಅಥವಾ ಕೆಮ್ಮುವಾಗ ಕರವಸ್ತ್ರವನ್ನು ಉಪಯೋಗಿಸಿ ★ ಸ್ಯಾನಿಟೈಸರ್ ಅಥವಾ ಸೋಪ್ನಿಂದ ನಿಮ್ಮ ಕೈಯನ್ನು ಆಗಾಗ ಸ್ವಚ್ಛಗೊಳಿಸುತ್ತಿರಿ

★ ಜನಸಂದಣಿ ಹೆಚ್ಚಿರುವ ಸ್ಥಳಗಳಿಗೆ ತೆರಳಬೇಡಿ ★ ಜ್ವರ, ಕೆಮ್ಮು ಅಥವಾ ಶೀತದ ಲಕ್ಷಣಗಳಿದ್ದಲ್ಲಿ ಹೊರಗಡೆ ಓಡಾಡದಿರಿ ★ ಬಿಸಿ ನೀರು ಕುಡಿಯಿರಿ ಮತ್ತು ಪೌಷ್ಟಿಕಾಂಶವುಳ್ಳ ಆಹಾರವನ್ನು ಸೇವಿಸಿ ★ ಅನಾರೋಗ್ಯವಿದ್ದರೆ ವೈದ್ಯರಲ್ಲಿ ಪರೀಕ್ಷಿಸಿಕೊಳ್ಳಿ. ಮನೆಯಲ್ಲೇ ಸುರಕ್ಷಿತವಾಗಿರಿ

## ಭ್ರಷ್ಟ ಅಧಿಕಾರಿಗಳಿಗೆ ಬಿಗ್ ಶಾಕ್

• ಉದಯವಾಹಿನಿ ಬೆಂಗಳೂರು

ಅಕ್ರಮ ಆಸ್ತಿ ಗಳಿಕೆ ಆರೋಪದ ಹಿನ್ನಲೆಯಲ್ಲಿ ಬೆಳಂಬೆಳಗ್ಗೆ ಲೋಕಾಯುಕ್ತ ಅಧಿಕಾರಿಗಳು ದಾಳಿ ನಡೆಸಿದ್ದಾರೆ ಗದಗ, ಬಳ್ಳಾರಿ ಸೇರಿ ರಾಜ್ಯಾದ್ಯಂತ ಎಂಟು ಕಡೆ ಲೋಕಾಯುಕ್ತ ಅಧಿಕಾರಿಗಳು ದಾಳಿ ನಡೆಸಿದ್ದಾರೆ.
ರಾಯಚೂರು, ಚಿಕ್ಕಮಗಳೂರು, ಬೀದರ್, ಬೆಳಗಾವಿ, ಗದಗ, ಬಳ್ಳಾರಿ, ಬೆಂಗಳೂರಿನಲ್ಲಿ ಲೋಕಾಯುಕ್ತ ದಾಳಿ ನಡೆದಿದೆ. ಖಾನಾಪುರ ತಹಶೀಲ್ದಾರ್, ಬೆಂಗಳೂರು ಟ್ರಾನ್ಸ್ ಪೋರ್ಟ್ ಡಿಪಾರ್ಟೆಂಟ್ ಜಂಟಿ ನಿರ್ದೇಶಕರಾದ ಶೋಭಾ ಸೇರಿದಂತೆ ಎಂಟು ಜಿಲ್ಲೆಯ ಅಧಿಕಾರಿಗಳ ಮನೆ ಮತ್ತು ಕಚೇರಿಗಳ ಮೇಲೆ ಲೋಕಾಯುಕ್ತ ಅಧಿಕಾರಿಗಳು ದಾಳಿ ನಡೆಸಿದ್ದಾರೆ. ಅಕ್ರಮ ಆಸ್ತಿ ಗಳಿಕೆ ಆರೋಪದ ಮೇಲೆ ಬೆಂಗಳೂರು ಸೇರಿ ರಾಜ್ಯದ ವಿವಿಧೆಡೆ ಇಂದು ಬೆಳಗ್ಗೆ ಲೋಕಾಯುಕ್ತ ಅಧಿಕಾರಿಗಳು ದಾಳಿ ನಡೆಸಿ ಭ್ರಷ್ಟರಿಗೆ ಬಿಸಿ ಮುಟ್ಟಿಸಿದ್ದಾರೆ. ಬೆಂಗಳೂರು, ಬೆಳಗಾವಿ, ಗದಗ, ಬಳ್ಳಾರಿ, ಚಿಕ್ಕಮಗಳೂರು, ಬೀದರ್, ರಾಯಚೂರಿನಲ್ಲಿ ದಾಳಿ ಮಾಡಲಾಗಿದೆ. ಬೆಂಗಳೂರಿನಲ್ಲಿ ಸಾರಿಗೆ ಇಲಾಖೆ ಜಂಟಿ ನಿರ್ದೇಶಕಿ ಶೋಭಾ ಮನೆ ಮೇಲೆ ದಾಳಿ ನಡೆದಿದೆ.

## ದೇಶದ ಪ್ರಮುಖ ನಗರಗಳಲ್ಲಿ ಪೆಟ್ರೋಲ್, ಡೀಸೆಲ್ ದರ ಎಷ್ಟಿದೆ..?

• ಉದಯವಾಹಿನಿ ಬೆಂಗಳೂರು

ಕಚ್ಚಾತೈಲಗಳಾದ ಪೆಟ್ರೋಲ್ ಡೀಸೆಲ್ ಕೂಡ ಬೆಲೆಗಳಲ್ಲಿ ಏರಿಳಿತಕ್ಕೊಳಗಾಗುತ್ತಿದ್ದು, ದಿನಂಪ್ರತಿ ಬಳಕೆಯಾಗುವ ಈ ಇಂಧನಗಳು ಒಮ್ಮೊಮ್ಮೆ ಬೆಲೆ ಏರಿಸಿಕೊಂಡಿರುವುದು ವಾಹನ ಚಾಲಕರಿಗೆ ತಲೆನೋವಿನ ಸಮಸ್ಯೆಯಾಗಿದೆ. ನವೀಕರಿಸಲಾಗದೇ ಇರುವ ಇಂಧನಗಳಾಗಿ ಗುರುತಿಸಿಕೊಂಡಿರುವ ಪೆಟ್ರೋಲ್, ಡೀಸೆಲ್ ಅನ್ನು ಹಲವಾರು ಪ್ರಕ್ರಿಯೆಗಳ ಮೂಲಕ ಶುದ್ದೀಕರಿಸಿ ಬಳಕೆಗೆ ಲಭ್ಯವಾಗಿಸಲಾಗುತ್ತದೆ. ಅನೇಕ ನಗರಗಳಲ್ಲಿ ತೈಲದ ಚಿಲ್ಲರೆ ಬೆಲೆಗಳು ಹೆಚ್ಚಾಗುತ್ತಿವೆ. ಆದರೆ, ಇಂದಿಗೂ ದೇಶದ ನಾಲ್ಕೂ ಮಹಾನಗರಗಳಲ್ಲಿ ತೈಲ ಬೆಲೆಯಲ್ಲಿ ಯಾವುದೇ ಬದಲಾವಣೆಯಾಗಿಲ್ಲ.
ಇಂದು ಪೆಟ್ರೋಲ್ ಲೀಟಗೆರ್‌ಗೆ 19 ಪೈಸೆ ಇಳಿಕೆಯಾಗಿ 94.42 ರೂ.ಗೆ ಮತ್ತು ಡೀಸೆಲ್ ಲೀಟರ್‌ಗೆ 22 ಪೈಸೆ ಇಳಿಕೆಯಾಗಿ 87.47 ರೂ. ಅದೇ ಸಮಯದಲ್ಲಿ ಮಹಾರಾಷ್ಟ್ರದಲ್ಲಿ ಪೆಟ್ರೋಲ್ ಬೆಲೆ ಲೀಟರ್‌ಗೆ 32 ಪೈಸೆ ಇಳಿಕೆಯಾಗಿ 104.27 ರೂ.ಗೆ ಮತ್ತು ಡೀಸೆಲ್ ಲೀಟರ್‌ಗೆ 32 ಪೈಸೆ ಇಳಿಕೆಯಾಗಿ 90.80 ರೂ.ಗೆ ತಲುಪಿದೆ.


# ಮತದಾರರ ಪಟ್ಟಿಯಲ್ಲಿ ಹೆಸರು ಸೇರ್ಪಡೆ, ತಿದ್ದುಪಡಿಗೆ ಮತ್ತೆ ಅವಕಾಶ!

## ಬಿಬಿಎಂಪಿ ಮುಖ್ಯ ಆಯುಕ್ತರಾದ ತುಷಾರ್ ಗಿರಿನಾಥ್ ಅವರು ಹೇಳಿಕೆ

• ಉದಯವಾಹಿನಿ ಬೆಂಗಳೂರು

ರಾಜ್ಯದ ಅರ್ಹ ಮತದಾರರಿಗೆ ಗುಡ್ ನ್ಯೂಸ್ ಎನ್ನುವಂತೆ, ಮತದಾರರ ಪಟ್ಟಿಯಲ್ಲಿ ಹೆಸರು ಸೇರ್ಪಡೆ, ತಿದ್ದುಪಡಿಗೆ ಮತ್ತೆ ಅವಕಾಶ ನೀಡಿದೆ. ಮತದಾರರ ಪಟ್ಟಿಯಲ್ಲಿ ಹೆಸರು ಬಿಟ್ಟು ಹೋಗಿದ್ದರೇ ಅಥವಾ ಹೊಸದಾಗಿ ಸೇರ್ಪಡೆ ಮಾಡುವುದಿದ್ದರೇ ಈ ದಿನಾಂಕಗಳಂದು ಸೇರ್ಪಡೆಗೆ ಅವಕಾಶವನ್ನು ನೀಡಲಾಗಿದೆ. ಈ ಸಂಬಂಧ ರಾಜ್ಯ ಸರ್ಕಾರ ಮಾಹಿತಿ ಹಂಚಿಕೊಂಡಿದ್ದು ಜನವರಿ 1 ಅನ್ನು ಅರ್ಹತಾ ದಿನಾಂಕವನ್ನಾಗಿಟ್ಟುಕೊಂಡು ಮತದಾರರ ಪಟ್ಟಿಯಲ್ಲಿ ಹೆಸರು ಸೇರ್ಪಡೆ, ಮೃತಪಟ್ಟವರ ಹೆಸರು ತೆಗೆಯುವುದು, ವರ್ಗಾವಣೆ, ತಿದ್ದುಪಡಿ, ವಿಳಾಸ ಬದಲಾವಣೆಗೆ ಅವಕಾಶ ಮಾಡಿಕೊಡಲಾಗಿದೆ. ಇದಕ್ಕಾಗಿ ಏಪ್ರಿಲ್ 1, ಜುಲೈ 1, ಅಕ್ಟೋಬರ್ 1 ರಂದು ನಿರ್ದಿಷ್ಟ ದಾಖಲೆಗಳೊಂದಿಗೆ ಅರ್ಜಿ ಸಲ್ಲಿಸಬಹುದಾಗಿದೆ ಎಂದು ಬಿಬಿಎಂಪಿ ಮುಖ್ಯ ಆಯುಕ್ತರಾದ ತುಷಾರ್ ಗಿರಿನಾಥ್ ಅವರು ತಿಳಿಸಿದ್ದಾರೆ.

ಮತದಾರರ ಅಂತಿಮ ಪ್ರತಿಯನ್ನು ನಗರದ ಎಲ್ಲಾ 28 ವಿಧಾನಸಭಾ ಕ್ಷೇತ್ರಗಳ ಮತದಾರರ ನೊಂದಣಾಧಿಕಾರಿಗಳ ಕಛೇರಿ, ಸಹಾಯಕ ಮತದಾರರ ನೋಂದಣಾಧಿಕಾರಿಗಳ ಕಛೇರಿ ಹಾಗೂ ವಾರ್ಡ್ ಕಛೇರಿಗಳಲ್ಲಿ ಪ್ರಕಟಿಸಲಾಗಿದ್ದು,



**ರಾಜಕೀಯ ಪ್ರತಿನಿಧಿಗಳ ಜೊತೆ ಸಭೆ**

ಸಾರ್ವಜನಿಕರಿಗೆ ಮತದಾರರ ಪಟ್ಟಿಯನ್ನು ಪರಿಶೀಲಿಸಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ ಎಂದು ಹೇಳಿದರು.

ಅಂತಿಮ ಮತದಾರರ ಪಟ್ಟಿಯನ್ನು ಮುಖ್ಯ ಚುನಾವಣಾಧಿಕಾರಿ, www.ceokarnataka.kar.nic.in ಬಿಬಿಎಂಪಿ ವೆಬ್‌ಸೈಟ್ www.bbmp.gov.in ನಲ್ಲಿ ಪರಿಶೀಲಿಸುವ ಮೂಲಕ ಖಾತರಿಪಡಿಸಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ ಎಂದು ತಿಳಿಸಿದರು.

ಸಾರ್ವಜನಿಕರು/ಮತದಾರರು ತಮ್ಮ ಮೊಬೈಲ್‌ನಲ್ಲಿ ವಿ.ಹೆಚ್.ಎ Voter Helpline App) Voters.eci.gov.in ಖುದ್ದಾಗಿ ಮತದಾರರ ಮಾಹಿತಿಯನ್ನು ಖಾತರಿಪಡಿಸಿಕೊಳ್ಳಬಹುದು. ಜೊತೆಗೆ e-EPIC ಡೌನ್ಲೋಡ್ ಮಾಡಿಕೊಳ್ಳಬಹುದು ಹಾಗೂ ಇನ್ನಿತರೆ ಮಾಹಿತಿಗಳಾದ ಮತಗಟ್ಟೆ ಶೇಖಡವಾರು ಮತದಾನದ ಮಾಹಿತಿಯನ್ನು ಕೂಡಾ ಪಡೆದುಕೊಳ್ಳಬಹುದಾಗಿದೆ ಎಂದು ಹೇಳಿದರು.

**95,391 ಯುವ ಮತದಾರರು:** ನಗರದಲ್ಲಿ 1.02 ಕೋಟಿ ಮತದಾರರ ಪೈಕಿ 95,391 ಮತದಾರರು ಯುವ ಮತದಾರರಿದ್ದಾರೆ, 2294 ಅನಿವಾಸಿ ಭಾರತೀಯ ಮತದಾರರು, 1712 ಸೇವಾ ಮತದಾರರು ಹಾಗೂ 32,505 ವಿಶೇಷ ಚೇತನ ಮತದಾರರಿದ್ದಾರೆ. ಆನ್ ಲೈನ್ ಮೂಖಾಂತರ ಪರಿಶೀಲಿಸಿ: ಸಾರ್ವಜನಿಕರು ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆ-2025ರ ಕಾರ್ಯ ಚಟುವಟಿಕೆಗಳ ಉಪಯೋಗವನ್ನು ಪಡೆದುಕೊಂಡು ಯಾವುದೇ ಕಛೇರಿಗೆ ಹೋಗದೆ ಅವರಿರುವ ಸ್ಥಳದಿಂದಲೇ Web Portal- Voters.eci.gov.in Voter Helpline Mobile App ಮತದಾರರ ಪಟ್ಟಿಯನ್ನು ಪರಿಶೀಲಿಸಿಕೊಳ್ಳಬಹುದು. ಅವಶ್ಯವಿದ್ದಲ್ಲಿ ನಮೂನೆ 6, 7 ಮತ್ತು 8 ಇತ್ಯಾದಿ ಅರ್ಜಿಗಳನ್ನು ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ.

**ರಾಜಕೀಯ ಪ್ರತಿನಿಧಿಗಳ ಜೊತೆ ಸಭೆ:** ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆ-2025ರ ಅಂತಿಮ ಮತದಾರರ ಪಟ್ಟಿ ಪ್ರಕಟಕ್ಕೆ ಸಂಬಂಧಿಸಿದಂತೆ ಮತದಾರರಿಗೆ ಜಾಗೃತಿ ಮೂಡಿಸುವ ಕೆಲಸ ಮಾಡಲಾಗುತ್ತಿದೆ ಎಂದರು.

> **ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆ-2025ರ ಅಂತಿಮ ಮತದಾರರ ಪಟ್ಟಿಯನ್ನು ಪಾಲಿಕೆ ಕೇಂದ್ರ ಕಛೇರಿ ಸಭಾಂಗಣ-01ರಲ್ಲಿ ಪ್ರಕಟಿಸಿದ ಬಳಿಕ ಮಾತನಾಡಿದ ಅವರು, ಅಂತಿಮ ಮತದಾರರ ಪಟ್ಟಿಯಲ್ಲಿ 1,02,64,714 ಮತದಾರರಿದ್ದು, ಈ ಪೈಕಿ 52,80,287 ಪುರುಷರು, 49,82,589 ಮಹಿಳೆಯರು ಹಾಗೂ 1,838 ಇತರೆ(ತೃತೀಯ ಲಿಂಗಿಗಳು) ಮತದಾರರಿದ್ದಾರೆ ಎಂದು ಹೇಳಿದರು.**

> **ಬೆಂಗಳೂರು ನಗರ ಜಿಲ್ಲಾ ವ್ಯಾಪ್ತಿಯಲ್ಲಿ ಅಂತಿಮ ಮತದಾರರ ಪಟ್ಟಿಯಲ್ಲಿ 1,02,64,714 ಮತದಾರರಿದ್ದಾರೆ ಎಂದು ಜಿಲ್ಲಾ ಚುನಾವಣಾಧಿಕಾರಿ ಹಾಗೂ ಮುಖ್ಯ ಆಯುಕ್ತರಾದ ಶ್ರೀ ತುಷಾರ್ ಗಿರಿ ನಾಥ್ ರವರು ತಿಳಿಸಿದರು.**
> ಆಯುಕ್ತರಾದ ಶ್ರೀ ತುಷಾರ್ ಗಿರಿ ನಾಥ್

# ಎಲ್ಲಾ ಇಲಾಖೆಗಳ ಕೆಲಸಗಳಿಗೆ ಕಮಿಷನ್: ಡಾ.ಕೆ. ಸುಧಾಕರ್ ಆಕ್ರೋಶ

## ಕಾಮಗಾರಿ ಅನುಮೋದನೆ ಸಮಯದಲ್ಲಿ ಹಣ ನೀಡಬೇಕು, ಕಾಮಗಾರಿ ಪೂರ್ಣಗೊಳಿಸಿ ಬಿಲ್ ಮಾಡಿಕೊಡುವಾಗಲೂ ಹಣ ಕೊಡಬೇಕು

• ಉದಯವಾಹಿನಿ ಬಾಗೇಪಲ್ಲಿ

ರಾಜ್ಯ ಕಾಂಗ್ರೆಸ್ ಸರ್ಕಾರ ಅಧಿಕಾರಿಗಳ ವರ್ಗಾವಣೆ, ಪ್ರಮೋಷನ್, ಕಾಮಗಾರಿ ಅನುಮೋದನೆ, ಕಾಮಗಾರಿ ಬಿಲ್ ಮಂಜೂರು ಸೇರಿ ಎಲ್ಲಾ ಇಲಾಖೆಯ ಕೆಲಸಗಳಿಗೆ ಕಮಿಷನ್ ಪಡೆದು ಕೆಲಸ ಮಾಡಿಕೊಡುವ ಅಕ್ರಮ ಪ್ರವೃತ್ತಿ ಬೆಳೆಸಿಕೊಂಡಿದೆ ಎಂದು ಸಂಸದ ಡಾ. ಕೆ. ಸುಧಾಕರ್ ಆಕ್ರೋಶ ವ್ಯಕ್ತಪಡಿಸಿದರು.

ತಾಲ್ಲೂಕಿನ ಹೊಸಹುಡ್ಯ ಗ್ರಾಮದಲ್ಲಿ ಖಾಸಗಿ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಅವರು ಸಾರ್ವಜನಿಕರಿಂದ ಅಹವಾಲು ಸ್ವೀಕರಿಸಿ ಮಾತನಾಡಿದರು.

ರಾಜ್ಯ ಕಾಂಗ್ರೆಸ್ ಸರ್ಕಾರ ಅಧಿಕಾರಗಳ ವರ್ಗಾವಣೆಯಿಂದ ಹಿಡಿದು ಪ್ರಮೋಷನ್‌ವರೆಗೂ ಪರ್ಸಂಟೇಜ್ ನಿಗದಿ ಮಾಡಿ ಅಧಿಕಾರಿಗಳಿಂದ ಕಮಿಷನ್ ಪಡೆಯುತ್ತಿದೆ. ಇನ್ನು ರಾಜ್ಯದ ಗುತ್ತಿಗೆದಾರರ ಪರಿಸ್ಥಿತಿ ಹೇಳತೀರದಾಗಿದೆ.


ಕಾಮಗಾರಿ ಅನುಮೋದನೆ ಸಮಯದಲ್ಲಿ ಹಣ ನೀಡಬೇಕು, ಕಾಮಗಾರಿ ಪೂರ್ಣಗೊಳಿಸಿ ಬಿಲ್ ಮಾಡಿಕೊಡುವಾಗಲೂ ಹಣ ಕೊಡಬೇಕು, 5ರಿಂದ 10 ಪರ್ಸಂಟ್ ಲಾಭಕ್ಕೆ ಕೆಲಸ ಮಾಡುವ ಗುತ್ತಿಗೆದಾರನಿಂದ ಅರ್ಧದಷ್ಟು ಹಣವನ್ನು ಕಾಂಗ್ರೆಸ್ ಪಕ್ಷದ ಸಚಿವರು, ಸರ್ಕಾರಿ ಅಧಿಕಾರಿಗಳೇ ವಸೂಲಿ ಮಾಡಿಕೊಂಡರೆ ಸಾಲ ಮಾಡಿ ಬಂಡವಾಳ ಹಾಕಿರುವ ಗುತ್ತಿಗೆದಾರನ ಪರಿಸ್ಥಿತಿ ಏನಾಗಬೇಕಾಗಿದೆ ಎಂದು ಮುಖ್ಯಮಂತ್ರಿಗಳು ಯೋಚಿಸಬೇಕಿದೆ. ರಾಜ್ಯದಲ್ಲಿ ನಡೆಯುತ್ತಿರುವ ದುರಾಡಳಿತ, ಭ್ರಷ್ಟಾಚಾರದ ಬಗ್ಗೆ ಮುಖ್ಯಮಂತ್ರಿಗಳು ಗಮನಹರಿಸಿ ಸರಿಪಡಿಸುವ ಕೆಲಸ ಮಾಡಬೇಕಾಗಿದೆ ಎಂದು ಆಗ್ರಹಿಸಿದರು.

ಬಾಗೇಪಲ್ಲಿ ತಾಲ್ಲೂಕು ಪಂಚಾಯಿತಿ ಇಒ ಹಾಗೂ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಸ್ಥಳೀಯ ಶಾಸಕರ ಆದೇಶದಂತೆ ಜೂಲಪಾಳ್ಯ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ನಡೆದಿರುವ ನರೇಗಾ ಕಾಮಗಾರಿಗಳ ಹಣ ಬಿಡುಗಡೆ ಮಾಡುತ್ತಿಲ್ಲ ಎಂದು ಗ್ರಾಮ ಪಂಚಾಯತಿ ಸದಸ್ಯ ಜಗನ್ನಾಥ್ ಎಂಬುವರು ಸಂಸದರಿಗೆ ದೂರು ಸಲ್ಲಿಸಿದರು. ಇದಕ್ಕೆ ಪ್ರತಿಕ್ರಿಯಿಸಿದ ಸಂಸದರು, ಭಾರತ ಸರ್ಕಾರದ ನರೇಗಾ ಯೋಜನೆಯಲ್ಲಿ ಕೆಲಸ ಮಾಡಿರುವವರ ಹಣ ತಡೆಯಲು ತಾಲ್ಲೂಕು ಪಂಚಾಯತಿ ಇಒಗೆ ಏನು ಅಧಿಕಾರ ಇದೆ, ಅಧಿಕಾರಿಗಳು ಅವರ ತಾತನ ಮನೆಯಿಂದ ಹಣ ಕೊಡುತ್ತಿಲ್ಲ ಎಂದು ಎಚ್ಚರಿಕೆ ನೀಡಿದರು.

ರಾಜ್ಯ ಒಕ್ಕಲಿಗರ ಸಂಘದ ಪ್ರಧಾನ ಕಾರ್ಯದರ್ಶಿ ಟಿ.ಕೋನಪರೆಡ್ಡಿ, ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಹರಿನಾಥರೆಡ್ಡಿ, ಡಿಸಿಸಿ ಬ್ಯಾಂಕ್ ಮಾಜಿ ನಿರ್ದೇಶಕ ವೆಂಕಟಶಿವಾರೆಡ್ಡಿ, ಯಂಡ್ರಕಾಯಲಪಲ್ಲಿ ಬಾಬುರೆಡ್ಡಿ, ಜೆ.ಪಿ.ರೆಡ್ಡಿ, ತಾಪಂ ಮಾಜಿ ಸದಸ್ಯ ಗೋಪಾಲಕೃಷ್ಣ, ಬ್ಲ್ಯಾಕ್ ಕಾಂಗ್ರೆಸ್ ಮಾಜಿ ಅಧ್ಯಕ್ಷ ಶ್ರೀನಿವಾಸರೆಡ್ಡಿ, ಎಪಿಎಂಸಿ ಮಾಜಿ ಅಧ್ಯಕ್ಷ ಸೋಮಶೇಖರರೆಡ್ಡಿ, ಗ್ರಾಪಂ ಸದಸ್ಯರಾದ ಮಲ್ಲಿಕಾರ್ಜುನ, ಜಗನ್ನಾಥ, ಮುಖಂಡರಾದ ಚಿನ್ನ ಪೂಜಪ್ಪ, ಗಣೇಶ್ ರೆಡ್ಡಿ, ಸುನೀಲ್ ರೆಡ್ಡಿ ಮತ್ತಿತರರು ಇದ್ದರು.

**ಪರಮಾಧಿಕಾರ ಧೋರಣೆ**

**ಬಾಗೇಪಲ್ಲಿ ತಾಲ್ಲೂಕಿನ ಕೊಂಡರೆಡ್ಡಿಪಲ್ಲಿ ಮತ್ತು ಹೊಸಹುಡ್ಯ ಗ್ರಾಮದ 25 ಕುಟುಂಬಗಳಿಗೆ ಸೇರಿರುವ 65 ಎಕರೆ ಕೃಷಿ ಜಮೀನನ್ನು ಮಾಲೀಕರ ಒಪ್ಪಿಗೆ ಪಡೆಯದೆ, ಪರಿಹಾರ ಹಣ ನೀಡದೆ ಪರಮಾಧಿಕಾರ ಧೋರಣೆ ಅನುಸರಿಸಿ ಕೆಐಎಡಿಬಿ ಹೆಸರಿಗೆ ವರ್ಗಾವಣೆ ಮಾಡಿಕೊಂಡಿದ್ದು, ರೈತರ ಜಮೀನನ್ನು ರೈತರ ಹೆಸರಿಗೆ ವಾಪಸ್ ವರ್ಗಾವಣೆ ಮಾಡುವಂತೆ ಚಿಕ್ಕಬಳ್ಳಾಪುರ ಉಪವಿಭಾಗೀಯ ಅಧಿಕಾರಿ ಹಾಗೂ ಬಾಗೇಪಲ್ಲಿಯ ತಹಸೀಲ್ದಾರ್‌ಗೆ ಈಗಾಗಲೇ ಸೂಚಿಸಿದ್ದು, ಒಂದು ವಾರದೊಳಗೆ ರೈತರ ಹೆಸರಿಗೆ ಪಹಣಿ ವರ್ಗಾವಣೆ ಮಾಡಿ ಕೊಡುವುದಾಗಿ ತಿಳಿಸಿದ್ದಾರೆ.**



ಉದಯವಾಹಿನಿ ಚಿತ್ರ

**ಅಧಿಕಾರಿಗಳು ಮಾಡಿರುವ ತಪ್ಪು ಸರಿಪಡಿಸಿಕೊಳ್ಳದಿದ್ದರೆ ಮುಂದಿನ ದಿನಗಳಲ್ಲಿ ಅದರ ಪರಿಣಾಮವನ್ನು ಅವರೇ ಅನುಭವಿಸಲಿದ್ದಾರೆ ಎಂದು ರೈತರಿಗೆ ಡಾ. ಕೆ. ಸುಧಾಕರ್ ಭರವಸೆ ನೀಡಿದರು.**

**ಗುತ್ತಿಗೆದಾರರ ಸ್ಥಿತಿ ಹೇಳತೀರದು**

# ಅಂಬೇಡ್ಕರ್ ಭವನದ ಜಾಗ ಒತ್ತುವರಿ ಆರೋಪ

• ಉದಯವಾಹಿನಿ ತುರುವೇಕೆರೆ

ಪಟ್ಟಣದ ಮಾಯಸಂದ್ರ ರಸ್ತೆಯ ಪೊಲೀಸ್ ಠಾಣೆ ಎದುರಿನ ಬಿ.ಆರ್.ಅಂಬೇಡ್ಕರ್ ಭವನದ ಜಾಗ ಒತ್ತುವರಿಯಾಗಿದೆ ಎಂದು ಆರೋಪಿಸಿ ತಾಲ್ಲೂಕು ದಸಂಸ ಪದಾಧಿಕಾರಿಗಳು ಇಲ್ಲಿನ ಪಟ್ಟಣ ಪಂಚಾಯಿತಿ ಕಚೇರಿ ಎದುರು ಅಹೋರಾತ್ರಿ ಧರಣಿ ನಡೆಸಿದರು.

ಕರ್ನಾಟಕ ದಲಿತ ಸಂಘರ್ಷ ಸಮಿತಿ ರಾಜ್ಯ ಸದಸ್ಯ ಕುಂದೂರು ತಿಮ್ಮಯ್ಯ ಮಾತನಾಡಿ, ಈ ಪ್ರಕರಣದ ಬಗ್ಗೆ ಎಸಿ ಮತ್ತು ಜಿಲ್ಲಾಧಿಕಾರಿಗೆ ದೂರು ನೀಡಿದಾಗ ಜಿಲ್ಲಾಧಿಕಾರಿ ನಿರ್ದೇಶನದ ಮೇರೆಗೆ ಸ್ಥಳ ಸರ್ವೆ ಮಾಡಿದ ಸಂದರ್ಭದಲ್ಲಿ ಅಂಬೇಡ್ಕರ್ ಭವನದ ಜಾಗ ಒತ್ತುವರಿ ಮಾಡಿರುವುದು ಅಧಿಕಾರಿಗಳ ಗಮನಕ್ಕೆ ಬಂದರೂ ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ಏಕೆ ಒತ್ತುವರಿ ತೆರವು ಮಾಡುತ್ತಿಲ್ಲ ಎಂದು ಪ್ರಶ್ನಿಸಿದರು. ಸರ್ಕಾರಿ ಅಧಿಕಾರಿಗಳು ಸರಿಯಾಗಿ ಕೆಲಸ ಮಾಡದಿದ್ದರೆ ಸಮಾಜದಲ್ಲಿ ಸಮುದಾಯಗಳ ನಡುವೆ ಸಂಘರ್ಷ ಏರ್ಪಡಲಿದೆ. ಒಬ್ಬರ ರಕ್ಷಣೆಗಾಗಿ ಇಡೀ ದಲಿತ ಸಮುದಾಯವನ್ನು ಬೀದಿಪಾಲು ಮಾಡುವುದು ಸರಿಯೇ..? ಸ್ಥಳೀಯ ನಗರ ಸಭೆಯ ಸದಸ್ಯರು ಕೂಡ ಒತ್ತುವರಿ ಜಾಗವನ್ನು ತೆರವುಗೊಳಿಸಿ ಎಂದು ಹೇಳಿದ್ದರೂ ಇಲ್ಲಿನ ಮುಖ್ಯಾಧಿಕಾರಿಯ ಕರ್ತವ್ಯಲೋಪ ಎದ್ದು ಕಾಣುತ್ತಿದೆ' ಎಂದು ಆರೋಪಿಸಿದರು.



ಉದಯವಾಹಿನಿ ಚಿತ್ರ

ತಹಶೀಲ್ದಾರ್ ಅಹಮದ್ ಹಾಗೂ ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ಶ್ರೀನಾಥ್ ಬಾಬು ಅವರು ಧರಣಿ ನಿರತರ ನಡುವೆ ಸುದೀರ್ಘ ಚರ್ಚೆ ನಡೆಸಿ ಅಂತಿಮವಾಗಿ ಜನವರಿ 7ರ ರಾತ್ರಿಯಿಂದಲೇ ಒತ್ತುವರಿ ಜಾಗ ತೆರವುಗೊಳಿಸುವುದಾಗಿ ಭರವಸೆ ನೀಡಿದ ಹಿನ್ನೆಲೆಯಲ್ಲಿ ಧರಣಿ ಹಿಂಪಡೆದರು.

ಧರಣಿಯಲ್ಲಿ ಕರ್ನಾಟಕ ದಲಿತ ಸಂಘರ್ಷ ಸಮಿತಿ (ಅಂಬೇಡ್ಕರ್ ವಾದ) ಜಿಲ್ಲಾ ಸಂಚಾಲಕ ಮುರುಳಿ ಕುಂದೂರು ಹಾಗೂ ಸ್ಥಳೀಯ ದಲಿತ ಮುಖಂಡರು ಭಾಗವಹಿಸಿದ್ದರು.

# ನಗರಸಭೆ ಮೇಲ್ದರ್ಜೆ ಪ್ರಸ್ತಾವನೆಗೆ ವಿರೋಧ

• ಉದಯವಾಹಿನಿ ಕೋಲಾರ

ಕೋಲಾರ ನಗರಸಭೆಯನ್ನು ನಗರ ಪಾಲಿಕೆಯಾಗಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆಗೆ ನಗರಸಭೆಯ ಕೆಲ ಸದಸ್ಯರು, ಸುತ್ತಲಿನ ಗ್ರಾಮ ಪಂಚಾಯಿತಿಯ ಕೆಲ ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರು ಹಾಗೂ ಕೆಲ ನಾಗರಿಕರು ವಿರೋಧ ವ್ಯಕ್ತಪಡಿಸಿದರು. ನಗರ ಪಾಲಿಕೆಯಾಗಿ ಮೇಲ್ದರ್ಜೆಗೇರಿಸುವ ಕುರಿತು ಜಿಲ್ಲಾಧಿಕಾರಿಯು ಪೌರಾಡಳಿತ ನಿರ್ದೇಶನಾಲಯಕ್ಕೆ ಪ್ರಸ್ತಾವ ಸಲ್ಲಿಸಿದ್ದು, ಈ ಸಂಬಂಧ ನಗರದ ಪತ್ರಕರ್ತರ ಭವನದಲ್ಲಿ ಸಾಧಕ ಬಾಧಕಗಳ ಬಗ್ಗೆ ಚರ್ಚಿಸಿದರು. ಕೊಂಡರಾಜನಹಳ್ಳಿ, ಅರಾಭಿಕೊತ್ತನೂರು, ನರಸಾಪುರ, ಬೆಳ್ಳೂರು, ಅರಹಳ್ಳಿ, ದೊಡ್ಡಹಸಾಳ, ಹೊನ್ನೇನಹಳ್ಳಿ, ಸೂಲೂರು ಸೇರಿಸಿಕೊಂಡು ಪಾಲಿಕೆಯಾಗಿ ಮೇಲ್ದರ್ಜೆಗೇರಿಸಲು ಈಗಾಗಲೇ ಪ್ರಸ್ತಾಪ ಕಳುಹಿಸಲಾಗಿದೆ.

ಪ್ರಸ್ತಾಪದಲ್ಲಿರುವ ಎಲ್ಲಾ ಗ್ರಾಮ ಪಂಚಾಯಿತಿಗಳ ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರು ಹಾಗೂ ನಗರಸಭೆಯ ಸದಸ್ಯರು ಮತ್ತೊಮ್ಮೆ ಸಭೆ ಸೇರಿ ಸಾಧಕ ಬಾಧಕ ಬಗ್ಗೆ ಚರ್ಚಿಸಿ ನಿರ್ಣಯ ಕೈಗೊಂಡು ಜಿಲ್ಲಾಧಿಕಾರಿ, ಶಾಸಕರು, ಸಚಿವರು, ಸಂಬಂಧಪಟ್ಟ ಇಲಾಖೆಗೆ ಮನವಿ ಮಾಡಲು ತೀರ್ಮಾನ ಕೈಗೊಳ್ಳಲಾಯಿತು. ನಗರಸಭೆ ಮಾಜಿ ಸದಸ್ಯ ಅಫ್ರೋಜ್ ಪಾಷಾ, ಪಾಲಿಕೆಯಾಗಿ ಮಾಡಲು ನನ್ನ ವಿರೋಧ ಇಲ್ಲ. ಆದರೆ, ತಾಂತ್ರಿಕವಾಗಿ ಕೆಲವೊಂದು ಆಕ್ಷೇಪಗಳಿವೆ. ಪಕ್ಕದಲ್ಲೇ ಇರುವ ಟಮಕ ಬಡಾವಣೆಯೇ ಇನ್ನೂ ಅಭಿವೃದ್ಧಿ ಆಗಿಲ್ಲ. ನಗರದ ಕೆಲ ಬಡಾವಣೆಗಳಲ್ಲಿ ಇನ್ನೂ ನೀರಿನ ಸಮಸ್ಯೆ ನೀಗಿಲ್ಲ. ಕೋಲಾರ ಇನ್ನೂ ಹಾಳುಕೊಂಪೆಯಾಗಿದೆ. ಮೊದಲು ನಗರ ಅಭಿವೃದ್ಧಿ ಮಾಡಿ, ರಸ್ತೆ ಅಭಿವೃದ್ಧಿ ಮಾಡಿ ನಂತರ ಪಾಲಿಕೆ ಮಾಡಿ ಎಂದರು. ಸಭೆಯಲ್ಲಿ ಅರಹಳ್ಳಿ, ಹೊನ್ನೇನಹಳ್ಳಿ, ಹೂವಳ್ಳಿ ಗ್ರಾಮ ಪಂಚಾಯಿತಿ ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರು ಇದ್ದರು.



ಉದಯವಾಹಿನಿ ಚಿತ್ರ

**ಪಾಲಿಕೆ ಮಾಡುವುದು ತಾಂತ್ರಿಕವಾಗಿ ಸರಿ ಇಲ್ಲ**

**ನಗರಸಭೆ ಸದಸ್ಯ ಮುರಳಿಗೌಡ ಮಾತನಾಡಿ, ಪಾಲಿಕೆಯಾಗಿ ಮೇಲ್ದರ್ಜೆಗೇರಲು ಪಟ್ಟಿಗೆ ಸೇರಬೇಕೆಂದು ಪ್ರಸ್ತಾಪಿಸಲಾಗಿರುವ ಕೆಲ ಗ್ರಾಮ ಪಂಚಾಯಿತಿಗಳು ಕೋಲಾರ ನಗರದಿಂದ ಬಹಳ ದೂರದಲ್ಲಿವೆ. ಈ ಪ್ರದೇಶದಲ್ಲಿ ಕೃಷಿ ಭೂಮಿ ಹೆಚ್ಚಿದೆ. ಹೀಗಾಗಿ, ಪಾಲಿಕೆ ಮಾಡುವುದು ತಾಂತ್ರಿಕವಾಗಿ ಸರಿ ಇಲ್ಲ ಎಂದು ಪ್ರತಿಪಾದಿಸಿದರು.**

# ಬಸ್ ದರ ಏರಿಕೆಗೆ ರೈತ ಸಂಘ ಖಂಡನೆ

• ಉದಯವಾಹಿನಿ, ಮುಳಬಾಗಿಲು

ಕೆ.ಎಸ್.ಆರ್.ಟಿ.ಸಿ ಬಸ್‌ದರ ಶೇ.15ರಷ್ಟು ಏರಿಕೆ ಮಾಡಿರುವುದನ್ನು ಕೂಡಲೇ ಇಳಿಕೆ ಮಾಡಿ ಸಮರ್ಪಕವಾದ ಗ್ರಾಮೀಣ ಬಸ್ ಸೇವೆ ಒದಗಿಸ ಬೇಕು. ಅವಧಿ ಮೀರಿರುವ ಸಂಚಾರಕ್ಕೆ ಯೋಗ್ಯವಲ್ಲದ ಬಸ್‌ಗಳನ್ನು ನಿಲ್ಲಿಸುವ ಜೊತೆಗೆ ಬಸ್‌ನಿಲ್ದಾಣಗಳಲ್ಲಿ ಸಾರ್ವಜನಿಕರಿಗೆ ಅಗತ್ಯವಾದ ಮೂಲಭೂತ ಸೌಕರ್ಯಗಳನ್ನು ಒದಗಿಸಬೇಕೆಂದು ರೈತ ಸಂಘದ ರಾಜ್ಯ ಉಪಾಧ್ಯಕ್ಷ ಕೆ.ನಾರಾಯಣಗೌಡ ಸಾರಿಗೆ ಸಚಿವರನ್ನು ಒತ್ತಾಯಿಸಿದರು.

ಪತ್ರಿಕಾ ಹೇಳಿಕೆ ನೀಡಿರುವ ಅವರು, ಪಂಚ ಗ್ಯಾರಂಟಿಗಳನ್ನು ನೀಡುವ ಮುಖಾಂತರ ರಾಜ್ಯದಲ್ಲಿ ಅಧಿಕಾರಕ್ಕೆ ಬಂದಿರುವ ಕಾಂಗ್ರೆಸ್ ಸರ್ಕಾರ ಜನ ಸಾಮಾನ್ಯರ ಮೇಲೆ ತಮ್ಮ ದರ್ಪವನ್ನು ತೋರುತ್ತಿದ್ದಾರೆ. ಉಚಿತ ಯೋಜನೆಗಳಿಗೆ ಹಣ ಒದಗಿಸಲು ಬಡವರ ಮೇಲೆ ಬೆಲೆ ಏರಿಕೆ ಮಾಡುವ ಮುಖಾಂತರ ತಮ್ಮ ಪೌರುಷ ತೋರಿಸುವ ಬದಲು ಎಲ್ಲಾ ಗ್ಯಾರಂಟಿಗಳನ್ನು ಹಿಂಪಡೆದು ವಚನಭ್ರಷ್ಟ ಮಾತುತಪ್ಪಿದ ಸರ್ಕಾರ ಎಂದು ಸಾರ್ವಜನಿಕವಗಿ ಒಪ್ಪಿಕೊಂಡು ರಾಜೀನಾಮೆ ನೀಡಿ ಚುನಾವಣೆಗೆ ಬರಲಿ ಎಂದು ರಾಜ್ಯ ಸರ್ಕಾರಕ್ಕೆ ಸವಾಲು ಹಾಕಿದರು.



ಉದಯವಾಹಿನಿ ಚಿತ್ರ

ಆರ್.ಟಿ.ಓ ಅಧಿಕಾರಿಗಳ ಆದೇಶದಂತೆ 10 ಲಕ್ಷ ಕಿ.ಮೀ ಓಡಿರುವ ಬಸ್ಸುಗಳನ್ನು ಗುಜರಿಗೆ ಹಾಕಬೇಕು ಅವುಗಳನ್ನು ಉಪಯೋಗಿಸುವಂತಿಲ್ಲ ಎಂದು ಆದೇಶವಿದ್ದರೂ ಅದನ್ನು ಸರಿಪಡಿಸದೆ ಎಲ್ಲಾ ಡಿಪೋಗಳಲ್ಲಿ 10 ರಿಂದ 15 ಲಕ್ಷ ಓಡಿರುವ ಬಸ್ಸುಗಳನ್ನು ಗ್ರಾಮೀಣ ಸೇವೆಗೆ ಬಿಟ್ಟು ಚಾಲಕರು ಹಾಗೂ ಗ್ರಾಮೀಣ ಪ್ರದೇಶದ ಕೂಲಿ ಕಾರ್ಮಿಕರ ಜೀವನದ ಜೊತೆ ಚೆಲ್ಲಾಟ ವಾಡುವ ಜೊತೆಗೆ ಸರ್ಕಾರಿ ಬಸ್ಸು ನಿಲ್ದಾಣಗಳಲ್ಲಿ ಮೂಲಭೂತ ಸೌಕರ್ಯಗಳಾದ ಕುಡಿಯುವ ನೀರಿನ ವ್ಯವಸ್ಥೆ ಇಲ್ಲ. ಸಿ.ಸಿ.ಕ್ಯಾಮರ ಇಲ್ಲ. ಒಟ್ಟಾರೆಯಾಗಿ ಅಭಿವೃದ್ಧಿ ಕಾಣದ ನಿಲ್ದಾಣಗಳಾಗಿ ಮಾರ್ಪಟ್ಟಿವೆ ಎಂದು ಅಸಮದಾನ ವ್ಯಕ್ತಪಡಿಸುವ ಜೊತೆಗೆ ಕೂಡಲೇ ಏರಿಕೆ ಮಾಡಿರುವ ಬಸ್ ಧರವನ್ನು ಇಳಿಕೆ ಮಾಡಿ ಸಮರ್ಪಕವಾದ ಗ್ರಾಮೀಣ ಸೇವೆ ಒದಗಿಸದೇ ಹೋದರೆ ರೈತ ಸಂಘದಿಂದ ಎಲ್ಲಾ ಬಸ್ ಡಿಪೋಗಳ ಮುಂದೆ ಜಾನುವಾರುಗಳ ಸಮೇತ ಹೋರಾಟ ಮಾಡುವ ಎಚ್ಚರಿಕೆ ನೀಡಿದರು.

**ಒಂದು ಕಡೆ ಶಕ್ತಿ ಯೋಜನೆ ಜಾರಿ ಮಾಡಿ ಮಹಿಳೆಯರಿಗೆ ಉಚಿತ ಬಸ್ ಸೇವೆ ಒದಗಿಸಿರುವ ಸರ್ಕಾರ ಎಲ್ಲಾ ಉಚಿತ ಉಚಿತ ಎಂದು ಮಹಿಳೆಯರಿಗೆ ಉಚಿತ ನೀಡಿ, ಬಸ್ ಟಿಕೇಟ್ ಏರಿಕೆ ಮಾಡಿ ಪುರಷರ ಜೇಬಿಗೆ ಕತ್ತರಿ ಹಾಕುವ ಮೂಲಕ ಸಂಸಾರಗಳಲ್ಲಿ ಒಡಕನ್ನು ಮಾಡುವ ಸರ್ಕಾರಗಳೇ ಕೆಲವೇ ದಿನಗಳಲ್ಲಿ ನಿಮ್ಮ ವಿರುದ್ದ ಪುರುಷರು ಹೋರಾಟ ಮಾಡುವ ಕಾಲ ದೂರವಿಲ್ಲವೆಂದು ಎಚ್ಚರಿಕೆ ನೀಡಿದರು**

**-ಕೆ.ನಾರಾಯಣಗೌಡ**

# ಅಕ್ರಮ ಶೆಡ್: ತೆರವು ಮಾಡಲು ನೋಟಿಸ್ ಜಾರಿ

• ಉದಯವಾಹಿನಿ ಹನೂರು

ರಾಜ್ಯ ಹೆದ್ದಾರಿ-38 ರಲ್ಲಿ ಕೊಳ್ಳೇಗಾಲ-ಹಾಸನೂರ್ ಘಾಟ್ ರಸ್ತೆಯ (ಮಸಕ್ಕತ್ತಿಹಳ್ಳ ಪಿ.ಜಿ.ಪಾಳ್ಯದ ಹತ್ತಿರ) ಬದಿಯಲ್ಲಿ ಹೊಸದಾಗಿ ಅಕ್ರಮವಾಗಿ ನಿರ್ಮಿಸಿರುವ ಶೆಡ್ ನ್ನು ತೆರವುಗೊಳಿಸುವಂತೆ ಸಹಾಯಕ ಕಾರ್ಯಪಾಲಕ ಅಭಿಯಂತರರು, ಲೋಕೋಪಯೋಗಿ ಇಲಾಖೆ, ನಂ. 8, ಉಪ-ವಿಭಾಗ, ಕೊಳ್ಳೇಗಾಲ ಇವರು ತೆರವು ಮಾಡಲು ಆದೇಶ ಹೊರಡಿಸಿದ್ದಾರೆ.

ಉಪವಿಭಾಗದ ವ್ಯಾಪ್ತಿಯಲ್ಲಿರುವ ಬರುವ ರಾಜ್ಯ ಹೆದ್ದಾರಿ-38 ರಲ್ಲಿ ಕೊಳ್ಳೇಗಾಲ - ಹಾಸನೂರ್ ಘಾಟ್ ರಸ್ತೆಯ ಸರ್ವೆ ನಂಬರ್ 38 ರಲ್ಲಿ 40 ನೇ ಕಿ.ಮೀ.ನಲ್ಲಿ (ಮಸಕ್ಕತ್ತಿಹಳ್ಳ ಪಿ.ಜಿ.ಪಾಳ್ಯದ ಹತ್ತಿರ) ರಸ್ತೆಯ ಬದಿಯಲ್ಲಿ ಹೊಸದಾಗಿ ಶೆಡ್‌ನ್ನು ನಿರ್ಮಿಸಿರುವುದು ಕಂಡು ಬಂದಿದೆ.

ಉಲ್ಲೇಖ ಪತ್ರದನ್ವಯ ಲೊಕ್ಕನಹಳ್ಳಿ ರೆವಿನ್ಯೂ ಇಲಾಖೆಯವರೊಂದಿಗೆ ಜಂಟಿಯಾಗಿ ಸ್ಥಳ ಪರಿಶೀಲನೆ ನಡೆಸಿ ಅಳತೆ ಮಾಡಿ ವರದಿ ನೀಡಲಾಗಿದೆ. ಚಿಕ್ಕರಂಗಶೆಟ್ಟಿ ದೊಡ್ಡಿಯ ತಾಂಡಶೆಟ್ಟಿ ಬಿನ್ ಚಿಕ್ಕತಾಂಡಶೆಟ್ಟಿ ಎಂಬುವರು ರಸ್ತೆಯ ಬದಿಯಲ್ಲಿ ಹೊಸದಾಗಿ ಶೆಡ್ ನಿರ್ಮಿಸಿರುವುದರಿಂದ ವಾಹನ ಸಂಚಾರಕ್ಕೆ ಅಡತಡೆಯುಂಟಾಗಬಹುದು ಹಾಗೂ ಅಪಘಾತಗಳು ಸಹ ಸಂಭವಿಸಬಹುದು.



ಉದಯವಾಹಿನಿ ಚಿತ್ರ

ಇದರಿಂದ ಮುಂದೆ ಸಂಭವಿಸಬಹುದಾದ ಆಗು ಹೋಗುಗಳಿಗೆ ತಾವೇ ಜವಾಬ್ದಾರಾಗಿರುತ್ತೀರಿ. ಆದುದರಿಂದ ರಸ್ತೆಯ ಬದಿಯಲ್ಲಿ ಹೊಸದಾಗಿ ನಿರ್ಮಿಸಿರುವ ಶೆಡ್‌ನ್ನು 15 ದಿನಗಳೊಳಗೆ ತೆರವುಗೊಳಿಸಬೇಕು ಎಂದು ನೋಟಿಸ್ ಜಾರಿ ಮಾಡಿದ್ದಾರೆ.


# ವಿರೋಧ ಪಕ್ಷದ ಮೇಲೆ ಎಚ್‌ಡಿಕೆ ವಿನಾಕಾರಣ ಆರೋಪ

• ಉದಯವಾಹಿನಿ, ಮದ್ದೂರು

ಪ್ರಧಾನ ಮಂತ್ರಿ ನರೇಂದ್ರ ಮೋದಿಯವರು ದೇಶದ ಕೈಗಾರಿಕಾ ಕ್ಷೇತ್ರದ ಅಭಿವೃದ್ಧಿ ಮತ್ತು ಯುವ ಜನತೆಗೆ ಉದ್ಯೋಗ ಸೃಷ್ಟಿಸಲಿ ಎಂಬ ಉದ್ದೇಶದಿಂದ ಸಂಸದ ಎಚ್.ಡಿ.ಕುಮಾರಸ್ವಾಮಿ ಅವರನ್ನು ಕೇಂದ್ರ ಸಚಿವರನ್ನಾಗಿ ಮಾಡಿದ್ದಾರೆ. ಆದರೆ ಸಚಿವರು ಕಾಲಹರಣ ಮಾಡುತ್ತಿದ್ದಾರೆ' ಎಂದು ಶಾಸಕ ಕೆ.ಎಂ.ಉದಯ್ ಆರೋಪಿಸಿದರು. ಪಟ್ಟಣದ ಲೀಲಾವತಿ ಬಡಾವಣೆಯಲ್ಲಿ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಚಾಲನೆ ನೀಡಿದ ನಂತರ ಅವರು ಸುದ್ದಿಗಾರರೊಂದಿಗೆ ಮಾತನಾಡಿದರು.

ವಿರೋಧ ಪಕ್ಷದವರ ಮೇಲೆ ಎಚ್.ಡಿ.ಕುಮಾರಸ್ವಾಮಿ ವಿನಾಕಾರಣ ಇಲ್ಲಸಲ್ಲದ ಆರೋಪಗಳನ್ನು ಮಾಡುತ್ತಾ ಕಾಲಹರಣಕ್ಕೆ ಮುಂದಾಗಿದ್ದಾರೆ.

ನೂರಕ್ಕೆ ಇನ್ನೂರರಷ್ಟು ಸುಳ್ಳು ಹೇಳುತ್ತಿದ್ದಾರೆ ಎಂದರು. 'ರಾಜ್ಯ ಸರ್ಕಾರದಲ್ಲಿ ಶೇಕಡಾ 60 ಪರ್ಸಂಟ್ ಕಮಿಷನ್ ದಂಧೆ ನಡೆಯುತ್ತಿದೆ ಎಂದು ಟೀಕಿಸಿರುವ ಕುಮಾರಸ್ವಾಮಿ ಹೇಳಿಕೆ ಹಾಸ್ಯಾಸ್ಪದವಾಗಿದೆ.



ಉದಯವಾಹಿನಿ ಚಿತ್ರ

ಈ ಹಿಂದೆ ಅವರ ಸರ್ಕಾರದಲ್ಲಿ ತೆಗೆದುಕೊಂಡು ಅಭ್ಯಾಸವಾಗಿರಬಹುದು, ಅದಕ್ಕೆ ಈ ರೀತಿ ನಮ್ಮ ಸರ್ಕಾರದ ಮೇಲೆ ಆರೋಪಿಸಿದ್ದಾರೆ' ಎಂದು ಹೇಳಿದರು. ಬಸ್ ಪ್ರಯಾಣ ದರ ಹೆಚ್ಚಳ ಕುರಿತು ಸ್ಪಷ್ಟನೆ ನೀಡಿದ ಶಾಸಕರು, 'ಪೆಟ್ರೋಲಿಯಂ ಉತ್ಪನ್ನಗಳು, ಬಿಡಿ ಭಾಗಗಳು, ನಿರ್ವಹಣಾ ವೆಚ್ಚ ಹಾಗೂ ಇನ್ನಿತರೆ ವಸ್ತುಗಳ ಬೆಲೆ ಏರಿಕೆ ಹಿನ್ನೆಲೆಯಲ್ಲಿ ಕೆ.ಎಸ್.ಆರ್.ಟಿ.ಸಿ ಟಿಕೆಟ್ ದರ ಹೆಚ್ಚಿಸಲಾಗಿದೆ ಎಂದು ತಿಳಿಸಿದರು.

# ಅಭಿವೃದ್ಧಿ ವಿಚಾರದಲ್ಲಿ ರಾಜಕೀಯ ಮಾಡಲ್ಲ

• ಉದಯವಾಹಿನಿ ಗುಡಿಬಂಡೆ

ಕ್ಷೇತ್ರದ ಸರ್ವತೋಮುಖ ಅಭಿವೃದ್ಧಿಯೇ ನನ್ನ ಗುರಿ, ಅಭಿವೃದ್ಧಿ ವಿಚಾರದಲ್ಲಿ ರಾಜಕೀಯ ಮಾಡಲ್ಲ. ಅಭಿವೃದ್ಧಿ ವಿಚಾರವಾಗಿ ರಾಜ್ಯ ಕಾಂಗ್ರೆಸ್ ಸರ್ಕಾರದ ಜತೆಗೂ ಚರ್ಚಿಸುತ್ತೇನೆ ಎಂದು ಸಂಸದ ಡಾ.ಕೆ.ಸುಧಾಕರ್ ತಿಳಿಸಿದರು.

ತಾಲ್ಲೂಕಿನ ಹಂಪಸಂದ್ರ ಗ್ರಾಪಂ ವ್ಯಾಪ್ತಿಯ ಚೆಂಡೂರು ಗ್ರಾಮದಲ್ಲಿ ಪ್ರಧಾನಮಂತ್ರಿ ಆದಿ ಆದರ್ಶ ಗ್ರಾಮ ಯೋಜನೆಯಲ್ಲಿ ಸುಮಾರು 20 ಲಕ್ಷ ರೂ. ವೆಚ್ಚದಲ್ಲಿ ಪರಿಶಿಷ್ಟ ಸಮುದಾಯದ ಮೂಲ ಸೌಕರ್ಯಗಳಿಗೆ ಸಂಬಂಧಪಟ್ಟ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಭೂಮಿಪೂಜೆ ನೆರವೇರಿಸಿ ಮಾತನಾಡಿದರು.

ಈ ಹಿಂದೆ ಕಾಂಗ್ರೆಸ್ ಸರ್ಕಾರ ಅಧಿಕಾರದಲ್ಲಿದ್ದಾಗ ಬುಡಕಟ್ಟು ಸಮುದಾಯಗಳ ಅಭಿವೃದ್ಧಿ ಕೇವಲ ಭಾಷಣಕ್ಕೆ ಸೀಮಿತವಾಗಿತ್ತು. ಆದರೆ, ದೇಶದಲ್ಲಿ ನರೇಂದ್ರ ಮೋದಿ ಸರ್ಕಾರ ಬಂದ ಬಳಿಕ ಬುಡಕಟ್ಟು ಸಮುದಾಯದ ಅಭಿವೃದ್ಧಿಯಾಗುತ್ತಿದೆ.

ಪರಿಶಿಷ್ಟ ಪಂಗಡಕ್ಕೆ ಸೇರಿದ ಒಬ್ಬ ಸಾಮಾನ್ಯ ಮಹಿಳೆ ಇಂದು ರಾಷ್ಟ್ರಪತಿಯಾಗಿದ್ದಾರೆ. ಕಾಂಗ್ರೆಸ್ ಸರ್ಕಾರ ಎಂದಾದರೂ ಬುಡಕಟ್ಟು ಸಮುದಾಯದ ಒಬ್ಬರನ್ನು ಇಂತಹ ಉನ್ನತ ಸ್ಥಾನಕ್ಕೆ ಆಯ್ಕೆ ಮಾಡಿದೆಯೇ ಎಂದು ಪ್ರಶ್ನಿಸಿದರು.

ಪಿಎಂ ಕಿಸಾನ್ ಯೋಜನೆಯಡಿ ವರ್ಷಕ್ಕೆ 6 ಸಾವಿರ ರೂ.ಗಳನ್ನು ನೇರವಾಗಿ ರೈತರ ಖಾತೆಗೆ ಜಮೆ ಮಾಡಲಾಗುತ್ತಿತ್ತು. ಇದರ ಜತೆಗೆ ರಾಜ್ಯದಲ್ಲಿ ಬಿಜೆಪಿ ಸರ್ಕಾರವಿದ್ದಾಗ 4 ಸಾವಿರ ರೂ. ನೀಡುತ್ತಿತ್ತು. ಆದರೆ ಕಾಂಗ್ರೆಸ್ ಸರ್ಕಾರ ಬಂದ ಮೇಲೆ 4 ಸಾವಿರ ನೀಡುವುದನ್ನು ನಿಲ್ಲಿಸಿದೆ. ಕಾಂಗ್ರೆಸ್ ಸರ್ಕಾರ ಜನರ ಯಾವುದೇ ಸಮಸ್ಯೆಗಳನ್ನು ಬಗೆಹರಿಸುತ್ತಿಲ್ಲ ಎಂದು ಆರೋಪಿಸಿದರು.

**ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಭೂಮಿಪೂಜೆ**

**ನಮ್ಮ ಮುಖಂಡರು ಕೇಂದ್ರ ಸರ್ಕಾರದ ಜನಪರ ಯೋಜನೆಗಳ ಕುರಿತು ಜನಸಾಮಾನ್ಯರಿಗೆ ತಿಳಿಸುವಂತಹ ಕೆಲಸ ಮಾಡಬೇಕು. ಪ್ರತಿ ಮನೆಗೂ ಭೇಟಿ ನೀಡಿ ಮನೆಯಲ್ಲಿ ಕೇಂದ್ರ ಸರ್ಕಾರದ ಯೋಜನೆಗಳು ದೊರೆಯುತ್ತಿವೆಯೇ? ಇಲ್ಲವೇ? ಎಂಬುದನ್ನು ಖಚಿತಪಡಿಸಿಕೊಂಡು, ಅವರಿಗೆ ಯೋಜನೆ ಸೌಲಭ್ಯ ದೊರಕಿಸಿಕೊಡಬೇಕು. ಜನರು ಯಾವುದೇ ಅಭಿವೃದ್ಧಿ ಕಾಮಗಾರಿಗಳಿಗೆ ನನ್ನನ್ನು ಸಂಪರ್ಕಿಸಿ ಎಂದರು.**

## ಮಿನಿ ನ್ಯೂಸ್

### ಶಾಸಕ ನರೇಂದ್ರಸ್ವಾಮಿಗೆ ಸಚಿವ ಸ್ಥಾನಕ್ಕಾಗಿ ಹೈಕೋರ್ಟ್ ಜಡ್ಜ್ ಹರಕೆ

• ಉದಯವಾಹಿನಿ, ಮಂಡ್ಯ

ಶಾಸಕ ಪಿ.ಎಂ. ನರೇಂದ್ರಸ್ವಾಮಿ ಅವರಿಗೆ ಸಚಿವ ಸ್ಥಾನ ಸಿಗಲಿ ಎಂದು ದೇವರಲ್ಲಿ ಹರಕೆ ಹೊರುತ್ತೇನೆ ಎಂದು ಹೈಕೋರ್ಟ್ ನ್ಯಾಯ ಮೂರ್ತಿ ಟಿ.ಜಿ. ಶಿವಶಂಕರೇಗೌಡ ಹೇಳಿದ್ದಾರೆ. ಮಂಡ್ಯ ಜಿಲ್ಲೆ ಮಳವಳ್ಳಿ ಪಟ್ಟಣದಲ್ಲಿ ವಕೀಲರ ಸಂಘ ಆಯೋಜಿಸಿದ್ದ ವಕೀಲರ ದಿನಾಚರಣೆಯಲ್ಲಿ ಅಭಿನಂದನೆ ಸ್ವೀಕರಿಸಿ ಅವರು ಮಾತನಾಡಿದರು. ಮಳವಳ್ಳಿಯ ನ್ಯಾಯಾಲಯಕ್ಕೆ ಹೊಸ ಕಟ್ಟಡ ನಿರ್ಮಾಣ ಕಾರ್ಯ ಶೀಘ್ರಗತಿಯಲ್ಲಿ ನಡೆಯುವ ನಿಟ್ಟಿನಲ್ಲಿ ಕ್ರಿಯಾಶೀಲರಾಗಿ ಕಾರ್ಯನಿರ್ವಹಿಸಿರುವ ಶಾಸಕ ನರೇಂದ್ರ ಸ್ವಾಮಿಯವರಿಗೆ ಸಚಿವ ಸ್ಥಾನ ಸಿಗಲಿ ಎಂದು ದೇವರಲ್ಲಿ ಹರಕೆ ಹೊರುತ್ತೇನೆ ಎಂದು ಹೇಳಿದ್ದಾರೆ. ಮಳವಳ್ಳಿಯಲ್ಲಿ ನ್ಯಾಯಾಲಯದ ಹೊಸ ಕಟ್ಟಡ ನಿರ್ಮಾಣಕ್ಕೆ ತೊಡಕಾಗಿದ್ದ ಜಾಗದ ಸಮಸ್ಯೆಯನ್ನು ಶಾಸಕ ನರೇಂದ್ರ ಸ್ವಾಮಿ ಬಗೆಹರಿಸಿದ್ದಾರೆ. ಈ ಭಾಗದ ಅಭಿವೃದ್ಧಿಯ ಉದ್ದೇಶದಿಂದ ಅವರಿಗೆ ಸಚಿವ ಸ್ಥಾನ ಸಿಗಲಿ ಎಂದು ಮುಡುಕುತೊರೆ ಮಲ್ಲಿಕಾರ್ಜುನ ಸ್ವಾಮಿ, ಪಾರ್ವತಿ ದೇವರಲ್ಲಿ ಹರಕೆ ಹೊರುತ್ತೇನೆ. ನರೇಂದ್ರಸ್ವಾಮಿ ಸಚಿವರಾದ ಬಳಿಕ ನಾನೇ ಖುದ್ದು ದೇವಸ್ಥಾನಕ್ಕೆ ತೆರಳಿ ಹರಕೆ ತೀರಿಸುತ್ತೇನೆ ಎಂದು ನ್ಯಾಯಮೂರ್ತಿ ಶಿವಶಂಕರೇಗೌಡ ಹೇಳಿದ್ದಾರೆ.

### ಮಾದಕ ವಸ್ತು ಮಾರಾಟ ಮೂವರು ಆರೋಪಿಗಳು ಅರೆಸ್ಟ್

• ಉದಯವಾಹಿನಿ, ಕೋಲಾರ

ಮಾದಕ ವಸ್ತುಗಳ ವಿರುದ್ಧ ಪೊಲೀಸರು ಸಮರ ಮುಂದುವರೆಸಿದ್ದಾರೆ. ಮಾದಕ ವಸ್ತುಗಳನ್ನು ಅಕ್ರಮವಾಗಿ ಮಾರಾಟ ಮಾಡುತ್ತಿದ್ದ ಮೂವರು ಆರೋಪಿಗಳನ್ನು ಕೋಲಾರ ಸಿಇಎನ್ ಠಾಣೆ ಪೊಲೀಸರು ಬಂಧಿಸಿದ್ದಾರೆ. ಸಮೀರ್ ಪಾಷಾ, ತಮೀಮ್ ಖಾನ್, ಷಹೀದ್ ಪಾಷಾ ಬಂಧಿತರು. ಬಂಧಿತರಿಂದ 20,000 ರೂ ಮೌಲ್ಯದ 5.4 ಗ್ರಾಂ ಎಂಡಿಎಂ ಮಾದಕ ವಸ್ತುಗಳನ್ನು ವಶಕ್ಕೆ ಪಡೆಯಲಾಗಿದೆ. ಅಲ್ಲದೇ ಒಂದು ಮಾರುತಿ ಸ್ವಿಫ್ಟ್ ಕಾರು, 4 ಮೊಬೈಲ್ ಹಾಗೂ 1 ಡ್ರಾಗರ್‌ಗಳನ್ನು ವಶಕ್ಕೆ ಪಡೆಯಲಾಗಿದೆ. ಕೋಲಾರ ನಗರದ ಸುಲ್ತಾನ್ ತಿಪ್ಪಸಂದ್ರ ಬಳಿ ಆರೋಪಿಗಳನ್ನು ಪೊಲೀಸರು ಬಂಧಿಸಿದ್ದಾರೆ.

### ಭೀಕರ ಅಪಘಾತ: ಬೈಕ್‌ಗೆ ಬಸ್ ಡಿಕ್ಕಿಯಾಗಿ ಇಬ್ಬರು ಸ್ಥಳದಲ್ಲೇ ಸಾವು

• ಉದಯವಾಹಿನಿ ಮಂಡ್ಯ

ಭೀಕರ ಅಪಘಾತ ಸಂಭವಿಸಿದ್ದು, ಬೈಕ್ ಗೆ ಕೆಎಸ್ ಆರ್ ಟಿಸಿ ಬಸ್ ಡಿಕ್ಕಿಯಾಗಿ ಇಬ್ಬರು ಸಾವನ್ನಪ್ಪಿದ್ದಾರೆ. ಮೃತರನ್ನು ನಾಗಸ್ವಾಮಿ, ದೊಡ್ಡಮಾದಯ್ಯ ಎಂದು ಗುರುತಿಸಲಾಗಿದೆ.

ಬೆಂಗಳೂರಿನಿಂದ ಕೊಳ್ಳೇಗಾಲಕ್ಕೆ ತೆರಳುತ್ತಿದ್ದ ಬಸ್‌ಗೆ ಬೈಕ್ ಡಿಕ್ಕಿ ಹೊಡೆದಿದೆ. ಮಳವಳ್ಳಿ ಗ್ರಾಮಾಂತರ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪೊಲೀಸರು ಪರಿಶೀಲನೆ ನಡೆಸಿದ್ದಾರೆ.

### ಬೈಕ್ ನೊಂದಣಿ ಸಂಖ್ಯೆ ಮೇಲೆ ಕಪ್ಪು ಸ್ಟಿಕ್ಕರ್: ಪ್ರಕರಣ ದಾಖಲು

• ಉದಯವಾಹಿನಿ ಮೈಸೂರು

ಸಂಚಾರಿ ನಿಯಮಗಳನ್ನ ಉಲ್ಲಂಘಿಸಿದಾಗ ದಂಡ ತಪ್ಪಿಸಿಕೊಳ್ಳಲು ಐನಾತಿ ಐಡಿಯಾ ಹಾಕಿದ ಯುವಕನೊಬ್ಬ ಪೊಲೀಸರ ಕೈಗೆ ಸಿಕ್ಕಿಬಿದ್ದಿದ್ದಾನೆ. ಬೈಕ್ ನೊಂದಣಿ ಸಂಖ್ಯೆ ಮೇಲೆ ಕಪ್ಪು ಸ್ಟಿಕ್ಕರ್ ಅಂಟಿಸಿ ಪೊಲೀಸರನ್ನೇ ಯಾಮಾರಿಸಲು ಪ್ಲಾನ್ ಮಾಡಿ ಸಿಕ್ಕಿಬಿದ್ದಿದ್ದಾನೆ.

ವಾಹನವನ್ನ ವಶಪಡಿಸಿಕೊಂಡ ವಿವಿ ಪುರಂ ಠಾಣಾ ಪೊಲೀಸರು ಪ್ರಕರಣ ದಾಖಲಿಸಿದ್ದಾರೆ. ಕೆಸರೆ ಬಡಾವಣೆ ನಿವಾಸಿ ಮೊಹಮದ್ ಮುಜಾಹಿಲ್ ಸಂಚಾರಿ ಪೊಲೀಸರ ಕೈಗೆ ಸಿಕ್ಕಿಬಿದ್ದ ಐನಾತಿ. ನೊಂದಣಿ ಸಂಖ್ಯೆಗೆ ಸ್ಟಿಕ್ಕರ್ ಅಂಟಿಸಿದ ರಾಯಲ್ ಎನ್ಫೀಲ್ಡ್ ಇದೀಗ ವಿವಿಪುರಂ ಠಾಣೆ ವಶದಲ್ಲಿದೆ.

ವಿವಿಪುರಂ ಸಂಚಾರಿ ಪೊಲೀಸರು ಆಕಾಶವಾಣಿ ಜಂಕ್ಷನ್ ಬಳಿ ಕೋಬ್ರಾ ಗಸ್ತಿನಲ್ಲಿದ್ದಾಗ ನೊಂದಣಿ ಸಂಖ್ಯೆ ಮೇಲೆ ಕಪ್ಪು ಸ್ಟಿಕ್ಕರ್ ಅಂಟಿಸಿರುವ ರಾಯಲ್ ಎನ್ಫೀಲ್ಡ್ ಬಂದಿದೆ. ಬೈಕ್ ತಡೆಹಿಡಿದು ಯುವಕನನ್ನ ಪ್ರಶ್ನಿಸಿದಾಗ ತಬ್ಬಿಬ್ಬಾಗಿದ್ದಾನೆ. ನೊಂದಣಿ ಸಂಖ್ಯೆ ಎಂ09 ಇಗಿ4884 ಮೇಲೆ ಕೊನೆ ಮೂರು ನಂಬರ್ (884) ಗೆ ಕಪ್ಪು ಸ್ಟಿಕ್ಕರ್ ಅಂಟಿಸಿದ್ದಾನೆ. ವಾಹನವನ್ನ ವಶಕ್ಕೆ ಪಡೆದು ಪರಿಶೀಲನೆ ನಡೆಸಿದಾಗ ಸಂಚಾರಿ ನಿಯಮಗಳನ್ನ ಉಲ್ಲಂಘಿಸಿದ ವೇಳೆ ವಿಧಿಸುವ ದಂಡ ತಪ್ಪಿಸಿಕೊಳ್ಳಲು ಉದ್ದೇಶಪೂರ್ವಕವಾಗಿ ಸ್ಟಿಕ್ಕರ್ ಅಂಟಿಸಿರುವುದು ಖಚಿತವಾಗಿದೆ. ವಾಹನ ಮಾಲೀಕ ಮೊಹಮದ್ ಮುಜಾಹಿಲ್ ಸಮೇತ ರಾಯಲ್ ಎನ್ಫೀಲ್ಡ್ ನ ವಶಪಡಿಸಿಕೊಂಡ ಸಂಚಾರಿ ಠಾಣೆ ಎಎಸ್ಐ ವೀರಭದ್ರಪ್ಪನವರು ವಿವಿ ಪುರಂ ಠಾಣೆಗೆ ಒಪ್ಪಿಸಿ ಪ್ರಕರಣ ದಾಖಲಿಸಿದ್ದಾರೆ.

# ಸ್ವಾಭಿಮಾನಿ ಸೇವಾ ಸಮಿತಿಯಿಂದ ಫುಲೆ ಜನ್ಮ ದಿನಾಚರಣೆ

## • ಜ್ಞಾನದ ಬೆಳಕು ತೋರಿದ ಈ ದಂಪತಿಯ ಸಾಧನೆಯು ದೇಶದ ಚರಿತ್ರೆಯಲ್ಲಿ ಅಜರಾಮರ

• ಉದಯವಾಹಿನಿ ರಾಮನಗರ

ಮಹಿಳೆಯರು ಹಾಗೂ ಶೋಷಿತ ಸಮುದಾಯದವರಿಗೆ ಅಕ್ಷರ ದೀಕ್ಷೆ ಕೊಟ್ಟು ಶಿಕ್ಷಣದ ಬಾಗಿಲು ತೆಗೆದ ಜ್ಯೋತಿಬಾ ಫುಲೆ ಹಾಗೂ ಸಾವಿತ್ರಿಬಾ ಫುಲೆ ಅವರನ್ನು ನಾವು ಸದಾ ಸ್ಮರಿಸಬೇಕು. ನಮಗೆ ಜ್ಞಾನದ ಬೆಳಕು ತೋರಿದ ಈ ದಂಪತಿಯ ಸಾಧನೆಯು ದೇಶದ ಚರಿತ್ರೆಯಲ್ಲಿ ಅಜರಾಮರವಾಗಿದೆ ಎಂದು ನಗರಸಭೆ ಅಧ್ಯಕ್ಷ ಕೆ. ಶೇಷಾದ್ರಿ, ಶಶಿ ಬಣ್ಣಿಸಿದರು.

ಸ್ವಾಭಿಮಾನಿ ಸೇವಾ ಸಮಿತಿಯು ನಗರದ ಎಂ.ಎಚ್. ಸಮೂಹ ಶಿಕ್ಷಣ ಸಂಸ್ಥೆಯ ಸಭಾಂಗಣದಲ್ಲಿ ಇತ್ತೀಚೆಗೆ ಹಮ್ಮಿಕೊಂಡಿದ್ದ ಸಾವಿತ್ರಿಬಾ ಫುಲೆ ಜನ್ಮ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ತಮಗೆ ಶಿಕ್ಷಣ, ರಾಜಕೀಯ, ಆರ್ಥಿಕ ಹಾಗೂ ಸಾಮಾಜಿಕವಾಗಿ ದಾರಿ ತೋರಿದ ಮಹಾನ್ ಪುರುಷರನ್ನು ಶೋಷಿತ ಸಮುದಾಯಗಳು ಸದಾ ನೆನೆಯಬೇಕು. ಅವರ ಸಾಧನೆ ಹಾಗೂ ಆದರ್ಶಗಳನ್ನು ಮುಂದಿನ ತಲೆಮಾರಿಗೆ ತಿಳಿಸಬೇಕು' ಎಂದರು.

ಈ ದೇಶದಲ್ಲಿ ದಲಿತರಷ್ಟೇ ಮಹಿಳೆಯರು ಕೂಡ ಶೋಷಣೆಗೆ ಒಳಗಾಗುತ್ತಲೇ ಬಂದಿದ್ದಾರೆ. ಸಮಿತಿ ಅಧ್ಯಕ್ಷ ಗವಿಯಯ್ಯ ಎಸ್. ಪ್ರಾಸ್ತಾವಿಕ ಮಾತುಗಳನ್ನಾಡಿದರು. ಸಮಿತಿ ಹೊರತಂದಿರುವ 2025ರ ಕ್ಯಾಲೆಂಡರ್ ಅನ್ನು ಗಣ್ಯರು ಇದೇ ಸಂದರ್ಭದಲ್ಲಿ ಬಿಡುಗಡೆ ಮಾಡಿದರು. ಸಮಿತಿಯ ಗಂಗಾಧರ್ ಗಣ್ಯರನ್ನು ಸ್ವಾಗತಿಸಿದರು.



ಉದಯವಾಹಿನಿ ಚಿತ್ರ

**ದೇಶದ ಚರಿತ್ರೆಯಲ್ಲಿ ಅಜರಾಮರ**

**ಹೆಣ್ಣು ಮಕ್ಕಳಿಗೆ ಮೊದಲ ಬಾರಿಗೆ ಶಿಕ್ಷಣ ನೀಡಿ ಫುಲೆ ದಂಪತಿಯ ಸಾಧನೆ ಅಮೋಘವಾದುದು. ಅವರು ಆರಂಭಿಸಿದ ಶಿಕ್ಷಣ ಚಳವಳಿಯಲ್ಲಿ ಎಷ್ಟೇ ಅಡೆತಡೆಗಳು ಎದುರಾದರೂ ಹಿಂದಕ್ಕೆ ಹೆಜ್ಜೆ ಇಡದೆ ತಮ್ಮ ಗುರಿ ಸಾಧನೆ ಮಾಡಿದ್ದರಿಂದ ಹೆಣ್ಣು ಮಕ್ಕಳ ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ಸಿಕ್ಕಿದೆ' ಎಂದರು.**

**-ಸತೀಶ್ ಕೆ., ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ**

**ಮಹಿಳೆಯರ ಶಿಕ್ಷಣ ಒತ್ತು**

**ಫುಲೆ ದಂಪತಿ ಶೋಷಿತ ಸಮುದಾಯಗಳ ಜೊತೆಗೆ ಮಹಿಳೆಯರ ಶಿಕ್ಷಣ ಹಾಗೂ ಸಬಲೀಕರಣಕ್ಕೆ ಒತ್ತು ನೀಡಿ ದೊಡ್ಡ ಮಟ್ಟದ ಚಳವಳಿ ಆರಂಭಿಸಿದ್ದರು. ಹಾಗಾಗಿ, ಲಿಂಗಬೇಧ ಮಾಡದೆ ಎಲ್ಲರೂ ಹೆಣ್ಣು ಮಕ್ಕಳ ಶಿಕ್ಷಣಕ್ಕೆ ಹೆಚ್ಚು ಒತ್ತು ನೀಡಬೇಕು. ಆಗ ಮಾತ್ರ ಸಮ ಸಮಾಜ ನಿರ್ಮಾಣ ಸಾಧ್ಯ' ಎಂದು ಅಭಿಪ್ರಾಯಪಟ್ಟರು.**

ಪ್ರಧಾನ ಕಾರ್ಯದರ್ಶಿ ಆರ್.ಸಿ. ವಿಜಯಕುಮಾರ್ ನಿರೂಪಣೆ ಮಾಡಿದರು.

ಕಾರ್ಯಕ್ರಮದಲ್ಲಿ ನಗರಸಭೆ ಸದಸ್ಯರಾದ ಕೆ. ರಮೇಶ್, ಪದ್ಮಶ್ರೀ ಜಯರಾಮ್, ಎಂ.ಎಚ್. ಸಮೂಹ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಚಂದ್ರಶೇಖರ್ ಎಚ್. ಸ್ವಾಭಿಮಾನಿ ಸೇವಾ ಸಮಿತಿ ಸಂಸ್ಥಾಪಕ ಅಧ್ಯಕ್ಷ ಸಿದ್ದರಾಜು ಸಿ., ತಾಲ್ಲೂಕು ಸಮಿತಿ ಅಧ್ಯಕ್ಷ ಪುರುಷೋತ್ತಮ್, ಸರ್ಕಾರಿ ನೌಕರರ ಸಂಘದ ನಿರ್ದೇಶಕ ಶಿವಸ್ವಾಮಿ, ಎಸ್‌ಸಿ ಮತ್ತು ಎಸ್‌ಟಿ ನೌಕರರ ಸಮನ್ವಯ ಸಮಿತಿ ಜಿಲ್ಲಾಧ್ಯಕ್ಷ ಜೈ ಪ್ರಕಾಶ್, ದಲಿತ ಸಂಘಟನೆಗಳ ಒಕ್ಕೂಟದ ಅಧ್ಯಕ್ಷ ಶಿವಕುಮಾರಸ್ವಾಮಿ, ರಾಜ್ಯ ಪೌರ ನೌಕರರ ಸಂಘದ ಉಪಾಧ್ಯಕ್ಷ ಆರ್. ನಾಗರಾಜು ಇದ್ದರು.

# ಕ್ಯಾಬಿನೆಟ್ ಮೀಟಿಂಗ್ ನಿಗದಿ

• ಉದಯವಾಹಿನಿ ಚಾಮರಾಜನಗರ

ಸಂಕ್ರಾಂತಿ ಹಬ್ಬದ ಮರುದಿನ ಕ್ಯಾಬಿನೆಟ್ ಮೀಟಿಂಗ್‌ಗೆ ದಿನಾಂಕ ನಿಗದಿಯಾಗಿದ್ದು, ಚಾಮರಾಜನಗರ ಜಿಲ್ಲೆಯ ಮಲೆ ಮಹದೇಶ್ವರ ಬೆಟ್ಟದಲ್ಲಿ ಸಚಿವ ಸಂಪುಟ ಸಭೆ ನಡೆಸಲು ಸರ್ಕಾರ ಮುಂದಾಗಿದೆ. ಫೆಬ್ರವರಿ 15 ಮತ್ತು 16 ರಂದು ಸಿಎಂ ಸಿದ್ದರಾಮಯ್ಯ ಚಾಮರಾಜನಗರ ಪ್ರವಾಸ ಕೈಗೊಳ್ಳಲಿದ್ದಾರೆ. ಈ ಹಿನ್ನೆಲೆಯಲ್ಲಿ ಫೆಬ್ರವರಿ 15 ರಂದು ಸಚಿವ ಸಂಪುಟ ಸಭೆಗೆ ದಿನಾಂಕ ನಿಗದಿಯಾಗಿದೆ. ಜಿಲ್ಲಾ ಉಸ್ತುವಾರಿ ಸಚಿವ ಕೆ.ವೆಂಕಟೇಶ್, ಸ್ಥಳೀಯ ಶಾಸಕ ಮಂಜುನಾಥ್ ನೇತೃತ್ವದಲ್ಲಿ ಸ್ಥಳ ಪರಿಶೀಲನೆ ನಡೆಸಲಾಯಿತು. ಸಚಿವ ಸಂಪುಟ ಸಭೆಗಾಗಿ ಮಲೆ ಮಹದೇಶ್ವರ ಬೆಟ್ಟದಲ್ಲಿ ಸಕಲ ಸಿದ್ಧತೆ ನಡೆಯುತ್ತಿದೆ.



ಸಭೆಗೆ ಬರುವ ಗಣ್ಯರಿಗೆ ಯಾವುದೇ ತೊಂದರೆ ಆಗದಂತೆ ಸಕಲ ವ್ಯವಸ್ಥೆ ಕಲ್ಪಿಸುವ ನಿಟ್ಟಿನಲ್ಲಿ ಪ್ರಾಧಿಕಾರ ಸಿದ್ಧತಾ ಕಾರ್ಯ ಕೈಗೊಂಡಿದೆ.

ಈ ಮಧ್ಯೆ ಜಿಲ್ಲಾ ಉಸ್ತುವಾರಿ ಸಚಿವ ಕೆ.ವೆಂಕಟೇಶ್ ಸಂಜೆಯೇ ಮಲೆ ಮಹದೇಶ್ವರ ಬೆಟ್ಟಕ್ಕೆ ಭೇಟಿ ಕೊಟ್ಟು ಇಂದು ಸ್ಥಳೀಯ ಶಾಸಕರ ಸಮ್ಮುಖದಲ್ಲಿ ಸ್ಥಳ ಪರಿಶೀಲನೆ ನಡೆಸಿದ್ದಾರೆ.

ಉಸ್ತುವಾರಿ ಸಚಿವರ ಜೊತೆಗೆ ಜಿಲ್ಲಾಧಿಕಾರಿ ಶಿಲ್ಪನಾಗ್, ಪ್ರಾಧಿಕಾರ ಕಾರ್ಯದರ್ಶಿ ರಘು ಸೇರಿದಂತೆ ಹಲವು ಅಧಿಕಾರಿಗಳು ಭಾಗಿಯಾಗಿದ್ದರು. ಇನ್ನು ಸೂಕ್ತ ವ್ಯವಸ್ಥೆ ಕಲ್ಪಿಸಲು ಅಧಿಕಾರಿಗಳಿಗೆ ಉಸ್ತುವಾರಿ ಸಚಿವ ಕೆ ವೆಂಕಟೇಶ್ ಸೂಚನೆ ನೀಡಿದರು.

# ಅಧ್ಯಕ್ಷ ಸ್ಥಾನದ ಬಗ್ಗೆ ಪಕ್ಷದಲ್ಲಿ ಚರ್ಚೆ ನಡೆದಿಲ್ಲ

• ಉದಯವಾಹಿನಿ ಚನ್ನಪಟ್ಟಣ

ಪಕ್ಷದ ರಾಜ್ಯ ಘಟಕದ ಅಧ್ಯಕ್ಷ ಸ್ಥಾನದ ಬಗ್ಗೆ ಪಕ್ಷದ. ಚೌಕಟ್ಟಿನಲ್ಲಿ ಯಾವುದೇ ಚರ್ಚೆ ಆಗಿಲ್ಲ ಎಂದು ಜೆಡಿಎಸ್ ಯುವ ಘಟಕದ ರಾಜ್ಯ ಘಟಕದ ಅಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಹೇಳಿದ್ದಾರೆ. ಸುದ್ದಿಗಾರರ ಜತೆ ಮಾತನಾಡಿದ ಅವರು, ಪಕ್ಷದ ರಾಜ್ಯ ಅಧ್ಯಕ್ಷರ ನೇಮಕದ ವಿಚಾರ ಗಮನಕ್ಕೆ ಬಂದಿಲ್ಲ. ಎಚ್.ಡಿ.ಕುಮಾರಸ್ವಾಮಿ ಅವರೇ ಸದ್ಯ ಅಧ್ಯಕ್ಷ ಸ್ಥಾನದಲ್ಲಿ ಮುಂದುವರೆಯುತ್ತಾರೆ. ಮುಂದೆ ಕಾರ್ಯಕರ್ತರು ಬಯಸಿದ ಹಾಗೆ ಆಗಲಿದೆ ಎಂದು ಸ್ಪಷ್ಟಪಡಿಸಿದರು. ಮಾರ್ಚ್, ಏಪ್ರಿಲ್‌ನಲ್ಲಿ ಜಿಲ್ಲಾ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ ಚುನಾವಣೆ ನಡೆಯುವ ಸಾಧ್ಯತೆ ಇದೆ. ಚುನಾವಣೆಗೆ ಸಿದ್ಧತೆ ಕುರಿತು ಚರ್ಚಿಸಲು ಎಚ್.ಡಿ.ಕುಮಾರಸ್ವಾಮಿ ನೇತೃತ್ವದಲ್ಲಿ ಜ.12ರಂದು ಪಕ್ಷದ ಕಚೇರಿಯಲ್ಲಿ ಸಭೆ ಕರೆಯಲಾಗಿದೆ ಎಂದು ತಿಳಿಸಿದರು.

# ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಮಧ್ಯಾಹ್ನ | 01:30 ರಿಂದ 03:00 |
| ಗುಳಿಕ ಕಾಲ | ಬೆಳಿಗ್ಗೆ | 09:00 ರಿಂದ 10:30 |
| ಯಮಗಂಡ ಕಾಲ | ಬೆಳಿಗ್ಗೆ | 06:00 ರಿಂದ 07:30 |

**ಮೇಷ** ನಿಮ್ಮ ಭಾವನೆಗಳನ್ನು ನಿಯಂತ್ರಿಸಲು ನಿಮಗೆ ಕಷ್ಟವಾಗಬಹುದು – ನಿಮ್ಮ ಅಸಾಮಾನ್ಯ ವರ್ತನೆ ನಿಮ್ಮ ಸುತ್ತಲಿನ ಜನರನ್ನು ಗೊಂದಲದಲ್ಲಿ ಕೆಡವಬಹುದು ಮತ್ತು ನಿಮ್ಮನ್ನು ನಿರಾಸೆಗೊಳಿಸಬಹುದು.

**ವೃಷಭ** ದೀರ್ಘಕಾಲದ ಲಾಭಗಳಿಗೆ ಸ್ಟಾಕ್‌ಗಳು ಮತ್ತು ಮ್ಯೂಚುವಲ್ ಫಂಡ್‌ಗಳಲ್ಲಿ ಹೂಡಿಕೆ ಮಾಡುವುದನ್ನು ಶಿಫಾರಸು ಮಾಡಲಾಗಿದೆ. ಇತರರಿಗೆ ಮುಜುಗರ ಉಂಟುಮಾಡಬೇಡಿ.

**ಮಿಥುನ** ನೀವು ಸಾಕಷ್ಟು ವಿಶ್ರಾಂತಿ ತೆಗೆದುಕೊಳ್ಳುತ್ತಿರದಿದ್ದಲ್ಲಿ ನಿಮಗೆ ತುಂಬಾ ದಣಿವಾದಂತೆನಿಸುತ್ತದೆ ಮತ್ತು ನಿಮಗೆ ಅಧಿಕ ವಿಶ್ರಾಂತಿ ಬೇಕಾಗುತ್ತದೆ. ಹಣದ ಚಲನೆ ದಿನವಿಡೀ ಮುಂದುವರಿಯುತ್ತದೆ.

**ಕರ್ಕಾಟಕ** ವಿಶೇಷವಾಗಿ ಹೊರಗಿಟ್ಟ ಆಹಾರ ತಿನ್ನುವಾಗ ವಿಶೇಷ ಮುನ್ನೆಚ್ಚರಿಕೆ ತೆಗೆದುಕೊಳ್ಳಬೇಕು. ಆದರೆ ಅನಗತ್ಯ ಒತ್ತಡ ಕೇವಲ ನಿಮಗೆ ಮಾನಸಿಕ ಉದ್ವೇಗ ಉಂಟುಮಾಡುತ್ತದೆ.

**ಸಿಂಹ** ಅತಿಯಾಗಿ ತಿನ್ನುವುದು ಮತ್ತು ಹೆಚ್ಚಿನ ಕ್ಯಾಲೊರಿ ಆಹಾರವನ್ನು ತಪ್ಪಿಸಬೇಕು. ಯಾವುದೇ ಆಪ್ತ ಸಂಬಂಧಿಕರ ಬೆಂಬಲದಿಂದ ನೀವು ನಿಮ್ಮ ವ್ಯಾಪಾರದಲ್ಲಿ ಉತ್ತಮವಾಗಿ ಮಾಡಬಹುದು.

**ಕನ್ಯಾ** ಇತರರನ್ನು ಟೀಕಿಸುವ ನಿಮ್ಮ ಅಭ್ಯಾಸದಂದಾಗಿ ಇಂದು ನೀವೇ ಕೆಲವು ಟೀಕೆಗಳನ್ನು ಎದುರಿಸುವ ಸಾಧ್ಯತೆಗಳಿವೆ. ನಿಮ್ಮ ಹಾಸ್ಯಪ್ರಜ್ಞೆ ಜಾಗೃತವಾಗಿರಲಿ ಮತ್ತು ನಿಮ್ಮ ಸ್ವರಕ್ಷಣೆ ಕಡಿಮೆಯಿರಲಿ.

**ತುಲಾ** ಹೊರಾಂಗಣ ಕ್ರೀಡೆ ನಿಮ್ಮನ್ನು ಸೆಳೆಯುತ್ತದೆ–ಧ್ಯಾನ ಮತ್ತು ಯೋಗ ಲಾಭ ತರುತ್ತವೆ. ಹಣಕ್ಕೆ ಸಂಬಂಧಿಸಿದ ಯಾವುದೇ ಸಮಸ್ಯೆಯನ್ನು ಇಂದು ಪರಿಹರಿಸಬಹುದು ಮತ್ತು ನೀವು ಹಣದಿಂದ ಲಾಭ ಪಡೆಯಬಹುದು.

**ವೃಶ್ಚಿಕ** ನಿಮ್ಮ ಆರೋಗ್ಯವು ಆರೋಗ್ಯಕರವಾಗಿರುತ್ತದೆ ಎಂದು ನಿರೀಕ್ಷಿಸಲಾಗಿದೆ. ಇಂದು ವ್ಯಾಪಾರದಲ್ಲಿ ಉತ್ತಮ ಲಾಭವನ್ನು ಗಳಿಸುವ ಸಾಧ್ಯತೆ ಇದೆ. ಇಂದಿನ ದಿನ ನೀವು ನಿಮ್ಮ ವ್ಯಾಪಾರಕ್ಕೆ ಹೊಸ ಎತ್ತರವನ್ನು ನೀಡಬಹುದು.

**ಧನಸ್ಸು** ನಿಮ್ಮ ಮೇಲಿನವರಿಗೆ ನೆಪಗಳಲ್ಲಿ ಆಸಕ್ತಿಯಿಲ್ಲ. ಅವರ ಬಳಿ ಒಳ್ಳೆಯ ಅಭಿಪ್ರಾಯ ಇರಿಸಿಕೊಳ್ಳಲು ನಿಮ್ಮ ಕೆಲಸವನ್ನು ಚೆನ್ನಾಗಿ ಮಾಡಿ. ಅಪರಿಚಿತ ವ್ಯಕ್ತಿಗಳೊಂದಿಗೆ ಮಾತನಾಡುವುದು ಸರಿಯಿಲ್ಲ.

**ಮಕರ** ಇಂದು ಮನೆಯ ದೊಡ್ಡವರಿಂದ ಹಣವನ್ನು ಹಣವನ್ನು ಸಂಗ್ರಹಿಸುವ ಸಲಹೆ ತೆಗೆದುಕೊಳ್ಳಿ. ಕುಟುಂಬದ ಸದಸ್ಯರ ಖುಷಿಯ ಸ್ವಭಾವ ಮನೆಯಲ್ಲಿನ ವಾತಾವರಣವನ್ನು ಹಗುರಗೊಳಿಸುತ್ತದೆ.

**ಕುಂಭ** ಸಣ್ಣ ಸಣ್ಣ ವಿಷಯಗಳು ನಿಮ್ಮ ಮನಸ್ಸು ಕೆಡಿಸಲು ಬಿಡಬೇಡಿ. ಊಹೆಗಳು ಲಾಭ ತರುತ್ತವೆ. ದಿನದಲ್ಲಿ ಅನಿರೀಕ್ಷಿತವಾದ ಒಳ್ಳೆಯ ಸುದ್ದಿ ಇಡೀ ಕುಟುಂಬಕ್ಕೆ ಸಂತೋಷ ಮತ್ತು ಆನಂದ ತೆರೆದಿಡುತ್ತದೆ.

**ಮೀನ** ನಿಮ್ಮ ಅತ್ಯಂತ ಪ್ರೀತಿಯ ಕನಸು ನನಸಾಗುತ್ತದೆ. ಆದರೆ ತುಂಬಾ ಸಂತೋಷ ಸ್ವಲ್ಪ ಸಮಸ್ಯೆಗಳನ್ನು ಉಂಟುಮಾಡಬಹುದಾದ್ದರಿಂದ ನಿಮ್ಮ ಉತ್ಸಾಹವನ್ನು ನಿಯಂತ್ರಣದಲ್ಲಿರಿಸಿಕೊಳ್ಳಿ.

# ಹಾವೇರಿ ನಗರಸಭೆ: 31.76 ಕೋಟಿ ಅಂದಾಜು ಆಯವ್ಯಯಕ್ಕೆ ಸಿದ್ಧತೆ

## • 2024ರ ಡಿಸೆಂಬರ್ 31ರವರೆಗೆ ವಿವಿಧ ಮೂಲಗಳಿಂದ 16.48 ಕೋಟಿ ಆದಾಯ ಸಂಗ್ರಹವಾಗಿದೆ

• **ಉದಯವಾಹಿನಿ ಹಾವೇರಿ**

ನಗರಸಭೆಯ 2025–26ನೇ ಸಾಲಿನ ಆಯವ್ಯಯ ಮಂಡಿಸಲು ಸಿದ್ಧತೆ ನಡೆದಿದ್ದು, ಪೂರ್ವಭಾವಿ ಬಜೆಟ್ ಮಂಡಿಸಿ ಚರ್ಚಿಸಲಾಯಿತು.

ಸಾರ್ವಜನಿಕರ ಅಭಿಪ್ರಾಯವನ್ನೂ ಸಂಗ್ರಹಿಸಲಾಯಿತು. ನಗರಸಭೆ ಅಧ್ಯಕ್ಷರಾದ ಶಶಿಕಲಾ ಮಾಳಗಿ ಹಾಗೂ ಉಪಾಧ್ಯಕ ಮಲ್ಲಿಕಾರ್ಜುನ ಸಾತೇನಹಳ್ಳಿ ಸಮ್ಮುಖದಲ್ಲಿ ಪೂರ್ವಭಾವಿ ಸಭೆ ಜರುಗಿತು.

**ಹಾವೇರಿ ಅಭಿವೃದ್ಧಿ ಬಗ್ಗೆ ಸಾರ್ವಜನಿಕರ ಅಭಿಪ್ರಾಯ**

ವಿಷಯ ಪ್ರಸ್ತಾಪಿಸಿದ ಅಧಿಕಾರಿಗಳು, 2024ರ ಡಿಸೆಂಬರ್ 31ರವರೆಗೆ ವಿವಿಧ ಮೂಲಗಳಿಂದ 16.48 ಕೋಟಿ ಆದಾಯ ಸಂಗ್ರಹವಾಗಿದೆ.

ವಿವಿಧ ಕಾಮಗಾರಿ, ನಿರ್ವಹಣೆ ಹಾಗೂ ಇತರ ಕೆಲಸಗಳಿಗಾಗಿ 21.97 ಕೋಟಿ ಖರ್ಚಾಗಿದೆ.

2025–26ನೇ ಸಾಲಿನಲ್ಲಿ 31.95 ಕೋಟಿ ಆದಾಯ ಸಂಗ್ರಹವಾಗುವ ನಿರೀಕ್ಷೆ ಇದೆ.

ಜೊತೆಗೆ, 31.76 ಕೋಟಿ ಖರ್ಚಾಗಬಹುದೆಂದು ಅಂದಾಜಿಸಲಾಗಿದೆ ಎಂದು ಹೇಳಿದರು.

ಹೊಸ ರಸ್ತೆ–ಗಟಾರ ನಿರ್ಮಾಣ, ಪೈಪ್ ಅಳವಡಿಕೆ, ಪಂಪ್‌ಸೆಟ್ ಖರೀದಿ, ರಸ್ತೆ ದುರಸ್ತಿ, ನಗರ ನೈರ್ಮಲೀಕರಣ, ಪಂಪ್‌ಸೆಟ್–ಮೋಟಾರ್ ದುರಸ್ತಿ, ಬೀದಿ ದೀಪಗಳ ನಿರ್ವಹಣೆ, ಉದ್ಯೋಗಿಗಳ ಹಾಗೂ ಪೌರ ಕಾರ್ಮಿಕರ ವೇತನ ಸೇರಿದಂತೆ ವಿವಿಧ ಕೆಲಸಗಳಿಗಾಗಿ ಅಂದಾಜು ಆಯವ್ಯಯದಲ್ಲಿ ಹಣ ನಿಗದಿಪಡಿಸಲಾಗಿದೆ' ಎಂದು ಮಾಹಿತಿ ನೀಡಿದರು.

**ವೃತ್ತಗಳಲ್ಲಿ ಸಿಗ್ನಲ್ ಅಳವಡಿಕೆ:** 'ಹಾವೇರಿಯ ಕಾಗಿನೆಲೆ ರಸ್ತೆ ವೃತ್ತದಲ್ಲಿ ನಿತ್ಯವೂ ದಟ್ಟಣೆ ಉಂಟಾಗುತ್ತಿದ್ದು ಅಪಘಾತಗಳು ಸಂಭವಿಸುತ್ತಿವೆ. ಈ ವೃತ್ತದಲ್ಲಿ ಸಿಗ್ನಲ್ ಅಳವಡಿಕೆ ಮಾಡಬೇಕು. ವಾಹನಗಳ ಸುಗಮ ಸಂಚಾರಕ್ಕಾಗಿ ಪೊಲೀಸ್ ಸಿಬ್ಬಂದಿಯನ್ನು ನಿಯೋಜಿಸಬೇಕು' ಎಂದು ಜನರು ಒತ್ತಾಯಿಸಿದರು. ನಗರಸಭೆಯ ಪ್ರಭಾರಿ ಪೌರಾಯುಕ್ತರೂ ಆಗಿರುವ ಉಪವಿಭಾಗಾಧಿಕಾರಿ ಚನ್ನಪ್ಪ, 'ಹಾವೇರಿ ಬೆಳೆದಿದೆ. ಕಾಗಿನೆಲೆ ರಸ್ತೆ ವೃತ್ತ ಮಾತ್ರವಲ್ಲದೇ.


ಉದಯವಾಹಿನಿ ಚಿತ್ರ

> ಹಾವೇರಿ ಅಭಿವೃದ್ಧಿ ಬಗ್ಗೆ ಸಾರ್ವಜನಿಕರ ಅಭಿಪ್ರಾಯ ಸಂಗ್ರಹಿಸಲಾಗಿದ್ದು ಎಲ್ಲವನ್ನೂ ಪರಿಗಣಿಸಿ ಅಂತಿಮ ಆಯವ್ಯಯ ಸಿದ್ಧಪಡಿಸಲಾಗುವುದು.
> **-ಶಶಿಕಲಾ ಮಾಳಗಿ ನಗರಸಭೆ ಅಧ್ಯಕ್ಷೆ**

ಪ್ರಮುಖ ವೃತ್ತಗಳಲ್ಲಿ ಸಿಗ್ನಲ್ ಅಳವಡಿಕೆ ಮಾಡಬೇಕು. ಇದಕ್ಕಾಗಿ ಪ್ರಸ್ತಾವ ಸಲ್ಲಿಸಿ' ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಹಾವೇರಿಯ ಜನರು, ಪ್ರಜ್ಞಾವಂತರಾಗಬೇಕಿದೆ. ಸೌಲಭ್ಯಗಳನ್ನು ಸೂಕ್ತ ರೀತಿಯಲ್ಲಿ ಬಳಸಿಕೊಳ್ಳಬೇಕಿದೆ. ಅದನ್ನು ಬಿಟ್ಟು ಬಹುತೇಕರು, ಗುಟ್ಕಾ ತಿಂದು ಎಲ್ಲೆಂದರಲ್ಲಿ ಉಗುಳುತ್ತಿದ್ದಾರೆ. ನಗರದ ಅಂದವನ್ನೇ ಹಾಳು ಮಾಡುತ್ತಿದ್ದಾರೆ. ನಗರದಲ್ಲಿ ಜನರು, ಸಂಚಾರ ನಿಯಮಗಳನ್ನು ಪಾಲಿಸುತ್ತಿಲ್ಲ. ಹೆಲ್ಮೆಟ್ ಧರಿಸುತ್ತಿಲ್ಲ. ಅಡ್ಡಾದಿಡ್ಡಿ ವಾಹನ ನಿಲ್ಲಿಸುತ್ತಿದ್ದಾರೆ. ಇಂಥವರ ಮೇಲೆ ಕ್ರಮ ಜರುಗಿಸಬೇಕು. ಈ ಬಗ್ಗೆ ಪೊಲೀಸ್ ಅಧಿಕಾರಿಗಳ ಜೊತೆ ಸಭೆ ನಡೆಸಲಾಗುವುದು' ಎಂದರು.

### ಇದು ಒಳ್ಳೆಯ ಅವಕಾಶ

**4 ಕೋಟಿ ವೆಚ್ಚದಲ್ಲಿ ವಿದ್ಯುತ್ ಚಿತಾಗಾರ 'ಹಾವೇರಿಯಲ್ಲಿ 4 ಕೋಟಿ ವೆಚ್ಚದಲ್ಲಿ ವಿದ್ಯುತ್ ಚಿತಾಗಾರ ನಿರ್ಮಿಸಲು ಅವಕಾಶ ಲಭ್ಯವಾಗಿದೆ. ಮೊದಲ ಹಂತದಲ್ಲಿ ಶೇ 10ರಷ್ಟು ಹಣವನ್ನು ನಗರಸಭೆ ಪಾವತಿಸಬೇಕು. ಉಳಿದ ಶೇ 90ರಷ್ಟು ಹಣವನ್ನು ಸರ್ಕಾರ ನೀಡಲಿದೆ. ಶೇ 90ರಷ್ಟು ಹಣವನ್ನು ಮುಂದಿನ 5 ವರ್ಷದೊಳಗೆ ಮರು ಪಾವತಿ ಮಾಡಬೇಕಿದೆ' ಎಂದು ಅಧಿಕಾರಿಗಳು ಸಭೆಯ ಗಮನಕ್ಕೆ ತಂದರು. ಅಧ್ಯಕ್ಷೆ ಶಶಿಕಲಾ ಮಾಳಗಿ 'ಇದು ಒಳ್ಳೆಯ ಅವಕಾಶ. ಸದಸ್ಯರೆಲ್ಲರ ಜೊತೆ ಸೇರಿ ಚರ್ಚಿಸಿ ಅಂತಿಮ ತೀರ್ಮಾನ ಕೈಗೊಳ್ಳೋಣ' ಎಂದರು.**

**ವ್ಯಾಪಾರಸ್ಥರ ಜೊತೆ ಸಭೆ:** 'ಲಾಲ್ ಬಹದ್ದೂರ್ ಶಾಸ್ತ್ರಿ ಮಾರುಕಟ್ಟೆಯಲ್ಲಿ ನಿರ್ಮಿಸಿರುವ ಮಳಿಗೆಗಳು ಪಾಳು ಬಿದ್ದಿವೆ. ಮಾರುಕಟ್ಟೆ ರಸ್ತೆಯಲ್ಲಿಯೇ ಅಕ್ರಮವಾಗಿ ಅಂಗಡಿ ಹಾಕಲಾಗಿದೆ. ಇದರಿಂದ ಜನರ ಓಡಾಟಕ್ಕೆ ತೊಂದರೆಯಾಗಿದೆ' ಎಂದು ಜನರು ದೂರಿದರು.

ಅಧ್ಯಕ್ಷೆ ಶಶಿಕಲಾ ಮಾಳಗಿ, ಹೊಸ ಮಳಿಗೆಗಳ ಎದುರು ಇರುವ ಹಳೇ ಮಳಿಗೆಗಳನ್ನು ಮೊದಲು ನೆಲಸಮ ಮಾಡಬೇಕಿದೆ. ಇದಾದ ನಂತರ, ಹೊಸ ಮಳಿಗೆಗಳನ್ನು ಹರಾಜು ಮೂಲಕ ವ್ಯಾಪಾರಸ್ಥರಿಗೆ ನೀಡಲು ತೀರ್ಮಾನಿಸಲಾಗಿದೆ. ಶಾಸಕರ ನೇತೃತ್ವದಲ್ಲಿ ವ್ಯಾಪಾರಿಗಳ ಸಭೆ ಕರೆಯಲಾಗುವುದು.

ಬೀದಿ ವ್ಯಾಪಾರಿಗಳಿಗೆ ನಿಗದಿತ ಜಾಗ ನೀಡಲು, ರಾಣೆಬೆನ್ನೂರು ಮಾದರಿಯಲ್ಲಿ ವ್ಯವಸ್ಥೆ ಮಾಡಲಾಗುವುದು' ಎಂದರು.


# ಗೋವುಗಳ ರಕ್ಷಣೆಗಾಗಿ ಸಂಗಮದಲ್ಲಿ ಗೋಶಾಲೆ

• **ಇಲ್ಯಾಸ್ ಪಟೇಲ್. ಬ**
• **ಉದಯವಾಹಿನಿ, ಯಾದಗಿರಿ**

ಧಾರ್ಮಿಕ, ಅಧ್ಯಾತ್ಮಿಕ ಚಟುವಟಿಕೆಗಳ ಮೂಲಕ ''ವಿವೇಕ' ಚಿಂತನೆಗಳನ್ನು ಜನಮಾನಸಕ್ಕೆ ಮುಟ್ಟಿಸುವುದರ ಜತೆಗೆ ಗೋ ಸೇವೆಯಲ್ಲೂ ಸಮರ್ಪಿಸಿಕೊಳ್ಳುವ ಮೂಲಕ ಕಾವಿಧಾರಿ ಸ್ವಾಮೀಜಿಯೊಬ್ಬರು ಮಾದರಿ ಹೆಜ್ಜೆಯನ್ನಿಟ್ಟಿದ್ದಾರೆ. ಆ ಮೂಲಕ ಹಲವಾರು ತಳಿಗಳ ಸಂರಕ್ಷಣೆ ಹಾಗೂ ಸಂವರ್ಧನೆ ಕಾರ್ಯದಲ್ಲಿ ತೊಡಗಿಸಿಕೊಂಡು ಯುವ ಸಮೂಹಕ್ಕೆ ಪ್ರೇರಣೆಯಾಗಿದ್ದಾರೆ.

**ಕಾವಿಧಾರಿ ಕಟ್ಟಿದ ಮಾದರಿ ಗೋ ಶಾಲೆ**

ಹೌದು ಯಾದಗಿರಿ ಜಿಲ್ಲೆಯ ವಡಗೇರಾ ತಾಲ್ಲೂಕಿನ ಸುಕ್ಷೇತ್ರ ಕೃಷ್ಣವೇಣಿ ಭೀಮಾ ಸಂಗಮದ ಸಂಗಮೇಶ್ವರ ಮಠದ ಶ್ರೀಗಳಾದ ಶ್ರೀ ಕರುಣೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳು ಸಂಗಮದಲ್ಲಿ ಗೋಶಾಲೆ ನಿರ್ಮಿಸುವ ಮೂಲಕ ಈಗಿನ ಯುವಕರನ್ನು ಗೋ ಆಧಾರಿತ ಕೃಷಿಯತ್ತ ಸೆಳೆಯುವ ದಿಸೆಯಲ್ಲಿ ಮಾದರಿ ಗೋಶಾಲೆಯನ್ನು ಆರಂಭಿಸಿದ್ದಾರೆ. ಕೃಷ್ಣವೇಣಿ ಭೀಮಾ ಸಂಗಮದ ಸಂಗಮೇಶ್ವರ ಮಠದ ಪರಿಸರ ಇದೀಗ ದೇಸಿ ಗೋವುಗಳಿಂದ ತುಂಬಿ ಹೋಗಿದ್ದು, ಬಿಡುವಿನ ಬಹುತೇಕ ಸಮಯವನ್ನು ಗೋವುಗಳ ಪಾಲನೆ ಮತ್ತು ಪೋಷಣೆಗೆ ಮೀಸಲಿಟ್ಟಿದ್ದಾರೆ. ಇವರು ಅನಾಥ ಹಾಗೂ ವಯಸ್ಸಾದ ಹಸುಗಳು, ಭಕ್ತರು ದಾನದ ರೂಪದಲ್ಲಿ ನೀಡಿದ ಹಸುಗಳ ಪಾಲಿಗೆ ಆಶ್ರಯದಾತರಾಗಿದ್ದಾರೆ. ಇವರ ಈ ಕಾರ್ಯಕ್ಕೆ ಎಲ್ಲೆಡೆ ಮೆಚ್ಚುಗೆ ವ್ಯಕ್ತವಾಗುತ್ತಿದೆ ಕೆಲವರು ಗೊವುಗಳ ರಕ್ಷಣೆ ಮಾಡದೆ ಬೀದಿಗೆ ಬಿಡುತ್ತಿದ್ದು ಅವುಗಳು ಎಲ್ಲೆಂದರಲ್ಲಿ ಅಪಘಾತ ಮತ್ತು ಪ್ಲಾಸ್ಟಿಕ್ ಇನ್ನಿತರ ವಸ್ತುಗಳನ್ನು ತಿಂದು ಸಾವನ್ನಪ್ಪುತ್ತಿರುವುದು ಕಂಡುಬರುತ್ತದೆ. ಗೋ ಶಾಲೆ ನಡೆಸುವುದು ಅತ್ಯಂತ ಕಷ್ಟಕರ ಮತ್ತು ಕಠಿಣ ಕೆಲಸ. ಆದರೆ, ಗೋ ಆಧಾರಿತ ಕೃಷಿ ಮೂಲಕವೇ ಪ್ರತಿಯೊಬ್ಬರೂ ಸ್ವಾವಲಂಬಿ ಬದುಕು ಸಾಗಿಸಲು ಸಾಧ್ಯ. ಹೀಗಾಗಿ ಗೋವಿನ ಮಹತ್ವವನ್ನು ತಿಳಿಸುವುದು ಅಷ್ಟೇ ಮುಖ್ಯವಾಗಿರುವ ಹಿನ್ನೆಲೆ ಆರ್ಥಿಕ ನಷ್ಟದ ನಡುವೆಯೂ, ಸರ್ಕಾರದ ನಯಾಪೈಸೆ ನೆರವಿಲ್ಲದೇ ಅತ್ಯಾಧುನಿಕ, ಸಕಲ ವ್ಯವಸ್ಥೆಯನ್ನು ಒಳಗೊಂಡ ಶಾಲೆಯನ್ನು ಕಟ್ಟಿ ಗೋ ಪ್ರೇಮ ಮೆರೆಯುತ್ತಿದ್ದಾರೆ.




ಉದಯವಾಹಿನಿ ಚಿತ್ರ

### ಗೋಶಾಲೆ ನಿರ್ಮಾಣ ಮಾಡಿರುವ ಉದ್ದೇಶ?

**ಉದಯ ವಾಹಿನಿ ಪತ್ರಿಕೆ ಜೊತೆ ಮಾತನಾಡಿದ ಶ್ರೀ ಕರುಣೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳು, ಮಾರುಕಟ್ಟೆಯಲ್ಲಿ ಕಲಬೆರಕೆ ಹಾಲು ಬಿಳಿ ಬಣ್ಣದ ವಿಷಯವಾಗಿ ಪರಿಣಮಿಸುತ್ತಿದೆ. ಹಣ ಕೊಟ್ಟು ವಿಷವನ್ನು ಖರೀದಿಸುವಂತಾಗಿದೆ. ಗೋವು ಉಳಿದರೆ ಕೃಷಿ ಪ್ರಧಾನ ದೇಶ ಉಳಿಯುತ್ತದೆ. ಕೃಷಿ ಅಭಿವೃದ್ಧಿ ಜತೆಗೆ ಜನರ ಆರೋಗ್ಯ ಕಾಪಾಡಬೇಕಾದ ದೇಸಿ ಹಸುಗಳ ಸಂರಕ್ಷಣೆಯ ಅವಶ್ಯಕತೆ ಇದೆ. ವ್ಯವಹಾರಿಕ ದೃಷ್ಟಿಯಿಂದ ಗೋಶಾಲೆ ನಡೆಸುತ್ತಿಲ್ಲ. ಗೋ ಆಧಾರಿತ ಕೃಷಿ ಬಗ್ಗೆ ಜಾಗೃತಿ ಮೂಡಿಸುವುದು ಮುಖ್ಯ ಉದ್ದೇಶ. ಬರವ ದಿನಗಳಲ್ಲಿ ಗೋಮೂತ್ರ, ಸಗಣಿಯಿಂದ ವಿವಿಧ ಉತ್ಪನ್ನ ತಯಾರಿಸುವ ಯೋಜನೆ ಇದೆ. ಸರ್ಕಾರ ಭೂಮಿ ಕೊಟ್ಟರೆ ಮಾದರಿ ಶಾಲೆಯಾಗಿ ಪರಿವರ್ತಿಸಲಾಗುವುದು ಎಂದು ಹೇಳಿದರು.**



> **ಶ್ರೀಗಳ ಕಾರ್ಯ ನಮ್ಮೆಲ್ಲರಿಗೂ ಮಾದರಿಯಾಗಿದೆ ಗೋ ರಕ್ಷಣೆ ಕಾರ್ಯ ಅತ್ಯಂತ ಮಹತ್ವವಾದದ್ದು ಗೋಶಾಲೆ ನಿರ್ಮಿಸಿ ಗೋವುಗಳ ರಕ್ಷಣೆಗೆ ಮುಂದಾದ ಶ್ರೀಗಳ ಕಾರ್ಯಕ್ಕೆ ಎಲ್ಲರ ಸಹಕಾರದ ಅಗತ್ಯವಿದೆ ಜಿಲ್ಲಾಡಳಿತವು ಗೋವುಗಳ ರಕ್ಷಣೆ ಪಾಲನೆ ಪೋಷಣೆಗೆ ಜಮೀನು ಮಂಜೂರು ಮಾಡುವುದರ ಜೊತೆಗೆ ಸಂಗಮದ ಗೋಶಾಲೆಗೆ ಜಿಲ್ಲಾ ಹಾಗೂ ತಾಲ್ಲೂಕು ಆಡಳಿತದಿಂದ ಹೆಚ್ಚಿನ ಸಹಕಾರ ಒದಗಿಸಬೇಕು -ಮಲ್ಲನಗೌಡ ಹಗರಟಗಿ, ( ರೈತ ಸಂಘ ಜಿಲ್ಲಾಧ್ಯಕ್ಷ)**

# ಸತೀಶ್ ಜಾರಕಿಹೊಳಿ ಮುಂದಿನ ಮುಖ್ಯಮಂತ್ರಿ

## ಕಾಂಗ್ರೆಸ್ ನಾಯಕನ ಪರ ಜೆಡಿಎಸ್ ಶಾಸಕ

• **ಉದಯವಾಹಿನಿ, ಬೆಳಗಾವಿ**



ಲೋಕೋಪಯೋಗಿ ಸಚಿವ ಸತೀಶ ಜಾರಕಿಹೊಳಿ ಅವರು ರಾಜ್ಯದ ಮುಖ್ಯ ಮಂತ್ರಿಯಾಗಬೇಕು. 2028–29ನೇ ಸಾಲಿನ ಒಳಗೆ, ಅಂದರೆ ಮುಂದಿನ ವಿಧಾನಸಭೆ ಚುನಾವಣೆಯೊಳಗೆ ಸಿಎಂ ಆಗಬೇಕು ಎಂದು ಜೆಡಿಎಸ್ ರಾಜ್ಯ ಯುವ ಮುಖಂಡ ಹಾಗೂ ಜಿಲ್ಲೆಯ ಗುರುಮಠಕಲ್ ಕ್ಷೇತ್ರದ ಶಾಸಕ ಶರಣಗೌಡ ಕಂದಕೂರ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ. ಗುರುಮಠಕಲ್ ಮತಕ್ಷೇತ್ರದ ಸೈದಾಪುರ ಕ್ರಾಸ್ ಬಳಿ ಸೋಮವಾರ ಭಗವಾನ್ ಮಹರ್ಷಿ ವಾಲ್ಮೀಕಿ ವೃತ್ತ ಅನಾವರಣಕ್ಕೆ ಆಗಮಿಸಿದ್ದ ಸತೀಶ ಜಾರಕಿಹೊಳಿ ಉಪಸ್ಥಿತಿಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಮಾತನಾಡುತ್ತಿದ್ದ ಶಾಸಕ, ಜಾರಕಿಹೊಳಿ ಮುಂದಿನ ಸಿಎಂ ಎಂದು ಘೋಷಿಸಿದಾಗ ಕರತಾಡನಗಳು ಮುಗಿಲು ಮುಟ್ಟಿದ್ದವು.

> **ನಾನು ಅವರನ್ನು ಭೇಟಿ ಮಾಡಿದ್ಯಾಗ ನೀವು ಮುಂದಿನ ಮುಖ್ಯಮಂತ್ರಿ ಆಗಬೇಕು ಎಂದು ಪ್ರೀತಿಯಿಂದ ಹೇಳುತ್ತಿದ್ದಾರೆ. ಸದ್ಯ ಮುಖ್ಯಮಂತ್ರಿ ಸ್ಥಾನ ಖಾಲಿ ಇಲ್ಲ. ಬರುವ ದಿನಗಳಲ್ಲಿ ಮುಖ್ಯಮಂತ್ರಿ ಆಗುವುದಕ್ಕೆ ಪ್ರಯತ್ನ ಮಾಡುತ್ತೇನೆ**
> **-ಶರಣಗೌಡ ಕಂದಕೂರ, ಶಾಸಕ**

ಸತೀಶ್ ಅಣ್ಣ ಸರಳ ವ್ಯಕ್ತಿತ್ವ ಹೊಂದಿದ್ದಾರೆ. ಉತ್ತಮ ವ್ಯಕ್ತಿತ್ವ ಇರುವ ಜನಪರ ನಾಯಕರಾಗಿದ್ದು, ಇಂತಹ ವ್ಯಕ್ತಿತ್ವ ಹೊಂದಿರುವ ನಾಯಕ ಉನ್ನತ ಸ್ಥಾನಕ್ಕೆ ಅರ್ಹರು ಸತೀಶ ಜಾರಕಿಹೊಳಿ ಅವರು ಸಿಎಂ ಆದರೆ ನಾನು ಸ್ವಾಗತಿಸುತ್ತೇನೆ ಎಂದು ಹೇಳಿದರು. ಶಾಸಕ ಕಂದಕೂರ ಹೀಗೆ ಹೇಳುತ್ತಿದ್ದಂತೆಯೇ, ಜಾರಕಿಹೊಳಿ ಅಭಿಮಾನಿಗಳು ಸಂತಸದಿಂದ ಘೋಷಣೆ ಕೂಗತೊಡಗಿದರು. ಜಾರಕಿಹೊಳಿ ಮುಂದಿನ ಸಿಎಂ ಎನ್ನುತ್ತಿದ್ದಂತೆಯೇ ಇದು ಮತ್ತೊಂದು ವಿವಾದಕ್ಕೆ ಕಾರಣವಾ ಗಬಾರದೆಂದು ಮನಗಂಡ ಸತೀಶ್ ಜಾರಕಿಹೊಳಿ ಅವರು ಘೋಷಣೆ ಕೂಗದಂತೆ ಅಭಿಮಾನಿಗಳಿಗೆ ಕೈಸನ್ನೆ ಮಾಡಿ ಸುಮ್ಮನಾಗಿಸಿದರು. ಶಾಸಕನ ಈ ಹೇಳಿಕೆ ಕುರಿತು ಪ್ರತಿಕ್ರಿಯೆ ನೀಡಿರುವ ಸತೀಶ್ ಜಾರಕಿಹೊಳಿ, ರಾಜ್ಯದ ಎಲ್ಲಾ ಭಾಗಗಳಲ್ಲಿ ನನ್ನ ಅಭಿಮಾನಿಗಳು ಇದ್ದಾರೆ.

# ದೇವದುರ್ಗದಲ್ಲಿ 15 ಬಾಲ ಕಾರ್ಮಿಕರ ರಕ್ಷಣೆ

• **ಉದಯವಾಹಿನಿ ರಾಯಚೂರು**

ಬಾಲಕಾರ್ಮಿಕರನ್ನು ರಕ್ಷಣೆ ಮಾಡುವ ಕಾರ್ಯಾಚರಣೆ ದೇವದುರ್ಗ ತಾಲ್ಲೂಕಿನಲ್ಲಿ ಮುಂದುವರಿದಿದ್ದು, ನಿನ್ನೆ ಮತ್ತೆ 15 ಮಕ್ಕಳನ್ನು ರಕ್ಷಿಸಲಾಗಿದೆ. ಬೆಂಗಳೂರು ಶಾಲೆ ಬಿಡಿಸಿ ಕೃಷಿ ಚಟುವಟಿಕೆಗಳಿಗೆ ಮಕ್ಕಳನ್ನು ಕರೆದೊಯ್ಯುತ್ತಿದ್ದ ಐದು ವಾಹನಗಳನ್ನು ಜಪ್ತಿ ಮಾಡಿ ವಾಹನ ಮಾಲೀಕರು ಹಾಗೂ ಚಾಲಕರ ವಿರುದ್ಧ ಪೊಲೀಸರು ಕ್ರಮ ಕೈಗೊಂಡಿದ್ದಾರೆ. ಇನ್ನು ಜಿಲ್ಲಾ ಬಾಲಕಾರ್ಮಿಕ ಯೋಜನೆಯ ಯೋಜನಾ ನಿರ್ದೇಶಕರಾದ ಮಂಜುನಾಥ ರೆಡ್ಡಿ, ಹೊಲದ ಮಾಲಕರಿಗೆ ಹಾಗೂ ಸಾರ್ವಜನಿಕರಿಗೆ ಕರಪತ್ರಗಳನ್ನು ಹಂಚುವ ಮೂಲಕ ತಿಳಿವಳಿಕೆ ನೀಡಿ ಜಾಗೃತಿ ಮೂಡಿಸಿದರು.

ಮಕ್ಕಳನ್ನು ಶಾಲೆ ಬಿಡಿಸಿ ಬಾಲಕಾರ್ಮಿಕತೆಯಲ್ಲಿ ತೊಡಗಿಸುವುದು ಶಿಕ್ಷಾರ್ಹ ಅಪರಾಧವಾಗುತ್ತದೆ. ಯಾವುದೇ ಕಾರಣಕ್ಕೂ ಮಕ್ಕಳನ್ನು ಕರೆದುಕೊಂಡು ಹೊಲದಲ್ಲಿ ಕೆಲಸ ಮಾಡಿಸಿಕೊಳ್ಳಬಾರದು ಎಂದು ಎಚ್ಚರಿಕೆ ನೀಡಿದರು.

# ನಕಲ್ ಶರಣಾಗತಿ ಪರಿಹಾರ ನಮಗೂ ಸಿಗಬೇಕು: ವಿಕ್ರಂ ಗೌಡ ಸಹೋದರಿ

• **ಉದಯವಾಹಿನಿ ಉಡುಪಿ**

ರಾಜ್ಯ ಸರ್ಕಾರವು ನಕ್ಸಲರಿಗೆ ಶರಣಾಗತಿ ನೀಡುವ ಪರಿಹಾರ ಕೊಡಬೇಕು ಎಂದು ಮೃತ ನಕ್ಸಲ್ ಕಾರ್ಯಕರ್ತ ವಿಕ್ರಂ ಗೌಡ ಸಹೋದರಿ ಸುಗುಣ ರಾಜ್ಯ ಸರ್ಕಾರವನ್ನು ಒತ್ತಾಯಿಸಿದ್ದಾರೆ. ಕಳೆದ ನವೆಂಬರ್ 19ರಂದು ಹೆಬ್ರಿ ಠಾಣಾ ವ್ಯಾಪ್ತಿಯ ಕಬ್ಬಿನಾಲೆ ಅರಣ್ಯ ಪ್ರದೇಶದಲ್ಲಿ ನಕ್ಸಲ್ ಕಾರ್ಯಕರ್ತ ವಿಕ್ರಂ ಗೌಡನನ್ನು ಎನ್‌ಕೌಂಟರ್ ಮಾಡಿ ಹತ್ಯೆ ಮಾಡಲಾಗಿತ್ತು. ಎನ್‌ಕೌಂಟರ್ ಆಗಿದೆ, ಜೀವವೂ ಹೋಗಿದೆ. ಅಣ್ಣನ ಜೀವ ವಾಪಸ್ ಕೊಡೋದಕ್ಕೆ ಸಾಧ್ಯವಿಲ್ಲ ಪರಿಹಾರ ಆದ್ರೂ ನೀಡಿ ಅಂತ ಅಳಲು ತೋಡಿಕೊಂಡಿದ್ದಾರೆ. ನಾವು ಕಷ್ಟದಲ್ಲಿದ್ದೇವೆ, ಸ್ವಂತ ಮನೆಯಾಗಬೇಕಿದೆ. ಒಂದು ದಿನ ಕೆಲಸಕ್ಕೆ ಹೋಗದಿದ್ದರೂ ನಮ್ಮ ದಿನ ಸಾಗೋದಿಲ್ಲ. ಸರೆಂಡರ್ ಆಗುವವರಿಗೆ ಕೊಡೋ ಪರಿಹಾರ ನಮಗೂ ಕೊಡಿ ಸಾಕು ಎಂದು ಸುಗುಣ ಕೋರಿದ್ದಾರೆ.

# ಪಟಾಕಿ ಸಿಡಿದು ಘೋರ ದುರಂತ : 9 ವರ್ಷದ ಬಾಲಕನ ಮೈ, ಕಣ್ಣುಗಳಿಗೆ ಗಂಭೀರ ಗಾಯ

• **ಉದಯವಾಹಿನಿ ಶಿವಮೊಗ್ಗ**

ಪಟಾಕಿ ಸಿಡಿದ ಪರಿಣಾಮ 9 ವರ್ಷದ ಬಾಲಕನ ಆರೋಗ್ಯ ಸ್ಥಿತಿ ಗಂಭೀರ ವಾಗಿದೆ. ಪಟಾಕಿ ಸಿಡಿದ ಪರಿಣಾಮ ಬಾಲಕನಿಗೆ ಗಂಭೀರವಾದ ಗಾಯಗಳಾಗಿರುವ ಘಟನೆ ಶಿವಮೊಗ್ಗ ಜಿಲ್ಲೆಯ ತೀರ್ಥಹಳ್ಳಿ ಪಟ್ಟಣದಲ್ಲಿ ನಡೆದಿದೆ. ಬಾಲಕನ ಮೈ, ಕೈಗಳಿಗೆ ಹಾಗೂ ಎರಡು ಕಣ್ಣುಗಳಿಗೆ ಗಾಯಗಳಗಿವೆ. ಶಿವಮೊಗ್ಗ ಜಿಲ್ಲೆಯ ತೀರ್ಥಹಳ್ಳಿಯಲ್ಲಿ ಈ ಒಂದು ಘಟನೆ ನಡೆದಿದೆ. ಗಾಯಗೊಂಡಿರುವ 9 ವರ್ಷದ ಬಾಲಕ ತೇಜು ಎಂದು ತಿಳಿದುಬಂದಿದೆ. ಜ.1ರಂದು ತೀರ್ಥಹಳ್ಳಿಯಲ್ಲಿ ತೆಪ್ಪೋತ್ಸವ ನಡೆದಿತ್ತು. ತೆಪ್ಪೋತ್ಸವದ ಅಂಗವಾಗಿ ಸಿಡಿಮದ್ದು ಪ್ರದರ್ಶನ ಆಯೋಜನ ಮಾಡಲಾಗಿತ್ತು.ಈ ಸಂದರ್ಭದಲ್ಲಿ ಸಿಡಿಯದ ಪಟಾಕಿಗಳನ್ನು ಬಾಲಕರು ಒಟ್ಟುಗೂಡಿಸಿದ್ದಾರೆ. ಈ ವೇಳೆ ಏಕಾಏಕಿ ಪಟಾಕಿ ಸ್ಫೋಟಗೊಂಡು ತೇಜು ಗಂಭೀರವಾಗಿ ಗಾಯಗೊಂಡಿದ್ದಾನೆ.

# ಸಾರಿಗೆ ನೌಕರರಿಗೂ ವೇತನ ಭತ್ಯೆ ನೀಡಲು ಒತ್ತಾಯ

• **ಉದಯವಾಹಿನಿ ಹುಬ್ಬಳ್ಳಿ**

ಸಾರಿಗೆ ನೌಕರರಿಗೂ ಏಳನೇ ವೇತನ ಆಯೋಗ ಜಾರಿಗೊಳಿಸಬೇಕೆಂದು ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನೌಕರರ ಸೇನೆ ಗೌರವಾಧ್ಯಕ್ಷ ಕೊಡಿಹಳ್ಳಿ ಚಂದ್ರಶೇಖರ್ ಒತ್ತಾಯಿಸಿದ್ದಾರೆ. ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದರೆ ಸಾರಿಗೆ ನೌಕರರಿಗೆ ಏಳನೇ ವೇತನ ಆಯೋಗದ ವರದಿಯಂತೆ ವೇತನ ನೀಡುವುದಾಗಿ ಕಾಂಗ್ರೆಸ್ ಚುನಾವಣಾ ಪ್ರಣಾಳಿಕೆಯಲ್ಲಿ ಘೋಷಿಸಿತ್ತು. ಅಧಿಕಾರಕ್ಕೆ ಬಂದ ನಂತರ ಕೊಟ್ಟ ಮಾತು ತಪ್ಪಿದೆ ಎಂದು ಆರೋಪಿಸಿದ್ದಾರೆ. ರಾಜ್ಯ ಸಾರಿಗೆ ನೌಕರರನ್ನು ರಾಜ್ಯ ಸರ್ಕಾರಿ ನೌಕರರೆಂದು ಘೋಷಿಸಬೇಕು. 7ನೇ ವೇತನ ಆಯೋಗದ ಪ್ರಕಾರ ಸೌಲಭ್ಯ ನೀಡದೆ ಬರೀ ವೇತನ ಪರಿಷ್ಕರಣೆಗೆ ಕ್ರಮ ಕೈಗೊಂಡರೆ ಒಪ್ಪುವುದಿಲ್ಲ ಎಂದು ಹೇಳಿದ್ದಾರೆ.

# ಮಕ್ಕಳೊಂದಿಗೆ ಆತ್ಮಹತ್ಯೆಗೆ ಯತ್ನ

## ಮಹಿಳೆಗೆ ಜೀವಾವಧಿ ಶಿಕ್ಷೆ, ಒಂದು ಲಕ್ಷ ರೂ. ದಂಡ

• **ಉದಯವಾಹಿನಿ, ವಿಜಯಪುರ**

ಮಕ್ಕಳೊಂದಿಗೆ ಬಾವಿಗೆ ಹಾರಿ ಆತ್ಮಹತ್ಯೆಗೆ ಯತ್ನಿಸಿದ ಮಹಿಳೆಗೆ ವಿಜಯಪುರದ 4ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ ಜೀವಾವಧಿ ಶಿಕ್ಷೆ ಹಾಗೂ ಒಂದು ಲಕ್ಷ ರೂಪಾಯಿ ದಂಡ ವಿಧಿಸಿದೆ. ವಿಜಯಪುರ ಜಿಲ್ಲೆ ಬಬಲೇಶ್ವರ ತಾಲ್ಲೂಕಿನ ಕುಮಠ ಗ್ರಾಮದ ಶಿವಲೀಲಾ ಸಂತೋಷಗೌಡ ಬಿರಾದಾರ ಶಿಕ್ಷೆಗೆ ಒಳಗಾದ ಮಹಿಳೆಯಾಗಿದ್ದಾರೆ. ಗಂಡನ ಮನೆಯವರ ಕಿರುಕುಳದ ಕಾರಣ ಶಿವಲೀಲಾ ಹತಾಶೆಯಿಂದ ಮನನೊಂದು 2017ರ ಅಕ್ಟೋಬರ್ 11ರಂದು ಮಕ್ಕಳಾದ ಸುಭಾಷ್ ಗೌಡ(2), ಶ್ರೇಯಾ(6 ತಿಂಗಳು) ಅವರನ್ನು ಜಮೀನಿನ ಬಾವಿಗೆ ತಳ್ಳಿ ನಂತರ ತಾವು ಬಾವಿಗೆ ಬಿದ್ದು ಆತ್ಮಹತ್ಯೆಗೆ ಯತ್ನಿಸಿದ್ದರು. ಈ ಕುರಿತಾಗಿ ಬಬಲೇಶ್ವರ ಠಾಣೆಯ ಸಿಪಿಐ ಶಂಕರಗೌಡ ಬಸನಗೌಡರ ತನಿಖೆ ನಡೆಸಿ ಕೋರ್ಟಿಗೆ ಆರೋಪ ಪಟ್ಟಿ ಸಲ್ಲಿಸಿದ್ದರು.

### ಜೈ ಮಹಾರಾಷ್ಟ್ರ ಘೋಷಣೆ: ಮೇಯರ್, ಉಪ ಮೇಯರ್ ವಿರುದ್ಧ ದೂರು

• **ಉದಯವಾಹಿನಿ, ಬೆಳಗಾವಿ**

ಬೆಳಗಾವಿಯಲ್ಲಿ ಜೈ ಮಹಾರಾಷ್ಟ್ರ ಘೋಷಣೆ ಕೂಗಿದ ವಿಚಾರವಾಗಿ ಪಾಲಿಕೆ ಮೇಯರ್ ಹಾಗೂ ಉಪಮೇಯರ್ ವಿರುದ್ಧ ದೂರು ದಾಖಲಾಗಿದೆ. ಬೆಳಗಾವಿಯ ಅನಗೋಳದಲ್ಲಿ ಛತ್ರಪತಿ ಸಂಬಾಜಿ ಮಹಾರಾಜ ಪ್ರತಿಮೆ ಅನಾವರಣ ವೇಳೆ ಜಿಲ್ಲಾಡಳಿತದ ಆದೇಶ ಉಲ್ಲಂಘನೆ ಮಾಡಿ ಜೈ ಮಹಾರಾಷ್ಟ್ರ ಎಂದು ಘೋಷಣೆ ಕೂಗಲಾಗಿದೆ. ಇದು ನಾಡಿಗೆ ಮಾಡಿದ ದ್ರೋಹ ಎಂಬ ಆಕ್ರೋಶ ವ್ಯಕ್ತವಾಗಿದೆ. ಜೈ ಮಹಾರಾಷ್ಟ್ರ ಘೋಷಣೆ ಕೂಗಿದವರ ವಿರುದ್ಧ ಕಿತ್ತೂರು ಕರ್ನಾಟಕ ಸೇನೆ ಅಧ್ಯಕ್ಷ ಮಹದೇವ ತಳವಾರ ದೂರು ನೀಡಿದ್ದಾರೆ. ಮೇಯರ್ ಸವಿತಾ ಕಾಂಬಳೆ, ಉಪ ಮೇಯರ್ ವಿರುದ್ಧ ದೂರು ದಾಖಲಾಗಿದೆ.

# ಜನಪದ ಸಾಹಿತ್ಯದ ಬೇರು ಸಡಿಲಗೊಳ್ಳದಿರಲಿ: ಶಾಸಕ ದೊಡ್ಡನಗೌಡ

• **ಉದಯವಾಹಿನಿ, ಕುಷ್ಟಗಿ**

ಸಾಮಾಜಿಕ ಸಾಮರಸ್ಯ ಮತ್ತು ಬಂಧುತ್ವದ ಬೆಸುಗೆಯನ್ನು ಗಟ್ಟಿಗೊಳಿಸುತ್ತಿದ್ದ ಜನಪದ ಸಾಹಿತ್ಯದ ಸೊಗಡು ಕ್ಷೀಣಿಸುತ್ತಿದೆ' ಎಂದು ವಿಧಾನಸಭೆ ಪ್ರತಿಪಕ್ಷದ ಮುಖ್ಯಸಚೇತಕ ದೊಡ್ಡ ನಗೌಡ ಪಾಟೀಲ ಹೇಳಿದರು.

ಬಿನ್ನಾಳ ಗ್ರಾಮದ ಜೀಶಾನ್ ಪ್ರಕಾಶನದ ವತಿಯಿಂದ ಏರ್ಪಡಿಸಲಾಗಿದ್ದ, ಶಿಕ್ಷಕ ಮತ್ತು ಜನಪದ ಅಕಾಡೆಮಿ ಸದಸ್ಯ ಜೀವನಸಾಬ್ ವಾಲೀಕಾರ ಅವರ 'ಜಾನಪದ ಮತ್ತು ಸಮಷ್ಟಿ ಪ್ರಜ್ಞೆ' ಪುಸ್ತಕ ಬಿಡುಗಡೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ನಮ್ಮ ಸಾಂಸ್ಕೃತಿಕ ಕ್ಷೇತ್ರದ ಶ್ರೀಮಂತ ಪರಂಪರೆ ಆಗಿರುವ ಜನಪದ ಸಾಹಿತ್ಯದ ಬೇರುಗಳು ಸಡಿಲಗೊಳ್ಳದಂತೆ ನೋಡಿಕೊಂಡು ಗಟ್ಟಿ ನೆಲೆ ಒದಗಿಸುವ ಜವಾಬ್ದಾರಿ ಸಮಾಜದ ಮೇಲಿದೆ' ಎಂದರು. ಪ್ರಾಧ್ಯಾಪಕ ಜಾಜಿ ದೇವೇಂದ್ರಪ್ಪ ಮಾತನಾಡಿ, 'ಜನಪದವನ್ನು ನೋಡುವ ಕ್ರಮ ಬದಲಾಗಬೇಕಾಗಿದೆ. ಮಹಿಳೆಯರ ಶೋಷಣೆ, ಮೂಢನಂಬಿಕೆ, ಕಂದಾಚಾರ, ಲಿಂಗ ತಾರತಮ್ಯ.. ಹೀಗೆ ಸಮಾಜದ ಮೊದಲಾದ ವೈರುಧ್ಯಗಳು ಪುಸ್ತಕದಲ್ಲಿ ಅನಾವರಣಗೊಂಡಿವೆ' ಎಂದು ಹೇಳಿದರು. ಹೂವಿನಹಡಗಲಿ ಪದವಿ ಕಾಲೇಜಿನ ಸಹ ಪ್ರಾಧ್ಯಾಪಕ ಸತೀಶ ಪಾಟೀಲ ಮಾತನಾಡಿದರು.



ಉದಯವಾಹಿನಿ ಚಿತ್ರ

**ಜಾನಪದ ಮತ್ತು ಸಮಷ್ಟಿ ಪ್ರಜ್ಞೆ**

ತುಂಗಭದ್ರಾ ಕಾಡಾ ಅಧ್ಯಕ್ಷ ಹಸನಸಾಬ್ ದೋಟಿಹಾಳ ಅಧ್ಯಕ್ಷತೆ ವಹಿಸಿದ್ದರು.

ಮಾಜಿ ಶಾಸಕ ಕೆ.ಶರಣಪ್ಪ, ಶಿಕ್ಷಣ ಇಲಾಖೆ ನಿವೃತ್ತ ಜಂಟಿ ನಿರ್ದೇಶಕ ಭೀಮಪ್ಪ ಗೋನಾಳ, ಕ್ಷೇತ್ರ ಶಿಕ್ಷಣಾಧಿಕಾರಿ ಸುರೇಂದ್ರ ಕಾಂಬಳೆ, ಸರ್ಕಾರಿ ನೌಕರ ಸಂಘದ ಜಿಲ್ಲಾ ಅಧ್ಯಕ್ಷ ನಾಗರಾಜ ಜುಮಣ್ಣನವರ, ಶಿಕ್ಷಕರ ಸಂಘದ ಜಿಲ್ಲಾ ಅಧ್ಯಕ್ಷ ಶರಣಬಸವನಗೌಡ ಪಾಟೀಲ ಇತರರು ಮಾತನಾಡಿದರು.

ಪತ್ರಕರ್ತ ಸೋಮರಡ್ಡಿ ಅಳವಂಡಿ, ದೇವೇಂದ್ರಪ್ಪ ಬಳೂಟಗಿ, ಶೇಖರಗೌಡ ಮಾಲಿಪಾಟೀಲ, ಬಸವರಾಜ ಹಳ್ಳೂರು ಪುರಸಭಾ ಸದಸ್ಯ ಕಲ್ಲೇಶ ತಾಳದ, ಕಳಕಪ್ಪ ಕಂಬಳಿ, ರುದ್ರೇಶ ಬೂದಿಹಾಳ, ನೀಲನಗೌಡ ಹೊಸಗೌಡ್ರ, ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಲಂಕಪ್ಪ ವಾಲಿಕಾರ, ಎಂ.ಎಂ. ಗೊಣ್ಣಾಗರ, ಸೋಮಲಿಂಗಪ್ಪ ಗುರಿಕಾರ, ಗುರಪ್ಪ ಕುರಿ, ಅಹ್ಮದ್ ಹುಸೇನ್ ಆದೋನಿ, ವಂದನಾ ಗೋಗಿ ಇತರರು ಹಾಜರಿದ್ದರು.

ಅಮರೇಗೌಡ ಬಯ್ಯಾಪುರ, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷಮಹಿಳೆಯರಿಂದ ಜನಪದ ಸಾಹಿತ್ಯ ಬೆಳೆದಿದ್ದು ಕ್ಷೇತ್ರವನ್ನು ಉಳಿಸಿ ಬೆಳೆಸಿ ಹೆಚ್ಚು ಶ್ರೀಮಂತಗೊಳಿಸಿದ ಕೀರ್ತಿ ಮಹಿಳೆಯರಿಗೆ ಸಲ್ಲುತ್ತದೆ.

# ಯುವನಿಧಿ ವಿಶೇಷ ನೋಂದಣಿ ಅಭಿಯಾನಕ್ಕೆ ಚಾಲನೆ, ಪೋಸ್ಟರ್ ಬಿಡುಗಡೆ

## ಯುವನಿಧಿ ಯೋಜನೆ ಸದುಪಯೋಗಪಡಿಸಿಕೊಳ್ಳಿ: ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಆರ್.ಶಿವಣ್ಣ

• **ಉದಯವಾಹಿನಿ ಚಿತ್ರದುರ್ಗ**

ರಾಜ್ಯ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಯಾದ ಯುವನಿಧಿ ಯೋಜನೆಯು ಯುವ ಜನತೆಯ ಉಜ್ವಲ ಭವಿಷ್ಯಕ್ಕಾಗಿ ರೂಪಿಸಲಾಗಿದ್ದು, ಆರ್ಥಿಕ ಸಂಕಷ್ಟದ ನಡುವೆ ಉದ್ಯೋಗದ ಹುಡುಕಾಟದಲ್ಲಿರುವ ನಿರುದ್ಯೋಗಿ ಯುವ ಜನರು, ಯುವನಿಧಿ ಯೋಜನೆಗೆ ನೋಂದಾಯಿಸಿಕೊಳ್ಳುವ ಮೂಲಕ ಸದುಪಯೋಗ ಪಡೆಯಬೇಕು ಎಂದು ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಆರ್.ಶಿವಣ್ಣ ಹೇಳಿದರು.

ನಗರದ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜಿನಲ್ಲಿ ಬುಧವಾರ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, ಹಾಗೂ ಜಿಲ್ಲಾ, ತಾಲ್ಲೂಕು ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ವತಿಯಿಂದ ಏರ್ಪಡಿಸಿದ ಯುವನಿಧಿ ವಿಶೇಷ ನೋಂದಣಿ ಅಭಿಯಾನ ಹಾಗೂ ಪೋಸ್ಟರ್ ಬಿಡುಗಡೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ವೃತ್ತಿಪರ ತರಬೇತಿ ಪಡೆದ ಡಿಪ್ಲೊಮಾ ವಿದ್ಯಾರ್ಥಿಗಳು ಹಾಗೂ ಪದವಿ ಶಿಕ್ಷಣ ಪಡೆದ ವಿದ್ಯಾರ್ಥಿಗಳಿಗೆ ಸ್ವಾವಲಂಬಿ ಜೀವನ ಕಲ್ಪಿಸಿಕೊಡುವ ನಿಟ್ಟಿನಲ್ಲಿ ರಾಜ್ಯಸರ್ಕಾರದ ಯುವನಿಧಿ ನೆರವಾಗಲಿದ್ದು, ಯುವನಿಧಿಯಡಿ ದೊರಕುವ ನಿರುದ್ಯೋಗ ಭತ್ಯೆಯನ್ನು ಉದ್ಯೋಗಕ್ಕಾಗಿ ಅರ್ಜಿ ಸಲ್ಲಿಸಲು, ಸ್ಪರ್ಧಾತ್ಮಕ ಪರೀಕ್ಷೆಗೆ ಸಿದ್ಧವಾಗಲು ಪುಸ್ತಕ ಖರೀದಿಗೆ ಉಪಯೋಗವಾಗಲಿದೆ ಎಂದರು.




ಉದಯವಾಹಿನಿ ಚಿತ್ರ

**ನಿರುದ್ಯೋಗಿ ಯುವ ಜನತೆಗೆ ಅನುಕೂಲ**

ಜಿಲ್ಲಾ ಉದ್ಯೋಗಾಧಿಕಾರಿ ಡಿ.ರವೀಂದ್ರ ಮಾತನಾಡಿ, ಕರ್ನಾಟಕ ರಾಜ್ಯದ ಮಹತ್ವಾಕಾಂಕ್ಷಿ ಯೋಜನೆಯಾದ ''ಯುವನಿಧಿ'' ಯೋಜನೆಯಲ್ಲಿ ಪದವಿ, ಸ್ನಾತಕೋತ್ತರ ಪದವಿ ಮತ್ತು ಡಿಪ್ಲೊಮಾ 2022–23ನೇ ಶೈಕ್ಷಣಿಕ ವರ್ಷದಲ್ಲಿ ವ್ಯಾಸಂಗ ಮಾಡಿ 2023 ಮತ್ತು 2024ರಲ್ಲಿ ತೇರ್ಗಡೆಯಾಗಿ ಅರ್ಹತೆ ಹೊಂದಿದ ಅಭ್ಯರ್ಥಿಗಳು ಹಾಗೂ ಫಲಿತಾಂಶದ ನಂತರ ನಿರುದ್ಯೋಗಿಗಳಾಗಿ 180 ದಿನಗಳನ್ನು ಪೂರೈಸಿದ ಅಭ್ಯರ್ಥಿಗಳಿಗೆ ಇದೇ ಜ.20 ರವರೆಗೆ ''ಯುವನಿಧಿ'' ವಿಶೇಷ ನೋಂದಣಿ ಅಭಿಯಾನ ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

ಎಸ್.ಎಸ್.ಎಲ್.ಸಿ, ಪಿಯುಸಿ, ಪದವಿ, ಡಿಪ್ಲೊಮಾ ಪ್ರಮಾಣ ಪತ್ರ ಸೇರಿದಂತೆ ನೋಂದಣಿಗೆ ಅಗತ್ಯವಿರುವ ದಾಖಲಾತಿಗಳೊಂದಿಗೆ http://sevasindhugs.karnataka.gov.in ನಲ್ಲಿ ಆನ್ ಲೈನ್‌ನಲ್ಲಿ ನೋಂದಾಯಿಸಬೇಕು. ಕರ್ನಾಟಕ ಒನ್, ಬೆಂಗಳೂರು ಒನ್, ಗ್ರಾಮ ಒನ್ ಮತ್ತು ಇಬಾಪೂಜಿ ಸೇವಾ ಕೇಂದ್ರ, ಕಾಲೇಜು, ವಿಶ್ವವಿದ್ಯಾಲಯ ಹಾಗೂ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯಲ್ಲಿ ನೋಂದಣಿ ಘಟಕ ತೆರೆಯಲಾಗಿದ್ದು, ಉಚಿತವಾಗಿ ಅರ್ಜಿ ಸಲ್ಲಿಸಬಹುದು ಎಂದು ತಿಳಿಸಿದರು.ಯುವನಿಧಿ ಯೋಜನೆಯಡಿ ಜಿಲ್ಲೆಯಲ್ಲಿ 4,714 ಯುವ ಜನರು ಯುವನಿಧಿಯ ಯೋಜನೆಯ ಫಲಾನುಭವಿಗಳಾಗಿದ್ದು, 2024ರ ಜನವರಿಯಿಂದ ನವೆಂಬರ್ ಮಾಹೆಯವರೆಗೂ ಒಟ್ಟು 6.77 ಕೋಟಿ ಹಣ ಪಾವತಿಸಲಾಗಿದೆ ಎಂದು ಹೇಳಿದರು.

> **ರಾಜ್ಯ ಸರ್ಕಾರವು ಚುನಾವಣಾ ಪೂರ್ವ ಪ್ರಣಾಳಿಕೆಯಲ್ಲಿ ಘೋಷಿಸಿದಂತೆ ಪಂಚ ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸಿ ಕೊಟ್ಟ ಮಾತಿನಂತೆ ನಡೆದುಕೊಂಡಿದೆ. ಪಂಚ ಗ್ಯಾರಂಟಿ ಯೋಜನೆಗಳಲ್ಲಿ ಒಂದಾದ ಯುವನಿಧಿ ಯೋಜನೆಯು ಯುವ ಜನತೆಯ ಉಜ್ವಲ ಭವಿಷ್ಯಕ್ಕಾಗಿ ಜಾರಿಗೊಳಿಸಿ, ವಿದ್ಯಾವಂತ ನಿರುದ್ಯೋಗಿ ಯುವ ಜನತೆಗೆ ಅನುಕೂಲ ಮಾಡಿಕೊಟ್ಟಿದೆ**
> **-ಡಿ.ಎನ್. ಮೈಲಾರಪ್ಪ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಉಪಾಧ್ಯಕ್ಷ**

> **ಯುವ ಜನತೆಯ ಉಜ್ವಲ ಭವಿಷ್ಯಕ್ಕಾಗಿ ರಾಜ್ಯ ಸರ್ಕಾರವು ಯುವನಿಧಿ ಗ್ಯಾರಂಟಿ ಯೋಜನೆ ಅನುಷ್ಠಾನಗೊಳಿಸಿದ್ದು, ನಿರುದ್ಯೋಗಿ ಯುವ ಜನರಿಗೆ ಎರಡು ವರ್ಷಗಳವರೆಗೆ ಅಥವಾ ಫಲಾನುಭವಿಗಳಿಗೆ ಉದ್ಯೋಗ ಸಿಗುವವರೆಗೆ ನಿರುದ್ಯೋಗ ಭತ್ಯೆ ಒದಗಿಸಲಾಗುತ್ತದೆ. ಯುವನಿಧಿ ಯೋಜನೆಯು ನಿರುದ್ಯೋಗಿ ಪದವೀಧರರಿಗೆ ಪ್ರತಿ ತಿಂಗಳು ರೂ.3000/- ಹಾಗೂ ಡಿಪ್ಲೊಮಾ ಪದವೀಧರರಿಗೆ ಪ್ರತಿ ತಿಂಗಳು ರೂ.1500/- ಒದಗಿಸುವ ಅಭೂತಪೂರ್ವ ಯೋಜನೆ ಇದಾಗಿದೆ -ಆರ್.ಶಿವಣ್ಣ**

ಕಾರ್ಯಕ್ರಮದಲ್ಲಿ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಉಪಾಧ್ಯಕ್ಷ ಅಬ್ದುಲ್, ಹಿರಿಯೂರು ತಾಲ್ಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಉಪಾಧ್ಯಕ್ಷ ಖಾದಿ ಜೆ.ರಮೇಶ್, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಸದಸ್ಯ ಮುದಾಸರ್ ನವಾಜ್, ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜು ಪ್ರಾಂಶುಪಾಲ ರಾಘವೇಂದ್ರಚಾರ್, ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ರವಿಕುಮಾರ್, ನಾಗರಾಜ್ ಹಾಗೂ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜಿನ ಉಪನ್ಯಾಸಕರು, ವಿದ್ಯಾರ್ಥಿಗಳು ಇದ್ದರು.

# ಕೆನಡಾ ವಿಲೀನಕ್ಕಾಗಿ ಟ್ರಂಪ್ ಅವರಿಂದ ಎಕನಾಮಿಕ್ ಫೋರ್ಸ್ ನೀತಿ

## ಟ್ರಂಪ್‌ರ ಕೆನಡಾ, ಗ್ರೀನ್‌ಲ್ಯಾಂಡ್, ಪನಾಮಾ ಬೇಡಿಕೆ; ನವ ವಸಾಹತುಶಾಹಿಯ ಕನವರಿಕೆ, ಸೇನಾ ಬಲ ಪ್ರಯೋಗಿಸುವರೇ ಟ್ರಂಪ್?

**ವಾಷಿಂಗ್ಟನ್:** ಪದೇ ಪದೇ ಕೆನಡಾ ವಿಲೀನದ ಕುರಿತು ಮಾತನಾಡುತ್ತಿರುವ ಅಮೆರಿಕದ ಚುನಾಯಿತ ಅಧ್ಯಕ್ಷ ಡೊನಾಲ್ಡ್ ಟ್ರಂಪ್, ತಮ್ಮ ಯೋಜನೆಯ ಕುರಿತು ಗಂಭೀರವಾಗಿದ್ದಾರೆ ಎಂಬುದು ಇದೀಗ ಜಗಜ್ಜಾಹೀರಾಗಿದೆ. ಅಮೆರಿಕ-ಕೆನಡಾ ವಿಲೀನ ಏಕೆ ಮಹತ್ವದ್ದು ಎಂಬುದರ ಕುರಿತು ವಾದ ಮಂಡಿ ಸುತ್ತಲೇ ಇರುವ ಡೊನಾಲ್ಡ್ ಟ್ರಂಪ್, ತಮ್ಮ ಉದ್ದೇಶ ಈಡೇರಿಕೆಗಾಗಿ ಆರ್ಥಿಕ ಬಲ ಪ್ರಯೋಗದ ಕುರಿತು ಮಾತನಾಡಿದ್ದಾರೆ. ಹೌದು, ಕೆನಡಾ ವಿಲೀನಕ್ಕೆ ಸೇನಾ ಬಲ ಪ್ರಯೋಗದ ಸಾಧ್ಯತೆಯನ್ನು ಸ್ಪಷ್ಟವಾಗಿ ತಳ್ಳಿ ಹಾಕಿರುವ ಡೊನಾಲ್ಡ್ ಟ್ರಂಪ್, ನಾನು ಆರ್ಥಿಕ ಬಲ ಪ್ರಯೋಗದ ಕುರಿತು ಚಿಂತಿಸುತ್ತಿದ್ದೇನೆ. ಎಂದು ಹೇಳಿರುವುದು ಜಾಗತಿಕವಾಗಿ ಗಮನ ಸೆಳೆದಿದೆ. ಆದರೆ ಗ್ರೀನ್ ಲ್ಯಾಂಡ್ ಮತ್ತು ಪನಾಮಾ ಸ್ವಾಧೀನಕ್ಕೆ ಸೇನಾ ಬಲ ಪ್ರಯೋಗ ಆಯ್ಕೆಯ ಕುರಿತು ಟ್ರಂಪ್ ಸ್ಪಷ್ಟವಾಗಿ ಏನನ್ನೂ ಹೇಳದಿರುವುದು ಕೂಡ ಹಲವರ ಆತಂಕಕ್ಕೆ ಕಾರಣವಾಗಿದೆ. ವ್ಯಾಪಾರ ಕ್ಷೇತ್ರದಲ್ಲಿ ಕೆನಡಾಗೆ ಹೆಚ್ಚಿನ ಸುಂಕ ವಿಧಿಸುವುದು, ಕೆನಡಾದೊಂದಿಗಿನ ಆಮದು, ರಫ್ತು ಒಪ್ಪಂದದಲ್ಲಿ ಬದಲಾವಣೆ ತರುವುದು, ಈ ಮೂಲಕ ಅಮೆರಿಕದೊಂದಿಗೆ ವಿಲೀನಗೊಳ್ಳುವಂತೆ ಕೆನಡಾವನ್ನು ಒತ್ತಾಯಿಸುವುದು ಡೊನಾಲ್ಡ್ ಟ್ರಂಪ್ ಅವರ ಯೋಜನೆಯ ಭಾಗವಾಗಿದೆ. ಇತ್ತೀಚೆಗಷ್ಟೇ ಕೆನಡಾ ಪ್ರಧಾನಿ ಹುದ್ದೆಗೆ ರಾಜೀನಾಮೆ ನೀಡಿರುವ ಜಸ್ಟಿನ್ ಟ್ರುಡೋ ಅವರೊಂದಿಗೆ, ಟ್ರಂಪ್ ತಮ್ಮ ಮೊದಲ ಅವಧಿಯಲ್ಲಿ ಅಷ್ಟೇನೂ ಉತ್ತಮ ಸಂಬಂಧ ಹೊಂದಿರಲಿಲ್ಲ. ಆದರೆ ಕೆನಡಿಯನ್ನರೊಂದಿಗೆ ಟ್ರಂಪ್ ಯಾವುದೇ ಭಿನ್ನಾಭಿಪ್ರಾಯ ಹೊಂದಿಲ್ಲ. ಅಮೆರಿಕದೊಂದಿಗೆ ವಿಲೀನಗೊಳ್ಳುವುದು ಕೆನಡಾಗೆ ಇನ್ನೂ ಹೆಚ್ಚಿನ ಲಾಭ ತಂದು ಕೊಡಲಿದೆ ಎಂಬುದು ಡೊನಾಲ್ಡ್ ಟ್ರಂಪ್ ವಾದವಾಗಿದೆ. ವಾಣಿಜ್ಯ ಕ್ಷೇತ್ರದಲ್ಲಿ ಅಮೆರಿಕದ ಮೇಲ್ವಿಚಾರಣೆ ಕೆನಡಾದ ಹೊರೆಯನ್ನು ಕಡಿಮೆ ಮಾಡಲಿದೆ ಎಂದು ಟ್ರಂಪ್ ಹೇಳುತ್ತಿದ್ದಾರೆ. ವಿಲೀನದ ಕುರಿತು ಕೆನಡಾ ಸರ್ಕಾರವಾಗಲಿ, ಕೆನಡಾದ ಸಾಮಾನ್ಯ ನಾಗರಿಕರಾಗಲಿ ಇದುವರೆಗೂ ಯಾವುದೇ ಸಕಾರಾತ್ಮಕ ಪ್ರತಿಕ್ರಿಯೆ ವ್ಯಕ್ತವಾಗಿಲ್ಲ. ಆದಾಗ್ಯೂ ಅಮೆರಿಕದ ಚುನಾಯಿತ ಅಧ್ಯಕ್ಷರು ತಮ್ಮ ಮನವರಿಕೆ ಪ್ರಯತ್ನಗಳನ್ನು ಬಿಟ್ಟಿಲ್ಲ.

ಗ್ರೀನ್‌ಲ್ಯಾಂಡ್ ಮತ್ತು ಪನಾಮಾ ಮರುಸ್ವಾಧೀನಕ್ಕೆ ಸೇನಾ ಬಲ ಬಳಸುವ ಕುರಿತು ಪತ್ರಕರ್ತರು ಕೇಳಿದ ಪ್ರಶ್ನೆಗೆ, ಇದರ ಕುರಿತು ನಾನಿನ್ನೂ ಯೋಚಿಸಿಲ್ಲ ಎಂದು ಟ್ರಂಪ್ ಹೇಳಿರುವುದು ಜಗತ್ತು ಮತ್ತೊಂದು ಸುತ್ತಿನ ಅಶಾಂತಿಯನ್ನು ಕಾಣಲಿದೆ ಎಂಬ ಆತಂಕಕ್ಕೆ ದಾರಿ ಮಾಡಿಕೊಟ್ಟಿದೆ. ಪನಾಮಾ ಕಾಲುವೆ ಒಪ್ಪಂದವನ್ನು ಕೊನೆಗೊಳಿಸುವುದರ ಕುರಿತು ಟ್ರಂಪ್ ಅವರ ಚಿಂತನೆಗಳು, ವಿಶೇಷವಾಗಿ ಪಶ್ಚಿಮ ಗೋಳಾರ್ಧದಲ್ಲಿ ವಿದೇಶಿ ಶಕ್ತಿಗಳ ಅತಿಕ್ರಮಣದ ಕುರಿತು ಅಮೆರಿಕದ ಹೊಸ ಆಡಳಿತದ ಆಸಕ್ತಿಯನ್ನು ತೋರಿಸುತ್ತವೆ. ಶೀತಲ ಸಮರದ ಸಮಯದಲ್ಲಿ ಪನಾಮಾ ಮೇಲಿನ ಕಮ್ಯೂನಿಸಂ ಪ್ರಭಾವದಿಂದ ಆತಂಕಗೊಳಗಾಗಿದ್ದ ಅಮೆರಿಕ, ಇದೀಗ ಚೀನಾ, ರಷ್ಯಾ ಮತ್ತು ಇರಾನ್‌ನ ಉಪಸ್ಥಿತಿ ಕಂಡು ಕಳವಳಗೊಂಡಿದೆ.



### ಟ್ರಂಪ್ ಪ್ಲ್ಯಾನ್ ಏನು?

'ಅಮೆರಿಕ ಫಸ್ಟ್' ನೀತಿಯ ಪ್ರಬಲ ಪ್ರತಿಪಾದಕರಾಗಿರುವ ಡೊನಾಲ್ಡ್ ಟ್ರಂಪ್, ಕೆನಡಾ ಸುತ್ತಲೂ ವೃದ್ಧಿಸುತ್ತಿರುವ ಚೀನಾ ಮತ್ತು ರಷ್ಯಾ ಪ್ರಾಬಲ್ಯವನ್ನು ತಗ್ಗಿಸಲು ಮುಂದಾಗಿದ್ದಾರೆ. ಇದೇ ಕಾರಣಕ್ಕೆ ಕೆನಡಾವನ್ನು ಅಮೆರಿಕದಲ್ಲಿ ವಿಲೀನಗೊಳಿಸಿ, ಅದನ್ನು ಅಮೆರಿಕದ 51ನೇ ರಾಜ್ಯವನ್ನಾಗಿ ಬದಲಾಯಿಸುವ ಯೋಜನೆಯನ್ನು ಟ್ರಂಪ್ ಹಾಕಿಕೊಂಡಿದ್ದಾರೆ. ಇದಕ್ಕಾಗಿ ಸೇನಾ ಬಲ ಪ್ರಯೋಗದ ಮೊರೆ ಹೋಗದೇ, ಕೆನಡಾ ಮೇಲೆ ಆರ್ಥಿಕ ಬಲ ಪ್ರಯೋಗ ನಡೆಸುವ ಯೋಜನೆ ಟ್ರಂಪ್ ಅವರದ್ದಾಗಿದೆ.

### ಆಲೋಚನೆ ಏನಿದೆ?

ಕೆನಡಾ ವಿಲೀನಕ್ಕೆ ಸಂಬಂಧಿಸಿದಂತೆ ಡೊನಾಲ್ಡ್ ಟ್ರಂಪ್ ಅದೆಷ್ಟು ಸೌಮ್ಯವಾಗಿದ್ದಾರೋ, ಗ್ರೀನ್‌ಲ್ಯಾಂಡ್ ಮತ್ತು ಪನಾಮಾ ಮರು ಸ್ವಾಧೀನದ ಕುರಿತು ಅಷ್ಟೇ ಕಠೋರ ನಿಲುವು ತಳೆಯುವ ಸೂಚನೆ ನೀಡಿದ್ದಾರೆ. ಗ್ರೀನ್‌ಲ್ಯಾಂಡ್ ಮತ್ತು ಪನಾಮಾ ಮರುಸ್ವಾಧೀನ ಅಮೆರಿಕದ ರಾಷ್ಟ್ರೀಯ ಹಿತಾಸಕ್ತಿಗಳಿಗೆ ಪೂರಕ ಎಂದು ಟ್ರಂಪ್ ಹೇಳಿರುವುದು, ಅವರು ಈ ವಿಚಾರವಾಗಿ ಸ್ಪಷ್ಟ ಮತ್ತು ಕಠಿಣ ನಿಲುವು ತಳೆಯಲಿದ್ದಾರೆ ಎಂಬುದರತ್ತ ಬೆರಳು ತೋರಿಸುತ್ತಿದೆ.

## ಮಹಿಳೆಯ ದೇಹದ ಬಣ್ಣನೆ ಕೂಡ ಶಿಕ್ಷಾರ್ಹ ಅಪರಾಧ





**ಕೊಚ್ಚಿ:** ಮಹಿಳೆಯ ದೇಹ ರಚನೆಯ ಮೇಲಿನ ಕಾಮೆಂಟ್ ಲೈಂಗಿಕ ಬಣ್ಣದ ಹೇಳಿಕೆಯಾಗಿದ್ದು ಅದು ಲೈಂಗಿಕ ಕಿರುಕುಳದ ಶಿಕ್ಷಾರ್ಹ ಅಪರಾಧವಾಗಿದೆ ಎಂದು ಕೇರಳ ಹೈಕೋರ್ಟ್ ಅಭಿಪ್ರಾಯಪಟ್ಟಿದೆ. ತನ್ನ ವಿರುದ್ಧ ಅದೇ ಸಂಸ್ಥೆಯ ಮಹಿಳಾ ಸಿಬ್ಬಂದಿಯೊಬ್ಬರು ದಾಖಲಿಸಿರುವ ಲೈಂಗಿಕ ಕಿರುಕುಳ ಪ್ರಕರಣವನ್ನು ರದ್ದುಗೊಳಿಸುವಂತೆ ಕೇರಳ ರಾಜ್ಯ ವಿದ್ಯುತ್ ಮಂಡಳಿ (ಕೆಎಸ್‌ಇಬಿ) ಮಾಜಿ ಉದ್ಯೋಗಿಯೊಬ್ಬರು ಸಲ್ಲಿಸಿದ್ದ ಮನವಿಯನ್ನು ವಜಾಗೊಳಿಸುವ ಸಂದರ್ಭದಲ್ಲಿ ನ್ಯಾಯಮೂರ್ತಿ ಎ ಬದರುದ್ದೀನ್ ಅವರು ಈ ತೀರ್ಪು ನೀಡಿದ್ದಾರೆ.

ಆರೋಪಿಗಳು 2013 ರಿಂದ ತನ್ನ ವಿರುದ್ಧ ಅಸಭ್ಯ ಪದಗಳನ್ನು ಬಳಸಿದ್ದಾರೆ ಮತ್ತು ನಂತರ 2016-17 ರಲ್ಲಿ ಆಕ್ಷೇಪಾರ್ಹ ಸಂದೇಶಗಳು ಮತ್ತು ಧ್ವನಿ ಕರೆಗಳನ್ನು ಕಳುಹಿಸಲು ಪ್ರಾರಂಭಿಸಿದರು ಎಂದು ಮಹಿಳೆ ಆರೋಪಿಸಿದ್ದಾರೆ.ಆತನ ವಿರುದ್ಧ ಕೆಎಸ್‌ಇಬಿ ಮತ್ತು ಪೊಲೀಸರಿಗೆ ದೂರು ನೀಡಿದರೂ ಆತ ಆಕೆಗೆ ಆಕ್ಷೇಪಾರ್ಹ ಸಂದೇಶಗಳನ್ನು ಕಳುಹಿಸುತ್ತಲೇ ಇದ್ದ. ಆಕೆಯ ದೂರುಗಳ ನಂತರ, ಆರೋಪಿಯ ವಿರುದ್ಧ ಐಪಿಸಿಯ ಸೆಕ್ಷನ್ 354 ಎ (ಲೈಂಗಿಕ ಕಿರುಕುಳ) ಮತ್ತು 509 (ಮಹಿಳೆಗೆ ನಮ್ರತೆಯನ್ನು ಅವಮಾನಿಸುವುದು) ಮತ್ತು ಸೆಕ್ಷನ್ 120 (ಒ) (ಅನಪೇಕ್ಷಿತ ಕರೆ, ಪತ್ರ, ಮೂಲಕ ಯಾವುದೇ ಸಂವಹನದ ಮೂಲಕ ತೊಂದರೆ ಉಂಟುಮಾಡುವ) ಅಡಿಯಲ್ಲಿ ಅಪರಾಧಗಳನ್ನು ದಾಖಲಿಸಲಾಗಿತ್ತು. ಪ್ರಕರಣವನ್ನು ರದ್ದುಗೊಳಿಸುವಂತೆ ಆರೋಪಿಯು ಕೇಳಿಕೊಂಡಿದ್ದ, ವ್ಯಕ್ತಿಯೊಬ್ಬರು ಉತ್ತಮವಾದ ದೇಹ ರಚನೆಯನ್ನು ಹೊಂದಿದ್ದಾರೆ ಎಂಬ ಉಲ್ಲೇಖವನ್ನು ಐಪಿಸಿಯ ಸೆಕ್ಷನ್ 354ಅ ಮತ್ತು 509 ಮತ್ತು ಕೇರಳ ಪೊಲೀಸ್ ಕಾಯಿದೆಯ ಸೆಕ್ಷನ್ 120(ಒ) ವ್ಯಾಪ್ತಿಯಲ್ಲಿ ಲೈಂಗಿಕ ಬಣ್ಣದ ಟೀಕೆಗಳಿಗೆ ಕಾರಣವಾಗುವುದಿಲ್ಲ ಎಂದು ವಾದಿಸಿದ್ದರು.

## ದೇಶದಲ್ಲಿ ಹೆಚ್‌ಎಂಪಿವಿ ಸೋಂಕಿತರ ಸಂಖ್ಯೆ 8ಕ್ಕೆ ಏರಿಕೆ

**ಮುಂಬೈ:** ವಾಣಿಜ್ಯ ರಾಜಧಾನಿ ಮುಂಬೈನಲ್ಲಿ ಮತ್ತೊಂದು ಆರು ತಿಂಗಳ ಹೆಣ್ಣು ಮಗುವಿಗೆ ಹೆಚ್‌ಎಂಪಿವಿ ಸೋಂಕು ಕಾಣಿಸಿಕೊಂಡಿದೆ. ಇದರೊಂದಿಗೆ ದೇಶದ ಒಟ್ಟು ಸೋಂಕಿತರ ಸಂಖ್ಯೆ 8ಕ್ಕೆ ಏರಿಕೆಯಾಗಿದೆ. ತೀವ್ರ ಕೆಮ್ಮು, ಎದೆ ಬಿಗಿತ ಮತ್ತು ಆಮ್ಲಜನಕದ ಮಟ್ಟವು 84 ಕ್ಕೆ ಇಳಿದಿದ್ದರಿಂದ ಶಿಶುವನ್ನು ಜ.1 ರಂದು ಆಸ್ಪತ್ರೆಗೆ ದಾಖಲಿಸಲಾಗಿತ್ತು.

ಐದು ದಿನಗಳ ನಂತರ ಆಕೆಯನ್ನು ಬಿಡುಗಡೆ ಮಾಡಲಾಯಿತು. ಇದಕ್ಕೂ ಮೊದಲು, ಮಹಾರಾಷ್ಟ್ರದ ನಾಗ್ಪುರದಲ್ಲಿ ಏಳು ವರ್ಷ ಮತ್ತು 13 ವರ್ಷ ವಯಸ್ಸಿನ ಎರಡು ಪ್ರಕರಣಗಳು ಪತ್ತೆಯಾಗಿದ್ದವು. ಇತರ ಪ್ರಕರಣಗಳು ಕರ್ನಾಟಕ (2), ಗುಜರಾತ್ (1), ತಮಿಳುನಾಡು (2) ಪ್ರಕರಣಗಳು ದಾಖಲಾಗಿವೆ. ಉತ್ತರಾಖಂಡ, ಮಹಾರಾಷ್ಟ್ರ, ಕರ್ನಾಟಕ, ಜಾರ್ಖಂಡ್, ಹಿಮಾಚಲ ಪ್ರದೇಶ, ಒಡಿಶಾ, ಬಿಹಾರ ಸೇರಿದಂತೆ ಹಲವು ರಾಜ್ಯಗಳ ಸರ್ಕಾರಗಳು ಜನರು ಭಯಭೀತರಾಗದಂತೆ ಮನವಿ ಮಾಡಿಕೊಂಡಿವೆ.




ಮಿಜೋರಾಂ ಹೆಚ್‌ಎಂಪಿ ಹರಡುವಿಕೆಯನ್ನು ಮೇಲ್ವಿಚಾರಣೆ ಮಾಡಲು ಸಮಿತಿಯನ್ನು ರಚಿಸಿದೆ.

ಗುಜರಾತ್ನ ಮೂರು ನಗರಗಳಾದ ಗಾಂಧಿನಗರ, ಅಹಮದಾಬಾದ್ ಮತ್ತು ರಾಜ್ಕೋಟ್‌ಗಳಲ್ಲಿನ ಸಿವಿಲ್ ಆಸ್ಪತ್ರೆಗಳಲ್ಲಿ ಪ್ರತ್ಯೇಕ ವಾರ್ಡ್‌ಗಳನ್ನು ರಚಿಸಲಾಗಿದೆ. ಚೀನಾದಲ್ಲಿ ಎಚ್‌ಎಂಪಿವಿ ಪ್ರಕರಣಗಳ ಹೆಚ್ಚಳದ ವರದಿಗಳ ಮಧ್ಯೆ ನಡೆದ ಸಭೆಯಲ್ಲಿ, ಐಎಲ್ಐ ಮತ್ತು ಎಸ್‌ಆರ್‌ಐ ಸೇರಿದಂತೆ ಉಸಿರಾಟದ ಕಾಯಿಲೆಗಳ ಬಗ್ಗೆ ಕಣ್ಗಾವಲು ಹೆಚ್ಚಿಸಲು ಮತ್ತು ಎಚ್‌ಎಂಪಿವಿ ಪ್ರಸರಣವನ್ನು ತಡೆಗಟ್ಟುವ ಬಗ್ಗೆ ಜಾಗೃತಿ ಮೂಡಿಸಲು ಕೇಂದ್ರವು ರಾಜ್ಯಗಳಿಗೆ ಸಲಹೆ ನೀಡಿದೆ.

ಹೆಚ್‌ಎಂಪಿವಿ ಜಾಗತಿಕವಾಗಿ ಗುರುತಿಸಲ್ಪಟ್ಟ ಉಸಿರಾಟದ ವೈರಸ್ ಆಗಿದೆ. ಎಲ್ಲಾ ವಯಸ್ಸಿನ ಜನರಲ್ಲಿ, ವಿಶೇಷವಾಗಿ ಚಳಿಗಾಲದಲ್ಲಿ ಮತ್ತು ವಸಂತಕಾಲದ ಆರಂಭದಲ್ಲಿ ಸೋಂಕನ್ನು ಉಂಟುಮಾಡುವ ಅನೇಕ ಉಸಿರಾಟದ ವೈರಸ್‌ಗಳಲ್ಲಿ ಇದು ಒಂದಾಗಿದೆ. ವೈರಸ್ ಸೋಂಕು ಸಾಮಾನ್ಯವಾಗಿ ಸೌಮ್ಯವಾದ ಮತ್ತು ಸ್ವಯಂ-ಸೀಮಿತಗೊಳಿಸುವ ಸ್ಥಿತಿಯಾಗಿದೆ ಮತ್ತು ಹೆಚ್ಚಿನ ರೋಗಿಗಳು ತಮದೇ ಆದ ಮೇಲೆ ಚೇತರಿಸಿಕೊಳ್ಳುತ್ತಾರೆ. ವಿಶ್ವ ಆರೋಗ್ಯ ಸಂಸ್ಥೆಯ ಮಾಜಿ ಮುಖ್ಯ ವಿಜ್ಞಾನಿ ಸೌಮ್ಯಾ ಸ್ವಾಮಿನಾಥನ್ ಅವರು ಹೆಚ್‌ಎಂಪಿವಿ ಮತ್ತು ಕೋವಿಡ್ ನಡುವೆ ಯಾವುದೇ ಸಂಬಂಧವಿಲ್ಲ ಎಂದು ತಿಳಿಸಿದ್ದಾರೆ.

## ಹಣ ವಸೂಲಿಗೆ ಅಪಹರಣದ ನಾಟಕ; ಸ್ಪೆಲ್ಲಿಂಗ್ ಮಿಸ್ಟೇಕ್ ಸಿಕ್ಕಿಬಿದ್ದ ಆರೋಪಿ

**ಲಖನೌ:** ತನ್ನ ಅಣ್ಣನಿಂದ ಹಣ ವಸೂಲಿ ಮಾಡುವುದಕ್ಕಾಗಿ ಅಪಹರಣದ ನಾಟಕವಾಡಿದ ವ್ಯಕ್ತಿಯೊಬ್ಬ, ಹಣಕ್ಕೆ ಬೇಡಿಕೆ ಇಟ್ಟ ಟಿಪ್ಪಣಿಯಲ್ಲಿ ಮಾಡಿದ ಅಕ್ಷರ ದೋಷದಿಂದಾಗಿ (ಸ್ಪೆಲ್ಲಿಂಗ್ ಮಿಸ್ಟೇಕ್) ಸಿಕ್ಕಿಬಿದ್ದಿದ್ದಾನೆ. ಪೊಲೀಸರು ಬುಧವಾರ ಈ ಮಾಹಿತಿ ನೀಡಿದ್ದಾರೆ. ಹರ್ದೋಯಿ ಜಿಲ್ಲೆಯ ಬಂದಾರಹ ಗ್ರಾಮದ ಗುತ್ತಿಗೆದಾರ ಸಂಜಯ್ ಕುಮಾರ್ ಅವರು, ತಮ್ಮ ಸಹೋದರನನ್ನು ಅಪಹರಿಸಲಾಗಿದೆ ಎಂದು ಜನವರಿ 5ರಂದು ಪೊಲೀಸ್ ಠಾಣೆ ಮೆಟ್ಟಿಲೇರಿದ್ದರು. ಅಪಹರಣಕಾರರು ಅಪರಿಚಿತ ಸಂಖ್ಯೆಯಿಂದ ಸಂದೇಶ ಕಳುಹಿಸಿದ್ದು, 5,000ಕ್ಕೆ ಬೇಡಿಕೆ ಇಟ್ಟಿದ್ದಾರೆ.

ಹಣ ನೀಡದಿದ್ದರೆ, ಸಹೋದರನನ್ನು ಕೊಲೆ ಮಾಡುವುದಾಗಿ ಬೆದರಿಸಿದ್ದಾರೆ ಎಂದು ಮಾಹಿತಿ ನೀಡಿದ್ದರು. ಸಂದೀಪ್ ಅವರ ಕೈ-ಕಾಲುಗಳನ್ನು ಕಟ್ಟಿರುವ 13 ಸೆಕೆಂಡ್‌ಗಳ ವಿಡಿಯೊವನ್ನೂ ಸಂಜಯ್ ಅವರಿಗೆ ಕಳುಹಿಸಲಾಗಿತ್ತು. ಅದರಂತೆ, ವಿಡಿಯೊ ಹಾಗೂ ಸಂದೇಶವನ್ನು ಪರಿಶೀಲಿಸಿದಾಗ, ಅಪಹರಣದ ನಾಟಕ ಬಯಲಾಗಿದೆ ಎಂದು ಪೊಲೀಸ್ ವರಿಷ್ಠಾಧಿಕಾರಿ ನೀರಜ್ ಕುಮಾರ್ ಜದೌನ್ ಅವರು ತಿಳಿಸಿದ್ದಾರೆ.

> ಸದ್ಯ ಸಂದೀಪನನ್ನು ಬಂಧಿಸಲಾಗಿದೆ. ಮಿರ್ಜಾಪುರದ ಕಬ್ಬಿನ ಜ್ಯೂಸ್ ಸೆಂಟರ್‌ವೊಂದರಲ್ಲಿ ಕೆಲಸ ಮಾಡಿಕೊಂಡಿರುವ ಸಂದೀಪನ ಬೈಕ್, ಕಳೆದವರ್ಷ ಡಿಸೆಂಬರ್ 30ರಂದು ವ್ಯಕ್ತಿಯೊಬ್ಬರಿಗೆ ಡಿಕ್ಕಿಯಾಗಿತ್ತು. ಸಂತ್ರಸ್ತ ವ್ಯಕ್ತಿಯ ಕಾಲಿಗೆ ಪೆಟ್ಟಾಗಿತ್ತು. ಅವರು, ಪರಿಹಾರಕ್ಕೆ ಬೇಡಿಕೆ ಇಟ್ಟದ್ದರಿಂದ, ಸಂದೀಪ್‌ಗೆ ಹಣದ ಅವಶ್ಯಕತೆ ಎದುರಾಗಿತ್ತು. ಹೀಗಾಗಿ, ಅಪಹರಣದ ನಾಟಕವಾಡಿದ್ದ ಎಂದು ಅಧಿಕಾರಿ ಹೇಳಿದ್ದಾರೆ.

ಸಂಜಯ್ ಕುಮಾರ್ ಅವರಿಗೆ ಬಂದ ಸಂದೇಶವನ್ನು ಗಮನಿಸಿದಾಗ, ಪದವನ್ನು ಎಂದು ಬರೆದಿರುವುದು ಗೊತ್ತಾಗಿತ್ತು. ಇದರಿಂದಾಗಿ, ಅಪಹರಣಕಾರರು ಹೆಚ್ಚು ಓದಿದ ವರಲ್ಲ ಎಂಬ ಸುಳಿವು ಸಿಕ್ಕಿತ್ತು. ಸಂಜಯ್ ಅವರಿಗೆ ಯಾರೊಂದಿಗೂ ವೈರತ್ವ ಇಲ್ಲ. ಅಲ್ಲದೆ, ಬೇಡಿಕೆ ಇಟ್ಟಿರುವ ಹಣವೂ ದೊಡ್ಡದೇನಲ್ಲ ಎಂಬುದು ನಮ್ಮ ಅನುಮಾನವನ್ನು ಮತ್ತಷ್ಟು ಹೆಚ್ಚಿಸಿತ್ತು' ಎಂದಿದ್ದಾರೆ. ಮೊಬೈಲ್ ನಂಬರ್‌ನ ಲೊಕೇಷನ್ ಜಾಡು ಹಿಡಿದಾಗ, ಸಂದೀಪ್ ರುಪಾಪುರ್‌ನಲ್ಲಿರುವುದು ತಿಳಿದುಬಂದಿತ್ತು. ಬಳಿಕ ಆತನನ್ನು ವಶಕ್ಕೆ ಪಡೆದು ವಿಚಾರಣೆಗೆ ಒಳಪಡಿಸಲಾಯಿತು.

ಹಣಕ್ಕೆ ಬೇಡಿಕೆ ಇಟ್ಟಿದ್ದ ಸಂದೇಶದಲ್ಲಿದ್ದ ಮಾಹಿತಿಯನ್ನು ತಿಳಿಸಿ ಅದನ್ನು ಬರೆಯುವಂತೆ ಹೇಳಿದಾಗ, ಇದರೊಂದಿಗೆ, ಇದೆಲ್ಲ ನಾಟಕ ಎಂಬುದು ಸ್ಪಷ್ಟವಾಯಿತು.


ಆದಾಗ್ಯೂ, ವಿಚಾರಣೆ ಮುಂದುವರಿಸಿದಾಗ, ಅಣ್ಣನಿಂದ ಹಣ ವಸೂಲಿ ಮಾಡುವ ಉದ್ದೇಶ ಹೊಂದಿದ್ದಾಗಿ ಹಾಗೂ ಅಪರಾಧ ಪ್ರಕರಣಗಳಿಗೆ ಸಂಬಂಧಿಸಿದಂತೆ ಟಿವಿಯಲ್ಲಿ ಪ್ರಸಾರವಾಗುವ ಜನಪ್ರಿಯ ಧಾರಾವಾಹಿ 'ಸಿಐಡಿ' ನೋಡಿ ಈ ಉಪಾಯ ಮಾಡಿದ್ದಾಗಿ ಒಪ್ಪಿಕೊಂಡಿದ್ದಾನೆ' ಎಂದು ವಿವರಿಸಿದ್ದಾರೆ.

## ಕಾರಿನಲ್ಲಿ ಬೆಂಕಿ ಹಚ್ಚಿಕೊಂಡು ಪ್ರೇಮಿಗಳ ಆತ್ಮಹತ್ಯೆ

**ಹೈದರಾಬಾದ್:** ಪ್ರೀತಿಗೆ ಪೋಷಕರು ವಿರೋಧ ವ್ಯಕ್ತಪಡಿಸಿದ ಹಿನ್ನೆಲೆಯಲ್ಲಿ ಪ್ರೇಮಿಗಳು ಕಾರಿನೊಳಗೆ ಬೆಂಕಿ ಹಚ್ಚಿಕೊಂಡು ಆತಹತ್ಯೆ ಮಾಡಿಕೊಂಡಿರುವ ಭೀಕರ ಘಟನೆ ತೆಲಂಗಾಣದ ಗಡ್ಕೇಸರ್ ಜನ್ನಾಪುರ ಬಳಿ ನಡೆದಿದೆ.

ಮೃತರನ್ನು ಪರ್ವತರಂ ಶ್ರೀರಾಮ್ ಮತ್ತು ಅಪ್ರಾಪ್ತ ಬಾಲಕಿ ಎಂದು ಪೊಲೀಸರು ತಿಳಿಸಿದ್ದಾರೆ. ನೆಲಗೊಂಡ ಜಿಲ್ಲೆಯ ಜೆಬಿ ನಗರದ ನಿವಾಸಿ ಶ್ರೀರಾಮ್ ಸರಪಲ್ಲಿಯಲ್ಲಿ ಸೈಕಲ್ ಅಂಗಡಿಯೊಂದರಲ್ಲಿ ಕೆಲಸ ಮಾಡುತ್ತಿದ್ದ. ಅಂಗಡಿಗೆ ಹೋಗಿ ಬರುತ್ತಿದ್ದಾಗ ಅಪ್ರಾಪ್ತ ಬಾಲಕಿಯ ಪರಿಚಯವಾಗಿದ್ದು, ನಂತರದ ದಿನಗಳಲ್ಲಿ ಅವರಿಬ್ಬರ ಮಧ್ಯೆ ಸ್ನೇಹ ಬೆಳೆದು ಪ್ರೀತಿಗೆ ತಿರುಗಿತ್ತು. ಇವರಿಬ್ಬರ ಪ್ರೀತಿಯ ವಿಷಯ ಮನೆಯವರಿಗೆ ಗೊತ್ತಾಗಿದೆ. ಅಪ್ರಾಪ್ತ ಬಾಲಕಿಯಾಗಿದ್ದರಿಂದ ಪೋಷಕರು ಮದುವೆಗೆ ವ್ಯಕ್ತಪಡಿಸಿದ್ದಾರೆ. ಇದರ ನಡುವೆ ಇವರ ಸ್ನೇಹಿತರು ಇವರಿಬ್ಬರಿಗೂ ಮದುವೆ ಮಾಡಿಸಲು ಲಕ್ಷಾಂತರ ಹಣವನ್ನು ಕೂಡ ಸಂಗ್ರಹಿಸಿದ್ದರು ಎನ್ನಲಾಗಿದೆ.

ಎರಡು ಕುಟುಂಬದವರು ಮದುವೆಗೆ ವಿರೋಧ ವ್ಯಕ್ತಪಡಿಸಿದ್ದರಿಂದ ತಾವು ಒಂದಾಗಲು ಸಾಧ್ಯವಿಲ್ಲವೆಂದು ನೊಂದು ಆತಹತ್ಯೆ ಮಾಡಿಕೊಳ್ಳಲು ನಿರ್ಧರಿಸಿದ್ದಾರೆ.



ಪ್ರೇಮಿಗಳು ಡೆತ್‌ನೋಟ್ ಬರೆದಿಟ್ಟು ಕಾರಿನೊಳಗೆ ಬೆಂಕಿ ಹಚ್ಚಿಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ನಡುರಸ್ತೆಯಲ್ಲಿ ಕಾರು ಹೊತ್ತಿಉರಿಯುತ್ತಿದ್ದದ್ದನ್ನು ನೋಡಿ ಸಮೀಪವೇ ಗದ್ದೆಯಲ್ಲಿ ಕೆಲಸ ಮಾಡುತ್ತಿದ್ದ ರೈತರು ಪೊಲೀಸರಿಗೆ ಮಾಹಿತಿ ನೀಡಿದ್ದಾರೆ. ಇದರ ನಡುವೆ ಬಕೆಟ್‌ಗಳಲ್ಲಿ ನೀರು ತಂದು ಬೆಂಕಿ ಆರಿಸಲು ಕೂಡ ಪ್ರಯತ್ನಿಸಿದರಾದರೂ ಬೆಂಕಿ ಜ್ವಾಲೆ ಹೆಚ್ಚಾಗಿದ್ದರಿಂದ ಅದು ವಿಫಲವಾಗಿದೆ. ಸ್ಥಳಕ್ಕೆ ದಾವಿಸಿದ ಅಗ್ನಿಶಾಮಕ ಸಿಬ್ಬಂದಿ ಹಾಗೂ ಪೊಲೀಸರು ಬೆಂಕಿಯನ್ನು ನಂದಿಸುವಷ್ಟರಲ್ಲಿ ಪ್ರೇಮಿಗಳು ಸಜೀವ ದಹನವಾಗಿದ್ದರು. ಈ ಬಗ್ಗೆ ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು ಮುಂದಿನ ತನಿಖೆ ಕೈಗೊಂಡಿದ್ದಾರೆ.

## ಅದಾನಿ ಸಂಸ್ಥೆಗಳ ವಿರುದ್ಧದ ಕ್ರಮ ಖಂಡಿಸಿದ ಸಂಸದ

**ವಾಷಿಂಗ್ಟನ್:** ಭಾರತೀಯ ಬಿಲಿಯನೇರ್ ಗೌತಮ್ ಅದಾನಿ ಮತ್ತು ಅವರ ಕಂಪನಿಗಳ ಚಟುವಟಿಕೆಗಳನ್ನು ತನಿಖೆ ಮಾಡುವ ಬಿಡೆನ್ ಆಡಳಿತದ ನಿರ್ಧಾರವನ್ನು ಪ್ರಶ್ನಿಸಿರುವ ಪ್ರಭಾವಿ ರಿಪಬ್ಲಿಕನ್ ಸಂಸದರು ಇಂತಹ ಆಯ್ದ ಕ್ರಮಗಳು ನಿರ್ಣಾಯಕ ಮೈತ್ರಿ ಪಾಲುದಾರರಿಗೆ ಹಾನಿಯಾಗುವ ಅಪಾಯವಿದೆ ಎಂದು ಹೇಳಿದ್ದಾರೆ.

ಯುಎಸ್ ಅಟಾರ್ನಿ ಜನರಲ್ ಮೆರಿಕ್ ಬಿ ಗಾರ್ಲ್ಯಾಂಡ್‌ಗೆ ಬರೆದ ಪತ್ರದಲ್ಲಿ ಹೌಸ್ ಜುಡಿಷಿಯರಿ ಕಮಿಟಿಯ ಸದಸ್ಯರಾದ ಕಾಂಗ್ರೆಸ್‌ನ ಲ್ಯಾನ್ಸ್ ಗುಡೆನ್ ಅವರು ವಿದೇಶಿ ಘಟಕಗಳ ನ್ಯಾಯಾಂಗ ಇಲಾಖೆಯ ಆಯ್ದ ಕಾನೂನು ಕ್ರಮದ ಬಗ್ಗೆ ಉತ್ತರಗಳನ್ನು ಕೋರಿ ದರು ಮತ್ತು ಅಂತಹ ಕ್ರಮಗಳು ಯುಎಸ್‌ನ ಜಾಗತಿಕ ಮೈತ್ರಿ ಗಳು ಮತ್ತು ಆರ್ಥಿಕ ಬೆಳವಣಿಗೆಗೆ ಉಂಟುಮಾಡುವ ಸಂಭಾವ್ಯ ಹಾನಿ ಯಾಗಲಿದೆ ಎಂದು ಎಚ್ಚರಿಸಿದ್ದಾರೆ. ನ್ಯಾಯಾಂಗ ಇಲಾಖೆಯ ಆಯ್ದ ಕ್ರಮಗಳು ಏಷ್ಯಾ-ಪೆಸಿಫಿಕ್ ಪ್ರದೇಶದಲ್ಲಿ ಅಮೆರಿಕದ ಪ್ರಬಲ ಮಿತ್ರರಾಷ್ಟ್ರಗಳಲ್ಲಿ ಒಂದಾದ ಭಾರತದಂತಹ ಪ್ರಮುಖ ಪಾಲುದಾರರೊಂದಿಗೆ ನಿರ್ಣಾಯಕ ಮೈತ್ರಿಗಳನ್ನು ಹಾನಿಗೊಳಿಸುತ್ತವೆ ಎಂದು ಜನವರಿ 7 ರಂದು ಗೂಡೆನ್ ತನ್ನ ಪತ್ರದಲ್ಲಿ ತಿಳಿಸಿದ್ದಾರೆ. ಐದು-ಅವಧಿಯ ರಿಪಬ್ಲಿಕನ್ ಸಂಸದರು ಹತ್ತಾರು ಶತಕೋಟಿ ಡಾಲರ್‌ಗಳನ್ನು ಹೂಡಿಕೆ ಮಾಡುವ ಮತ್ತು ಅಮೆರಿಕನ್ನರಿಗೆ ಹತ್ತಾರು ಸಾವಿರ ಉದ್ಯೋಗಗಳನ್ನು ಸೃಷ್ಟಿಸುವ ಘಟಕಗಳನ್ನು ಗುರಿಯಾಗಿಸುವುದು ದೀರ್ಘಾವಧಿಯಲ್ಲಿ ಯುಎಸ್‌ಗೆ ಹಾನಿ ಮಾಡುತ್ತದೆ ಎಂದು ಹೇಳಿದರು.


> ಅನಿಶ್ಚಿತ ನ್ಯಾಯವ್ಯಾಪ್ತಿ ಮತ್ತು ಯುಎಸ್ ಹಿತಾಸಕ್ತಿಗಳಿಗೆ ಸೀಮಿತ ಪ್ರಸ್ತುತತೆಯೊಂದಿಗೆ ಪ್ರಕರಣಗಳನ್ನು ಮುಂದುವರಿಸುವ ಬದಲು, ಡಿಒಜೆ ವಿದೇಶದಲ್ಲಿ ವದಂತಿಗಳನ್ನು ಬೆನ್ನಟ್ಟುವ ಬದಲು ತಮಲ್ಲೆ ತಪ್ಪು ಮಾಡಿರುವವರನ್ನು ಶಿಕ್ಷಿಸುವತ್ತ ಗಮನಹರಿಸಬೇಕು ಎಂದರು.



## 11 ಕಾರ್ಮಿಕರ ರಕ್ಷಣೆಗೆ ಎನ್‌ಡಿಆರ್‌ಎಫ್ ನಿಯೋಜನೆ

**ಗುವಹಟಿ:** ಅಸ್ಸಾಂನ ಗುಡ್ಡಗಾಡು ದಿಮಾ ಹಸಾವೊ ಜಿಲ್ಲೆಯಲ್ಲಿ ರಾಟ್ ಹೋಲ್ ಕಲ್ಲಿದ್ದಲು ಗಣಿಯಲ್ಲಿ ಸಿಲುಕಿರುವ 11 ಗಣಿಗಾರರನ್ನು ರಕ್ಷಿಸಲು ಎನ್‌ಡಿಆರ್‌ಎಫ್ ಮತ್ತು ಎಸ್‌ಡಿಆರ್‌ಎಫ್, ಸೇನಾ ಸಿಬ್ಬಂದಿಯನ್ನು ನಿಯೋಜಿಸಲಾಗಿದೆ. ಉಮ್ರಾಂಗ್ಸೊದ 3 ಕಿಲೋ ಪ್ರದೇಶದಲ್ಲಿನ ಅಸ್ಸಾಂ ಕಲ್ಲಿದ್ದಲು ಕ್ವಾರಿಯಲ್ಲಿ ಭೂಗತ ನೀರಿನ ಹೊಡೆದು ಪ್ರವಾಹ ಸಂಭವಿಸಿದೆ. ಗಣಿಯೊಳಗೆ ಸುಮಾರು 100 ಅಡಿ ನೀರು ಇದ್ದು, ಸಿಕ್ಕಿಬಿದ್ದ ಗಣಿಗಾರರನ್ನು ರಕ್ಷಿಸುವ ಪ್ರಯತ್ನಗಳು ಸವಾಲಿನಿಂದ ಕೂಡಿದ್ದು ಇದಕ್ಕಾಗಿ ಸೇನೆಯನ್ನು ನಿಯೋಜನೆ ಮಾಡಲಾಗಿದೆ.

ರಕ್ಷಕರು ಮೊದಲು ನೀರಿನ ಮೂಲಕ ಚಲಿಸಲು ಪ್ರಯತ್ನಿಸಿದ್ದು ಕೆಲವು ಬೂಟುಗಳು, ಚಪ್ಪಲಿಗಳು ಕಂಡುಬಂದಿಲ್ಲ ಆದರೆ ಗಣಿಗಾರರಿಲ್ಲ. ಕಾರ್ಮಿಕರು ಸಮತಲವಾದ ಇಲಿ ರಂಧ್ರಗಳ ಒಳಗೆ ಇರಬಹುದೆಂದು ತಜ್ಞರು ಅಭಿಪ್ರಾಯ ಪಟ್ಟಿದ್ದಾರೆ. ಅಸ್ಸಾಂ ಮುಖ್ಯಮಂತ್ರಿ ಹಿಮಂತ ಬಿಸ್ವಾ ಶರ್ಮಾ ಮಾತನಾಡಿ ಗಣಿಯಲ್ಲಿ ಸಿಲುಕಿರುವ ಕಾರ್ಮಿಕರನ್ನು ರಕ್ಷಿಸುವ ಕೆಲಸ ನಡೆದಿದೆ.



ಕಾರ್ಮಿಕರನ್ನು ಸುರಕ್ಷಿತವಾಗಿ ಹೊರಗೆ ಕರೆತರಲು ಎಲ್ಲಾ ಪ್ರಯತ್ನಗಳನ್ನು ಸರ್ಕಾರ ಮಾಡುತ್ತಿದೆ ಎಂದು ಹೇಳಿದ್ದಾರೆ. ರಕ್ಷಣೆಗೆ ಸಹಾಯ ಮಾಡಲು, ಒಎನ್‌ಜಿಸಿಯಿಂದ ನೀರಿನ ಪಂಪ್‌ಗಳನ್ನು ಬಳಸಲಾಗುತ್ತಿದೆ ಮತ್ತು ಕೋಲ್ ಇಂಡಿಯಾ ತಮ್ಮ ಪಂಪ್‌ಗಳೊಂದಿಗೆ ಪ್ರಯತ್ನ ಮಾಡಿದೆ. ಸೇನೆ ಮತ್ತು ಅಸ್ಸಾಂ ರೈಫಲ್ಸ್‌ನ ತಜ್ಞ ಡೈವರ್‌ಗಳು, ವೈದ್ಯಕೀಯ ತಂಡಗಳು ಮತ್ತು ಸಹಾಯಕ ಸಿಬ್ಬಂದಿ ಕಾರ್ಯಾಚರಣೆಯಲ್ಲಿ ಪಾಲ್ಗೊಂಡಿದ್ದಾರೆ ಎಂದು ಮಾಹಿತಿ ನೀಡಿದ್ದಾರೆ.

ಗಣಿ ಒಂದು ಬಾಕ್ಸ್-ಕಟಿಂಗ್ ಇಲಿ-ಹೋಲ್ ಗಣಿಯಾಗಿದೆ, ಅಲ್ಲಿ ಕಾರ್ಮಿಕರು ಸಣ್ಣ ಆಯತಾಕಾರದ ತೆರೆಯುವಿಕೆಯ ಮೂಲಕ ಇಳಿಯುತ್ತಾರೆ, ಸಾಮಾನ್ಯವಾಗಿ 200 ರಿಂದ 400-ಅಡಿ ಆಳ, ಮತ್ತು ಕಲ್ಲಿದ್ದಲನ್ನು ಹೊರತೆಗೆಯಲು ಸಮತಲ ರಂಧ್ರಗಳನ್ನು ಅಗೆಯುತ್ತಾರೆ ಎಂದು ತಿಳಿಸಿದ್ದಾರೆ. ಕಾಂಗ್ರೆಸ್ ಸಂಸದ ಗೌರವ್ ಗೊಗೊಯ್ ಪ್ರತಿಕ್ರಿಯಿಸಿ ಗಣಿಗಳ ಸಂಪೂರ್ಣ ಮತ್ತು ಕಡ್ಡಾಯ ಸುರಕ್ಷತಾ ಲೆಕ್ಕಪರಿಶೋಧನೆಗಳನ್ನು ತ್ವರಿತವಾಗಿ ನಡೆಸಬೇಕು ಮತ್ತು ಕಾರ್ಮಿಕರನ್ನು ಸಮರ್ಪಕವಾಗಿ ರಕ್ಷಿಸಲು ಎಲ್ಲಾ ಕ್ರಮ ಗೊಳ್ಳಬೇಕು ಎಂದು ಒತ್ತಾಯಿಸಿದ್ದಾರೆ.

> ಅಪಘಾತದ ತನಿಖೆ ನಡೆಯುತ್ತಿದೆ, ಉಮ್ರಾಂಗ್ಸೊ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿದೆ. ಶಿಕ್ಷೆ ನುನೀಸಾ ಎಂಬ ವ್ಯಕ್ತಿಯನ್ನು ಬಂಧಿಸಲಾಗಿದೆ ಎಂದಿದ್ದಾರೆ. ರಕ್ಷಣಾ ಇಲಾಖೆಯ ಹಿರಿಯ ಅಧಿಕಾರಿ ಪ್ರೊ ಲೆಫ್ಟಿನೆಂಟ್ ಕರ್ನಲ್ ಎಂ ರಾವತ್ ಮಾತನಾಡಿ ಗಣಿಯಲ್ಲಿ ಸಿಕ್ಕಿಬಿದ್ದ ಒಂಬತ್ತು ಗಣಿಗಾರರನ್ನು ಗುರುತಿಸಲಾಗಿದೆ ತಲಾ ಒಬ್ಬರು ನೇಪಾಳ ಮತ್ತು ಬಂಗಾಳದಿಂದ ಬಂದವರು, ಉಳಿದವರು ಅಸ್ಸಾಂನವರು ಎಂದರು.

# ರಸ್ತೆ ಅಪಘಾತದಲ್ಲಿ ಗಾಯಗೊಂಡವರಿಗೆ ನಗದು ರಹಿತ ಚಿಕಿತ್ಸೆ

## ರಸ್ತೆ ಸುರಕ್ಷತೆಗೆ ಅಗತ್ಯ ಕ್ರಮಗಳನ್ನು ಕೈಗೊಳ್ಳುವ ಭರವಸೆ, ಮತ್ತೊಂದು ಜನಪರ ಯೋಜನೆ ಘೋಷಣೆ


ಗರಿಷ್ಠ ಮೊತ್ತ ಎಷ್ಟು ಗೊತ್ತಾ?

**ಹೊಸದಿಲ್ಲಿ:** ಜನಪರ ಯೋಜನೆಗಳ ಜಾರಿಗೆ ಹೆಸರುವಾಸಿಯಾಗಿರುವ ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವ ನಿತಿನ್ ಗಡ್ಕರಿ, ಇದೀಗ ಮತ್ತೊಂದು ಜನಪರ ಯೋಜನೆಯನ್ನು ಘೋಷಿಸಿದ್ದಾರೆ. ಇನ್ನು ಮುಂದೆ ರಸ್ತೆ ಅಪಘಾತದಲ್ಲಿ ಗಾಯಗೊಂಡವರಿಗೆ ನಗದು ರಹಿತ ಚಿಕಿತ್ಸೆಯ ಸೌಲಭ್ಯ ಒದಗಿಸುವುದಾಗಿ ನಿತಿನ್ ಗಡ್ಕರಿ ತಿಳಿಸಿದ್ದಾರೆ. ರಾಷ್ಟ್ರ ರಾಜಧಾನಿ ಹೊಸದಿಲ್ಲಿಯಲ್ಲಿ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದ ನಿತಿನ್ ಗಡ್ಕರಿ, ಅಪಘಾತ ಸಂಭವಿಸಿದ 24 ಗಂಟೆಯೊಳಗೆ ಪೊಲೀಸರಿಗೆ ಮಾಹಿತಿ ನೀಡಿದ ನಂತರ ಸಂತ್ರಸ್ತರ ಏಳು ದಿನಗಳ ಚಿಕಿತ್ಸಾ ವೆಚ್ಚ ಅಥವಾ ಗರಿಷ್ಠ 1.5 ಲಕ್ಷ ರೂ. ಮೊತ್ತವನ್ನು ನೀಡಲಾಗುವುದು.. ಎಂದು ಸ್ಪಷ್ಟಪಡಿಸಿದರು.

ನಗದು ರಹಿತ ಚಿಕಿತ್ಸೆ ಯೋಜನೆಯಲ್ಲಿ ಕೆಲವು ದೋಷಗಳನ್ನು ನಾವು ಗುರುತಿಸಿದ್ದೇವೆ. ಈ ದೋಷಗಳನ್ನು ನಿವಾರಿಸಿ ಶೀಘ್ರದಲ್ಲೇ ಇಡೀ ದೇಶಕ್ಕೆ ಅನ್ವಯವಾಗುವಂತೆ ಯೋಜನೆಯನ್ನು ಜಾರಿಗೊಳಿಸುತ್ತೇವೆ. ಎಂದು ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವರು ಮಾಹಿತಿ ನೀಡಿದರು.

ರಸ್ತೆ ಸುರಕ್ಷತೆ ನಮ್ಮ ಪ್ರಥಮ ಆದ್ಯತೆಯಾಗಿದೆ. ಆದಾಗ್ಯೂ, 2024ರಲ್ಲಿ ಸುಮಾರು 1.8 ಲಕ್ಷ ಜನರು ರಸ್ತೆ ಅಪಘಾತದಲ್ಲಿ ತಮ್ಮ ಪ್ರಾಣ ಕಳೆದುಕೊಂಡಿದ್ದಾರೆ. ಈ ಪೈಕಿ ಸುಮಾರು 30 ಸಾವಿರ ಜನ ಹೆಲ್ಮೆಟ್ ಧರಿಸದೇ ಇರುವ ಕಾರಣಕ್ಕೆ ಅಪಘಾತದಲ್ಲಿ ತಮ್ಮ ಪ್ರಾಣ ಕಳೆದು ಕೊಂಡಿದ್ದಾರೆ. ಮಾರಣಾಂತಿಕ ಅಪಘಾತ ಪ್ರಕರಣಗಳಲ್ಲಿ ಪ್ರಾಣ ಕಳೆದುಕೊಂಡವರ ಪೈಕಿ ಶೇ.66ರಷ್ಟು ಜನ 18-34 ವರ್ಷದೊಳಗಿನ ಯುವಕರು ಎಂಬುದು ಇನ್ನೂ ಆಘಾತಕಾರಿಯಾಗಿದೆ.. ಎಂದು ನಿತಿನ್ ಗಡ್ಕರಿ ನುಡಿದರು.

> ಇನ್ನು ಹಿಟ್ ಅಂಡ್ ರನ್ ಅಪಘಾತ ಪ್ರಕರಣದಲ್ಲಿ ಮೃತಪಟ್ಟರೆ, ಕುಟುಂಬದ ಸದಸ್ಯರಿಗೆ 2 ಲಕ್ಷ ರೂ. ಪರಿಹಾರ ನೀಡುವುದಾಗಿಯೂ ನಿತಿನ್ ಗಡ್ಕರಿ ಘೋಷಿಸಿದ್ದಾರೆ. ನಗದು ರಹಿತ ಚಿಕಿತ್ಸೆ ಯೋಜನೆಯು ಈಗಾಗಲೇ ಕೆಲವು ರಾಜ್ಯಗಳಲ್ಲಿ ಪ್ರಾಯೋಗಿಕವಾಗಿ ಜಾರಿಯಲ್ಲಿದ್ದು, ಇದನ್ನು ಸಂಪೂರ್ಣ ದೇಶಕ್ಕೆ ಅನ್ವಯಿಸುವಂತೆ ಶೀಘ್ರದಲ್ಲೇ ಜಾರಿಗೊಳಿಸಲಾಗುವುದು
> -ನಿತಿನ್ ಗಡ್ಕರಿ, ಕೇಂದ್ರ ರಸ್ತೆ ಸಾರಿಗೆ, ಹೆದ್ದಾರಿ ಸಚಿವ



### ಗರಿಷ್ಠ 1.5 ಲಕ್ಷ ರೂ.

ಇನ್ನು ಮುಂದೆ ರಸ್ತೆ ಅಪಘಾತದಲ್ಲಿ ಗಾಯಗೊಂಡವರಿಗೆ ನಗದು ರಹಿತ ಚಿಕಿತ್ಸೆಯ ಸೌಲಭ್ಯ ಒದಗಿಸುವುದಾಗಿ ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವ ನಿತಿನ್ ಗಡ್ಕರಿ ಮಾಹಿತಿ ನೀಡಿದ್ದಾರೆ. ಅಪಘಾತ ಸಂಭವಿಸಿದ 24 ಗಂಟೆಯೊಳಗೆ ಪೊಲೀಸರಿಗೆ ಮಾಹಿತಿ ನೀಡಿದ ನಂತರ ಸಂತ್ರಸ್ತರ ಏಳು ದಿನಗಳ ಚಿಕಿತ್ಸಾ ವೆಚ್ಚ ಅಥವಾ ಗರಿಷ್ಠ 1.5 ಲಕ್ಷ ರೂ. ಮೊತ್ತವನ್ನು ನೀಡಲಾಗುವುದು ಎಂದು ನಿತಿನ್ ಗಡ್ಕರಿ ಸ್ಪಷ್ಟಪಡಿಸಿದರು.

ಇನ್ನು ಅಪಘಾತ ಪ್ರಕರಣಗಳಲ್ಲಿ ಚಾಲನಾ ಪರವಾನಿಗೆ ಇಲ್ಲದೇ ವಾಹನ ಓಡಿಸುವವರ ಸಂಖ್ಯೆಯೇ ಅಧಿಕ ಎಂದಿರುವ ನಿತಿನ್ ಗಡ್ಕರಿ, ಚಾಲನಾ ತರಬೇತಿ ಕೇಂದ್ರಗಳನ್ನು ಸ್ಥಾಪಿಸುವ ಕುರಿತು ಹೊಸ ನೀತಿಯನ್ನು ಜಾರಿಗೊಳಿಸುವುದಾಗಿ ಹೇಳಿದರು. ಹಳೆಯ ವಾಹನಗಳ ಸ್ಕ್ರ್ಯಾಪಿಂಗ್ ನೀತಿಗೆ ಸ್ಪಷ್ಟ ರೂಪ ನೀಡಬೇಕಿದ್ದು, ದೇಶದ ಆಟೋಮೊಬೈಲ್ ಕ್ಷೇತ್ರದ ಬೆಳವಣಿಗೆಗೂ ಇದು ಸಹಾಯಕಾರಿಯಾಗಿದೆ. ಈ ಕುರಿತು ದೇಶದ ಆಟೋಮೊಬೈಲ್ ಕಂಪನಿಗಳೊಂದಿಗೆ ನಡೆಯುತ್ತಿರುವ ಮಾಹಿತಿ ಪ್ರಗತಿಯ ಹಂತದಲ್ಲಿದೆ ಎಂದೂ ಇದೇ ವೇಳೆ ಕೇಂದ್ರ ಸಚಿವರು ಸ್ಪಷ್ಟಪಡಿಸಿದರು.

ಒಟ್ಟಿನಲ್ಲಿ ಅಪಘಾತದಲ್ಲಿ ಗಾಯಗೊಂಡವರಿಗೆ ನಗದು ರಹಿತ ಚಿಕಿತ್ಸೆ ಯೋಜನೆಗೆ ಭಾರೀ ಬೆಂಬಲ ವ್ಯಕ್ತವಾಗಿದ್ದು, ತುರ್ತು ಸಂದರ್ಭದಲ್ಲಿ ದೊರೆಯಬಹುದಾದ ಮಾನವೀಯ ನೆರವು ಜೀವ ಉಳಿಸುವಲ್ಲಿ ಪೂರಕ ಎಂಬ ಅಭಿಪ್ರಾಯ ವ್ಯಕ್ತವಾಗಿದೆ.

## ಮಿನಿ ನ್ಯೂಸ್

### 9/11 ದಾಳಿಯ ಖಾಲಿದ್ ಶೇಖ್‌ಗೆ ಮರಣದಂಡ ಶಿಕ್ಷೆ ವಿಧಿಸುವಂತೆ ಮನವಿ

**ವಾಷಿಂಗ್ಟನ್:** ಅಮೆರಿಕವನ್ನು ಬೆಚ್ಚಿಬೀಳಿಸಿದ 9/11 ಭಯೋದ್ವಾದನಾ ದಾಳಿಯ ಮಾಸ್ಟರ್‌ಮೈಂಡ್ ಆರೋಪಿ ಖಾಲಿದ್ ಶೇಖ್ ಮೊಹಮದ್‌ಗೆ ಮರಣದಂಡನೆ ಶಿಕ್ಷೆಯಾಗಬೇಕು ಎಂದು ಬಿಡೆನ್ ಆಡಳಿತವು ಫೆಡರಲ್ ಮೇಲನವಿ ನ್ಯಾಯಾಲಯವನ್ನು ಕೇಳಿಕೊಂಡಿದೆ. ಅಮೆರಿಕದಲ್ಲಿ ಸೆ.11, 2001ರ ದಾಳಿಯಲ್ಲಿ ಮೊಹಮದ್ ಮತ್ತು ಇಬ್ಬರು ಸಹಪ್ರತಿವಾದಿಗಳ ಕಡಿಮೆ ಶಿಕ್ಷೆಯ ಮನವಿಗಳನ್ನು ಸ್ವೀಕರಿಸಿದರೆ ಸರ್ಕಾರಕ್ಕೆ ಸರಿಪಡಿಸಲಾಗದಂತೆ ಹಾನಿಯಾಗುತ್ತದೆ ಎಂದು ಕೊಲಂಬಿಯಾದಲ್ಲಿನ ಮೇಲನವಿ ನ್ಯಾಯಾಲಯಕ್ಕೆ ಸರ್ಕಾರದ ವಕೀಲರು ಸಲ್ಲಿಸಿದ ಸಂಕ್ಷಿಪ್ತ ವರದಿ ಸಲ್ಲಿಸಿದೆ.

ಸರ್ಕಾರವು ಸಾರ್ವಜನಿಕ ವಿಚಾರಣೆಗೆ ಅವಕಾಶವನ್ನು ನಿರಾಕರಿಸಲಾಗುವುದು ಮತ್ತು ಸಾವಿರಾರು ಜನರ ಸಾವಿಗೆ ಕಾರಣವಾದ, ರಾಷ್ಟ್ರ, ಜಗತ್ತನ್ನು ಬೆಚ್ಚಿಬೀಳಿಸಿದ ಸಾಮೂಹಿಕ ಹತ್ಯೆಯ ಘೋರ ಕೃತ್ಯದ ಆರೋಪ ಹೊತ್ತಿರುವ ಮೂವರಿಗೆ ಮರಣದಂಡನೆ ಜಾರಿಯನ್ನುತಡೆಯುವುದನ್ನು ನಾವು ಒಪ್ಪುವುದಿಲ್ಲ ಎಂದು ಹೇಳಿದೆ. ಸುಧೀರ್ಘ ವಿಚಾರಣೆ ,ಶಿಕ್ಷೆ ಕೊಡಿಸುವಲ್ಲಿ ಸರ್ಕಾರದ ವಿಳಂಬದ ಬಗ್ಗೆ ಯೂ ಕೆಲವರು ವಿಷಾಧ ವ್ಯಕ್ತಪಡಿಸಿದ್ದಾರೆ.

ವಯಸ್ಸಾದ ಬಂಧಿತರನ್ನು ಎಂದಿಗೂ ತೀರ್ಪುಗಳು ಮತ್ತು ಯಾವುದೇ ಸಂಭವನೀಯ ಶಿಕ್ಷೆಗಳನ್ನು ಎದುರಿಸದಂತೆ ತಡೆಯಬಹುದು ಎಂದು ಕೆಲವು ಕಾನೂನು ತಜ್ಞರು ಎಚ್ಚರಿಸಿದ್ದಾರೆ. ಮಿಲಿಟರಿ ಪ್ರಾಸಿಕ್ಯೂಟರ್‌ಗಳು ಭಯೋತ್ಪಾದನ ದಾಳಿಯಲ್ಲಿ ನೊಂದ ಕುಟುಂಬಗಳಿಗೆ ಗ್ವಾಂಟನಾಮೊವದಲ್ಲಿ ಹಿರಿಯ ಪೆಂಟಗನ್ ಅಧಿಕಾರಿಯು ಎರಡು ವರ್ಷಗಳ ಮಾತುಕತೆಗಳ ನಂತರ ಮನವಿ ಒಪ್ಪಂದವನ್ನು ಅನುಮೋದಿಸಿದ್ದಾರೆ. 2012 ರಿಂದ ಪ್ರಾಸಿಕ್ಯೂಷನ್ ನಡೆಯುತ್ತಿರುವುದರಿಂದ ಮತ್ತು ಮನವಿ ಒಪ್ಪಂದಗಳು ದೀರ್ಘಾವಧಿಯ ಜೈಲು ಶಿಕ್ಷೆಗೆ ಕಾರಣವಾಗಬಹುದು, ಅವರ ಉಳಿದ ಜೀವಿತಾವಧಿಯಲ್ಲಿ ಸಂಭಾವ್ಯ ಶಿಕ್ಷೆಗೆ ಗುರಿಯಾಗಬಹುದು ಎಂದು ನ್ಯಾಯಾಂಗ ಇಲಾಖೆ ಹೇಳಿದೆ.

### ಪದಚ್ಯುತ ಪ್ರಧಾನಿ ಶೇಖ್ ಹಸೀನಾ ಪಾಸ್‌ಪೋರ್ಟ್ ರದ್ದು



**ಢಾಕಾ:** ಬಾಂಗ್ಲಾದೇಶದ ಪದಚ್ಯುತ ಪ್ರಧಾನಿ ಶೇಖ್ ಹಸೀನಾ ಅವರ ಪಾಸ್‌ಪೋರ್ಟ್ ಅನ್ನು ಮಧ್ಯಂತರ ಸರ್ಕಾರ ರದ್ದುಗೊಳಿಸಿದೆ. 2024ರ ಜುಲೈನಲ್ಲಿ ದೇಶದಲ್ಲಿ ನಡೆದ ಹತ್ಯೆಗಳಲ್ಲಿ ಭಾಗಿಯಾಗಿದ್ದಾರೆ ಎಂದು ಆರೋಪಿಸಿ, 96 ಮಂದಿಯ ಪಾಸ್‌ಪೋರ್ಟ್ ಅನ್ನು ಹಿಂಪಡೆಯಲಾಗಿದೆ. ಕಣ್ಮರೆಯಾಗಿರುವ 22 ಜನರ ಪಾಸ್‌ಪೋರ್ಟ್ ಗಳನ್ನು ಪಾಸ್‌ಪೋರ್ಟ್ ಇಲಾಖೆ ರದ್ದುಗೊಳಿಸಿದೆ.

ಜುಲೈನಲ್ಲಿ ನಡೆದ ಹತ್ಯೆಯಲ್ಲಿ ಭಾಗಿಯಾದ ಆರೋಪದ ಮೇಲೆ, ಇದೇ ಸಂದರ್ಭ ದಲ್ಲಿ ಶೇಖ್ ಹಸೀನಾ ಸೇರಿದಂತೆ 75 ಜನರ ಪಾಸ್‌ಪೋರ್ಟ್ ಗಳನ್ನು ರದ್ದುಗೊಳಿಸಿದೆ ಎಂದು ಮುಖ್ಯ ಸಲಹೆಗಾರರ ಉಪ ಪತ್ರಿಕಾ ಕಾರ್ಯದರ್ಶಿ ಅಬುಲ್ ಕಲಾಂ ಅಜಾದ್ ಮಜುಂದಾರ್ ಪತ್ರಿಕಾ ಗೋಷ್ಠಿಯಲ್ಲಿ ತಿಳಿಸಿದರು.

ಬಾಂಗ್ಲಾದೇಶದ ಅಂತರರಾಷ್ಟ್ರೀಯ ಅಪರಾಧಗಳ ನ್ಯಾಯ ಮಂಡಳಿಯು (ಐಸಿಟಿ) ನರಮೇಧ ನಡೆಸಿದ ಅಪರಾಧಕ್ಕಾಗಿ ಹಸೀನಾ ಸೇರಿದಂತೆ ಮಾಜಿ ಸಚಿವರು, ಸಲಹೆಗಾರರು, ಸೇನೆ ಹಾಗೂ ನಾಗರಿಕ ಅಧಿಕಾರಿಗಳ ವಿರುದ್ಧ ಬಂಧನದ ವಾರಂಟ್ ಹೊರಡಿಸಿದೆ. ವಿದ್ಯಾರ್ಥಿಗಳ ಬೃಹತ್ ಪ್ರತಿಭಟನೆಯ ನಂತರ ಶೇಖ್ ಹಸೀನಾ ನೇತೃತ್ವದ ಅವಾಮಿ ಲೀಗ್‌ನ (ಎಎಲ್) 16 ವರ್ಷಗಳ ಆಡಳಿತವು ಕಳೆದ ಆ. 5ರಂದು ಕೊನೆಗೊಂಡಿತ್ತು.

### ಆನೆ ಅವಾಂತರ 17ಮಂದಿಗೆ ಗಾಯ

**ಕೇರಳ:** ಧಾರ್ಮಿಕ ಕಾರ್ಯಕ್ರಮದಲ್ಲಿ ಆನೆಯೊಂದು ಭಾರೀ ಅನಾ ಹುತ ಮಾಡಿದ ಘಟನೆ ಕೇರಳ ರಾಜ್ಯದಲ್ಲಿ ಮಧ್ಯರಾತ್ರಿ ನಡೆದಿದೆ.ಆನೆ ಮಾಡಿದ ಈ ಅನಾಹುತದಿಂದ 17 ಜನಗಾಯಗೊಂಡು, ಇಬ್ಬರ ಸ್ಥಿತಿ ಚಿಂತಾಜನಕವಾಗಿದೆ ಎನ್ನಲಾಗಿದೆ. ಮಲಪ್ಪುರಂನ ಪುತಿ ಯಂಗಡಿಯಲ್ಲಿರುವ ಮಸೀದಿಯ ಆವರಣದಲ್ಲಿ ನಡೆದ ಧಾರ್ಮಿಕ ಕಾರ್ಯಕ್ರಮ ಒಂದರಲ್ಲಿ ಆಯೋಜಕರು ವಿಶೇಷ ಆಕರ್ಷಣೆಗಾಗಿ ಐದು ಆನೆಗಳನ್ನು ಅಲ್ಲಿಗೆ ಕರೆತಂದಿದ್ದಾರೆ ಆದರೆ, ಅದರಲ್ಲಿ ಒಂದು ಆನೆ ಮದವೇರಿ ಅವಾಂತರ ಸೃಷ್ಟಿಸಿದೆ. ಈ ಪೈಕಿ ಪಾಕತ್ ಶ್ರೀಕುಟ್ಟನ್ ಎಂಬ ಹೆಸರಿನ ಆನೆ ವ್ಯಕ್ತಿಯೊಬ್ಬನ ಮೇಲೆ ದಾಳಿ ಮಾಡಿ, ಸೊಂಡಿಲಿನಿಂದ ಎಳೆದು ಬಿಸಾಡಿದೆ. ಗಂಭೀರವಾಗಿ ಗಾಯಗೊಂಡ ವ್ಯಕ್ತಿಯನ್ನು ಕೊಟ್ಟಕಲ್ ಆಸ್ಪತ್ರೆಗೆ ದಾಖಲಿಸಲಾಗಿದೆ. ನಂತರ ಜೋರಾಗಿ ಸದ್ದು ಮಾಡುತ್ತಾ ಜನರ ಗುಂಪಿನತ್ತ ನುಗ್ಗಿದೆ.ಗಾಬರಿಗೊಂಡ ಜನರು ಓಡಲು ಪ್ರಾರಂಭಿಸಿದ್ದಾರೆ. ಈ ಅವಘಡದಲ್ಲಿ 17ಕ್ಕೂ ಹೆಚ್ಚು ಮಂದಿ ಗಾಯಗೊಂಡಿದ್ದಾರೆ. ಇಬ್ಬರ ಸ್ಥಿತಿ ಚಿಂತಾಜನಕವಾಗಿದೆ. ಸ್ಥಳೀಯರ ಮಾಹಿತಿ ಮೇರೆಗೆ ಅರಣ್ಯ ಇಲಾಖೆ ಅಧಿಕಾರಿಗಳು ಸ್ಥಳಕ್ಕೆ ಆಗಮಿಸಿ ಆನೆಯನ್ನು ಸೆರೆ ಹಿಡಿದಿದ್ದಾರೆ. ಗಾಯಾಳುಗಳನ್ನು ಚಿಕಿತ್ಸೆಗಾಗಿ ಹತ್ತಿರದ ಆಸ್ಪತ್ರೆಗೆ ರವಾನಿಸಲಾಗಿದೆ ಎನ್ನಲಾಗಿದೆ.

### ಇಸ್ರೋ ನೂತನ ಅಧ್ಯಕ್ಷರಾಗಿ ವಿ.ನಾರಾಯಣನ್ ನೇಮಕ

**ನವದೆಹಲಿ:** ದೇಶದ ಪ್ರತಿಷ್ಠಿತ ಇಸ್ರೊ ಸಂಸ್ಥೆಯ ಅಧ್ಯಕ್ಷರಾಗಿ ಮುಂದೆ ಹಿರಿಯ ಗಗನಯಾನಿ ಮತ್ತು ಕ್ರಯೋಜನಿಕ್ ಇಂಜಿನ್ ತಜ್ಞ ವಿ.ನಾರಾಯಣನ್ ನೇಮಕವಾಗಿದ್ದಾರೆ.ಇಸ್ರೊದ ಹಾಲಿ ಅಧ್ಯಕ್ಷ ವಿ.ಸೋಮನಾಥ್ ಅವರು ಇದೇ 14 ರಂದು ಸೇವೆಯಿಂದ ನಿವೃತ್ತರಾಗಲಿದ್ದು, ತೆರವಾಗಲಿರುವ ಈ ಸ್ಥಾನಕ್ಕೆ ಹಿರಿಯ ವಿಜ್ಞಾನಿ ನಾರಾಯಣನ್ ಅವರನ್ನು ಕೇಂದ್ರಸರ್ಕಾರ ನೇಮಕ ಮಾಡಿ ಆದೇಶ ಹೊರಡಿಸಿದೆ. ನೂತನ ಅಧ್ಯಕ್ಷರಾಗಲಿರುವ ವಿ.ನಾರಾಯಣನ್ ಅವರು ಪ್ರಸ್ತುತ ತಮಿಳುನಾಡಿನ ಮಹೇಂದ್ರಗಿರಿಯಲ್ಲಿರುವ ಇಸ್ರೊದ ಎಲ್‌ಪಿಎಸ್‌ಸಿಯ ನಿರ್ದೇಶಕರಾಗಿ ಸೇವೆ ಸಲ್ಲಿಸುತ್ತಿದ್ದಾರೆ. ಸೇವಾ ಹಿರಿತನದ ಆಧಾರದ ಮೇಲೆ ಅವರನ್ನು ಕೇಂದ್ರಸರ್ಕಾರ ನೇಮಕ ಮಾಡಿದೆ. ಲಿಕ್ವಿಡ್ ಪ್ರೊಪಲ್ಷನ್ ಸಿಸ್ಟಮ್ ಸೆಂಟರ್‌ನ ನಿರ್ದೇಶಕರಾಗಿಯೂ ಕೆಲಸ ಮಾಡಿರುವ ನಾರಾಯಣನ್ ಮುಂದಿನ ಎರಡು ವರ್ಷಗಳ ಅವಧಿಗೆ ಇಸ್ರೋದ ಅಧ್ಯಕ್ಷರಾಗಿ ಸೇವೆ ಸಲ್ಲಿಸಲಿದ್ದಾರೆ.

ಆದಿತ್ಯ ಬಾಹ್ಯಾಕಾಶ ನೌಕೆ ಮತ್ತು ಜಿಎಸ್‌ಎಲ್‌ವಿಎಂಕೆ -111 ಮಿಷನ್‌ನಂತಹ ಪ್ರಮುಖ ಯೋಜನೆಗಳಲ್ಲಿ ಇವರು ಪ್ರಮುಖ ಪಾತ್ರ ವಹಿಸಿದ್ದರು.ಇವರ ಹಿರಿತನದ ಜೊತೆಗೆ ಪರಿಣಿತಿ ಮತ್ತು ಸಾಧನೆಗಳನ್ನು ಗುರುತಿಸಿ ಕೇಂದ್ರ ಸರ್ಕಾರ ಹಲವಾರು ಪ್ರಶಸ್ತಿಗಳನ್ನು ನೀಡಿದೆ. ಭಾರತದ ಆಸ್ಟ್ರೋನಾಟಿಕಲ್ ಸೊಸೈಟಿಯಿಂದ ಶ್ರೀ ಪ್ರಶಸ್ತಿ ಮತ್ತು ಐಐಟಿ ಖರಗ್‌ಪುರದಿಂದ ಡಿಸ್ಟಿಂಕ್ಷನ್ ಅಲ್ಯುಮ್ನಸ್ ಪ್ರಶಸ್ತಿಗೂ ಪಾತ್ರರಾಗಿದ್ದಾರೆ.

# ರಚನಾ ಇಂದರ್ 'ತೀರ್ಥರೂಪ ತಂದೆಯವರಿಗೆ' ಚಿತ್ರಕ್ಕೆ ನಾಯಕಿ



'ತೀರ್ಥರೂಪ ತಂದೆಯವರಿಗೆ' ಶೀರ್ಷಿಕೆ ಮೂಲಕವೇ ನಿರ್ದೇಶಕ ರಾಮೇನಹಳ್ಳಿ ಜಗನ್ನಾಥ್ ಸುದ್ದಿಯಲ್ಲಿದ್ದಾರೆ. ಈಗಾಗಲೇ ಹಿರಿಯ ನಟ ಸಿತಾರಾ, ರಾಜೇಶ್ ನಟರಂಗ ಚಿತ್ರತಂಡ ಸೇರಿಕೊಂಡಿದ್ದಾರೆ. ಇದೀಗ ಈ ಸಿನಿಮಾದ ನಾಯಕಿಯನ್ನು ಚಿತ್ರತಂಡ ಪರಿಚಯಿಸಿದೆ. 'ಲವ್ ಮಾಕ್ಟೈಲ್' ಸಿನಿಮಾದ ಹೆಂಗೆ ನಾವು ಖ್ಯಾತಿಯ ರಚನಾ ಇಂದರ್ ಈ ಚಿತ್ರಕ್ಕೆ ನಾಯಕಿಯಾಗಿ ಎಂಟ್ರಿ ಕೊಡುತ್ತಿದ್ದಾರೆ.


ನಟಿ ರಚನಾ ಇಂದರ್ 'ತೀರ್ಥರೂಪ ತಂದೆಯವರಿಗೆ' ಸಿನಿಮಾ ತಂಡ ಸೇರ್ಪಡೆಯಾಗಿದ್ದಾರೆ. ನಾಯಕ ನಿಹಾರ್ ಮುಖೇಶ್ ಜೋಡಿಯಾಗಿ ಅಭಿನಯಿಸುತ್ತಿದ್ದಾರೆ. ಅಕ್ಷರ ಪಾತ್ರದಲ್ಲಿ ರಚನಾರನ್ನು ಚಿತ್ರತಂಡ ಪ್ರೇಕ್ಷಕರಿಗೆ ಪರಿಚಯಿಸಿದ್ದು, ಪೋಸ್ಟರ್ ಕೂಡ ಬಹಳ ಇಂಪ್ರೆಸಿವ್ ಆಗಿದೆ.

'ತೀರ್ಥರೂಪ ತಂದೆಯವರಿಗೆ' ಸಿನಿಮಾದ ಚಿತ್ರೀಕರಣ ಭರದಿಂದ ಸಾಗುತ್ತಿದೆ. ಮೈಸೂರು, ಕೊಚ್ಚಿ ಮೂಡಿಗೆರೆ ಸುತ್ತಮುತ್ತ 50% ರಷ್ಟು ಶೂಟಿಂಗ್ ಕಂಪ್ಲೀಟ್ ಮಾಡಿರುವ ಚಿತ್ರತಂಡ ಸಂಕ್ರಾಂತಿ ಬಳಿಕ 4ನೇ ಹಂತದ ಚಿತ್ರೀಕರಣವನ್ನು ಮೂಡಿಗೆರೆಯಲ್ಲಿ ಮಾಡಲು ಪ್ಲ್ಯಾನ್ ಮಾಡಿಕೊಂಡಿದೆ. ಆ ನಂತರ ಉತ್ತರ ಭಾರತದ ಕಡೆ ಚಿತ್ರೀಕರಣ ನಡೆಸಲಿದೆ.

ಜೈ ಚಾಮುಂಡೇಶ್ವರಿ ಪ್ರೊಡಕ್ಷನ್ಸ್ ನಡಿ ತೀರ್ಥ ರೂಪ ತಂದೆಯವರಿಗೆ ಸಿನಿಮಾ ನಿರ್ಮಾಣವಾಗುತ್ತಿದ್ದು, ರಾಮೇನಹಳ್ಳಿ ಜಗನ್ನಾಥ ಕಥೆ ಬರೆದು ನಿರ್ದೇಶನ ಮಾಡುತ್ತಿದ್ದಾರೆ. 'ಹೊಂದಿಸಿ ಬರೆಯಿರಿ' ಚಿತ್ರ ನಿರ್ಮಾಣ ಮಾಡಿದ್ದ ಸಂಡೇ ಸಿನಿಮಾಸ್ ಈ ಸಿನಿಮಾವನ್ನು ಪ್ರೆಸೆಂಟ್ ಮಾಡುತ್ತಿದೆ. ತೆಲುಗಿನಲ್ಲಿ 'ಗುಪ್ಪೆಡಂತ ಮನಸು' ಸೀರಿಯಲ್ ಖ್ಯಾತಿಯ ನಿಹಾರ್ ಮುಖೇಶ್ ನಾಯಕನಾಗಿ ನಟಿಸುತ್ತಿದ್ದಾರೆ.

'ತೀರ್ಥರೂಪ ತಂದೆಯವರಿಗೆ' ಚಿತ್ರ ಕನ್ನಡ ಹಾಗೂ ತೆಲುಗು ಎರಡು ಭಾಷೆಯಲ್ಲಿ ಚಿತ್ರ ಮೂಡಿ ಬರುತ್ತಿದೆ. ತೆಲುಗಿನಲ್ಲಿ ಪ್ರಿಯಮೈನ ನಾನ್ನಕು ಎಂಬ ಶೀರ್ಷಿಕೆ ಇಡಲಾಗಿದೆ. ಕೌಟುಂಬಿಕ ಹಿನ್ನೆಲೆ ಕಥೆಯುಳ್ಳ ಸಿನಿಮಾಗೆ ದೀಪಕ್ ಯರಗೇರಾ ಛಾಯಾ ಗ್ರಹಣ, ಜೋ ಕೋಸ್ಟ್ ಸಂಗೀತ, ಪ್ರಶಾಂತ್ ರಾಜಪ್ಪ ಸಂಭಾಷಣೆ ಇರಲಿದೆ.

# ಪೂನಂ ಧಿಲ್ಲೋನ್ ಮನೆಯಲ್ಲಿ ಕಳ್ಳತನ



ಬಾಲಿವುಡ್ ನಟಿ ಪೂನಂ ಧಿಲ್ಲೋನ್ ಮನೆಯಲ್ಲಿ ಕೆಲಸಕ್ಕೆ ಬಂದಿದ್ದವನಿಂದಲೇ ಲಕ್ಷಾಂತರ ರೂಪಾಯಿ ಮೌಲ್ಯದ ವಜ್ರದ ನೆಕ್ಲೇಸ್ ಕಳ್ಳತನವಾಗಿರುವ ಘಟನೆ ಮುಂಬೈನಲ್ಲಿ ನಡೆದಿದೆ.

ಮನೆಯಲ್ಲಿ ಕೆಲಸದವನೇ ಡೈಮಂಡ್ ನೆಕ್ಲೇಸ್ ಜೊತೆಗೆ 35,000 ರೂ. ನಗದು ಹಣ ಹಾಗೂ ಕೆಲವು ಡಾಲರ್‌ಗಳನ್ನೂ ಕದ್ದೊಯ್ದಿದ್ದಾನೆ ಎಂದು ಪೊಲೀಸರು ತಿಳಿಸಿದ್ದಾರೆ.

ಆರೋಪಿಯನ್ನು 37 ವರ್ಷದ ಸಮೀರ್ ಅನ್ಸಾರಿ ಎಂದು ಗುರುತಿಸಲಾಗಿದೆ, ಈತ ಫ್ಲಾಟ್‌ಗೆ ಪೇಯಿಂಟಿಂಗ್ ಕೆಲಸಕ್ಕೆ ಒಂದು ಟೀಂ ಜೊತೆಗೆ ಬಂದಿದ್ದ. ಕಳೆದ ಡಿಸೆಂಬರ್ 28ರಿಂದ ಇದೇ ಜನವರಿ 5ರ ವರೆಗೆ ಕೆಲಸ ಮಾಡುತ್ತಿದ್ದ. ಈ ವೇಳೆ ಹೊಂಚು ಹಾಕಿದ್ದ ಆರೋಪಿ ಮನೆಯ ಕಬೋರ್ಡ್‌ವೊಂದರಲ್ಲಿಟ್ಟಿದ್ದ ನೆಕ್ಲೇಸ್, ನಗದು, ಡಾಲರ್‌ಗಳನ್ನು ಕದ್ದೊಯ್ದಿದ್ದಾನೆ ಎನ್ನಲಾಗಿದೆ.

ಸದ್ಯ ನಟಿ ಮುಂಬೈನ ಜುಹು ನಲ್ಲಿ ವಾಸಿಸುತ್ತಿದ್ದಾರೆ. ಆದ್ರೆ ತನ್ನ ಫ್ಲಾಟ್‌ನಲ್ಲಿ ಕೆಲಸ ನಡೆಯುತ್ತಿದ್ದ ಕಾರಣ, ತನ್ನ ಮಗ ಅನ್ಮೋಲ್ ವಾಸಿಸುವ ಖಾರ್ ನಿವಾಸದಲ್ಲಿ ಉಳಿದುಕೊಂಡಿದ್ದರು.

ಇದೇ ಮನೆಯಲ್ಲಿ ಕೆಲಸದವರಿಗೂ ಉಳಿಯಲು ಅವಕಾಶ ಮಾಡಿ ಕೊಡಲಾಗಿತ್ತು. ಇದರ ಲಾಭ ಪಡೆದ ಖತರ್ನಾಕ್ ಹಣ, ಒಡವೆ ದೋಚಿದ್ದಾನೆ. ಆರೋಪಿ ಅನ್ಸಾರಿ ಕದ್ದ ಹಣದಲ್ಲಿ ಸ್ವಲ್ಪ ಹಣವನ್ನು ಪಾರ್ಟಿಗೆ ಖರ್ಚು ಮಾಡಿದ್ದಾನೆಂದು ಪೊಲೀಸರು ಮಾಹಿತಿ ನೀಡಿದ್ದಾರೆ.

ಪೂನಂ ಧಿಲ್ಲೋನ್ ಈ ಹಿಂದೆ ಪಥರ್ ಕೆ ಇನ್ಸಾನ್, ಜೈ ಶಿವ ಶಂಕರ್, ರಾಮಯ್ಯ ವಸ್ತವಯ್ಯ, ಬಟ್ವಾರಾ ಸೇರಿದಂತೆ ಅನೇಕ ಚಿತ್ರಗಳಲ್ಲಿ ನಟಿಸಿದ್ದರು. ಕೊನೆಯದ್ದಾಗಿ ಜೈ ಮಮ್ಮಿ ಡಿ ಚಿತ್ರದಲ್ಲಿ ನಟಿಸಿದ್ದರು.

# ದರ್ಶನ್ ಸರ್‌ಗೆ ರೆಗ್ಯೂಲರ್ ಬೇಲ್ ಆಗಿರೋದು ಖುಷಿ

ಸ್ಯಾಂಡಲ್‌ವುಡ್ ನಟಿ ರಚಿತಾ ರಾಮ್ ಅವರು ದರ್ಶನ್ ಕುರಿತು ಮಾತನಾಡಿದ್ದಾರೆ. ರೇಣುಕಾಸ್ವಾಮಿ ಪ್ರಕರಣದಲ್ಲಿ ದರ್ಶನ್ ಸರ್‌ಗೆ ಬೇಲ್ ಸಿಕ್ಕಿರೋದು ಖುಷಿಯಿದೆ ಎಂದು ನಟಿ ಮಾತನಾಡಿದ್ದಾರೆ. ನಾನು ದರ್ಶನ್ ಸರ್ ಬಗ್ಗೆ ಹೇಳುತ್ತಲೇ ಇರುತ್ತೇನೆ. ಇಂಡಸ್ಟ್ರಿಯಲ್ಲಿ ಇರೋವರೆಗೂ ಇಂಡಸ್ಟ್ರಿ ಬಿಟ್ಟ ಮೇಲೆಯೂ ಅವರ ಬಗ್ಗೆ ಹೇಳಬೇಕಾಗುತ್ತದೆ. ಯಾಕೆಂದರೆ ನನ್ನನ್ನು ಚಿತ್ರರಂಗಕ್ಕೆ ಪರಿಚಯಿಸಿದ ವ್ಯಕ್ತಿ. ತೂಗುದೀಪ ಬ್ಯಾನರ್ ನನ್ನ ಪರಿಚಯಿಸಿರೋದು. ಬುಲ್ ಬುಲ್ ತಂಡ ನನ್ನ ಪರಿಚಯಿಸಿದ್ದು, ಹಾಗಾಗಿ ನಾನು ಮತ್ತು ನನ್ನ ಕುಟುಂಬ ಅವರಿಗೆ ಆಭಾರಿಯಾಗಿರುತ್ತೇವೆ ಎಂದು ರಚಿತಾ ರಾಮ್ ಮಾತನಾಡಿದ್ದಾರೆ. ರೇಣುಕಾಸ್ವಾಮಿ ಪ್ರಕರಣದಲ್ಲಿ ದರ್ಶನ್ ಸರ್‌ಗೆ ರೆಗ್ಯೂಲರ್ ಬೇಲ್ ಆಗಿರೋದು ಖುಷಿಯಿದೆ. ಅವರಿಗೆ ಸ್ವಲ್ಪ ಸಮಯ ಕೊಡೋಣ. ಇದರ ಬಗ್ಗೆ ಅವರು ಮಾತನಾಡಿದರೆ ಸರಿಯಾಗಿರುತ್ತದೆ. ಅವರು ವಿಶ್ರಾಂತಿ ಪಡೆಯುತ್ತಿದ್ದಾರೆ. ಅವರು ಆದಷ್ಟು ಕಮ್ ಬ್ಯಾಕ್ ಮಾಡಲಿ, ಈ ಬಗ್ಗೆ ಅವರೇ ಮಾತನಾಡಿದರೆ ಚೆಂದ ಎಂದು ಹೇಳಿದ್ದಾರೆ. ಅಂದಹಾಗೆ, 2013ರಲ್ಲಿ ದರ್ಶನ್ ನಟನೆಯ 'ಬುಲ್ ಬುಲ್' ಸಿನಿಮಾ ಮೂಲಕ ರಚಿತಾ ರಾಮ್ ನಾಯಕಿಯಾಗಿ ಚಿತ್ರರಂಗಕ್ಕೆ ಪಾದಾರ್ಪಣೆ ಮಾಡಿದ್ದರು. ಬಣ್ಣದ ಬದುಕಿಗೆ ಬಂದು 11 ವರ್ಷ ಕಳೆದರೂ ನಟಿಯ ಮೇಲೆ ಫ್ಯಾನ್ಸ್ ಕ್ರೇಜ್ ಇನ್ನೂ ಕಮ್ಮಿಯಾಗಿಲ್ಲ.





# ಯಶ್ ಬರ್ತ್‌ಡೇಗೆ ಡಿವೈನ್ ಸ್ಟಾರ್ ವಿಶ್

ರಾಕಿಂಗ್ ಸ್ಟಾರ್ ಯಶ್‌ಗೆ ಹುಟ್ಟುಹಬ್ಬದ ಸಂಭ್ರಮವಾಗಿದ್ದು, ಅಭಿಮಾನಿಗಳಿಂದ ಶುಭಾಶಯಗಳ ಮಹಾಪೂರವೇ ಹರಿದು ಬರುತ್ತಿವೆ. ಇದೀಗ ನಟನ ಬರ್ತ್‌ಡೇ ಪ್ರಯುಕ್ತ ರಿಲೀಸ್ ಆಗಿರುವ 'ಟಾಕ್ಸಿಕ್' ಗ್ಲಿಂಪ್ಸ್ ನೋಡಿ ಡಿವೈನ್ ಸ್ಟಾರ್ ರಿಷಬ್ ಶೆಟ್ಟಿ ಹಾಡಿ ಹೊಗಳಿದ್ದಾರೆ. ಯಶ್ ಹುಟ್ಟುಹಬ್ಬಕ್ಕೆ ರಿಷಬ್ ಶೆಟ್ಟಿ ವಿಶೇಷವಾಗಿ ಸೋಶಿಯಲ್ ಮೀಡಿಯಾದಲ್ಲಿ ವಿಶ್ ಮಾಡಿದ್ದಾರೆ. 'ಟಾಕ್ಸಿಕ್' ಬರ್ತ್‌ಡೇ ಪೀಕ್ ಗ್ಲಿಂಪ್ಸ್ ನೋಡಿ ಬೆರಗುಗೊಳಿಸುವಂತಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ. 'ಟಾಕ್ಸಿಕ್' ಸಿನಿಮಾದ ತುಣುಕು ಶೇರ್ ಮಾಡಿ, ಹುಟ್ಟುಹಬ್ಬದ ಶುಭಾಶಯಗಳು ಯಶ್ ಸರ್ ಎಂದು ರಿಷಬ್ ಬರೆದುಕೊಂಡಿದ್ದಾರೆ.

ಗೋವಾದಲ್ಲಿ ಮಧ್ಯರಾತ್ರಿ ಯಶ್ ಕೇಕ್ ಕತ್ತರಿಸಿ ಬರ್ತ್‌ಡೇ ಸೆಲೆಬ್ರೇಟ್ ಮಾಡಿದ್ದಾರೆ.

ಪತ್ನಿ ರಾಧಿಕಾ ಮತ್ತು ಮಕ್ಕಳೊಂದಿಗೆ ಬರ್ತ್‌ಡೇ ಆಚರಿಸಿ ಯಶ್ ಖುಷಿಪಟ್ಟಿದ್ದಾರೆ. ನಟನ ಆಪ್ತ ಪಾನಿ ಪುರಿ ಕಿಟ್ಟಿ, ಏಗಿಓ ಸಂಸ್ಥೆಯ ರೂವಾರಿ ವೆಂಕಟ್ ಸೇರಿದಂತೆ ಅನೇಕರು ಹುಟ್ಟುಹಬ್ಬದ ಸಂಭ್ರಮದಲ್ಲಿ ಭಾಗಿಯಾಗಿ ಶುಭಕೋರಿದ್ದಾರೆ. ಮೊದಲೇ ತಾವು ಹುಟ್ಟುಹಬ್ಬ ಆಚರಿಸಿಕೊಳ್ಳಲ್ಲ.

ಅಭಿಮಾನಿಗಳಿಗೆ ನೀವು ಇರುವ ಕಡೆಯಿಂದಲೇ ಹಾರೈಸಿ ಎಂದು ನಟ ತಿಳಿಸಿದ್ದರು. ಆದರೆ ಇದೀಗ 'ಟಾಕ್ಸಿಕ್' ಲುಕ್‌ನಿಂದ ಫ್ಯಾನ್ಸ್ ಸರ್ಪ್ರೈಸ್ ಕೊಟ್ಟಿದ್ದಾರೆ.

ಫ್ಯಾನ್ಸ್ ನಿರೀಕ್ಷೆಗೆ ಅವರು ನಿರಾಸೆ ಮಾಡಿಲ್ಲ. ರಾಕಿ ಭಾಯ್ ಬರ್ತ್‌ಡೇ ಪ್ರಯುಕ್ತ 59 ಸೆಕೆಂಡ್ ಗ್ಲಿಂಪ್ಸ್ ರಿವೀಲ್ ಆಗಿದ್ದು, ಡ್ರಗ್ಸ್ ಮಾಫಿಯಾ ಕುರಿತ ಚಿತ್ರವಾಗಿದೆ. ರಿಲೀಸ್ ಆದ ಗ್ಲಿಂಪ್ಸ್‌ನಲ್ಲಿ ಕಲರ್‌ಫುಲ್ ಸೆಟ್‌ನಲ್ಲಿ ನಟನ ಸ್ಟೈಲೀಶ್ ವಾಕ್, ಹಾಟ್ ಮ್ಯಾನರಿಸಮ್‌ಗೆ ಅಭಿಮಾನಿಗಳು ಫಿದಾ ಆಗಿದ್ದಾರೆ.

# ಕನ್ನಡದ ನಟಿಗೆ ಬಿಗ್ ಚಾನ್ಸ್



'ಕೃಷ್ಣಂ ಪ್ರಣಯ ಸಖಿ' ಸಿನಿಮಾ ಖ್ಯಾತಿಯ ಶರಣ್ಯ ಶೆಟ್ಟಿಗೆ ಬೇಡಿಕೆ ಹೆಚ್ಚಾಗಿದೆ. ಸ್ಟಾರ್ ನಟನಿಗೆ ನಾಯಕಿಯಾಗುವ ಟಾಲಿವುಡ್‌ನತ್ತ ಶರಣ್ಯ ಮುಖ ಮಾಡಿದ್ದಾರೆ.

ರಶ್ಮಿಕಾ ಮಂದಣ್ಣ, ಶ್ರೀಲೀಲಾ, ಆಶಿಕಾ ರಂಗನಾಥ್, ರುಕ್ಮಿಣಿ ವಸಂತ್ ತೆಲುಗಿನಲ್ಲಿ ನೆಲೆ ಕಂಡುಕೊಂಡಿದ್ದಾರೆ. ಅದೇ ಹಾದಿಯಲ್ಲಿ ಶರಣ್ಯ ಶೆಟ್ಟಿ ಹೆಜ್ಜೆ ಇಡುತ್ತಿದ್ದಾರೆ. ತೆಲುಗಿನ ನಿರ್ಮಾಣ ಸಂಸ್ಥೆಯೊಂದು ನಟಿಯ ಜೊತೆ ಸಿನಿಮಾ ಮಾಡಲು ಮಾತುಕತೆ ನಡೆಸಿದೆ. ಅತೀ ಶೀಘ್ರದಲ್ಲಿ ಈ ಸಿನಿಮಾದ ಬಗ್ಗೆ ಘೋಷಣೆ ಆಗಲಿದೆ. ಶರಣ್ಯ ಶೆಟ್ಟಿ ಚೊಚ್ಚಲ ತೆಲುಗು ಸಿನಿಮಾಗೆ ಅಲ್ಲಿನ ಸ್ಟಾರ್ ನಟರೊಬ್ಬರು ಹೀರೋ ಆಗಿ ಬಣ್ಣ ಹಚ್ಚಲಿದ್ದಾರೆ. ಅದು ಯಾರು ಎಂಬುದು ಇನ್ನೂ ರಿವೀಲ್ ಆಗಿಲ್ಲ. ಕನ್ನಡದ ನಟಿಗೆ ತೆಲುಗು ಚಿತ್ರರಂಗದಲ್ಲಿ ಬೇಡಿಕೆ ಇದೆ ಎಂಬುದು ಪದೇ ಪದೇ ಸಾಬೀತು ಆಗುತ್ತಿದೆ. ಸದ್ಯ ನಟಿಯ ಬಗೆಗಿನ ಸಿನಿಮಾ ಗುಡ್ ನ್ಯೂಸ್ ಕೇಳಿ ಫ್ಯಾನ್ಸ್ ಥ್ರಿಲ್ ಆಗಿದ್ದಾರೆ. ನಟಿಯ ಹೊಸ ಹೆಜ್ಜೆಗೆ ಅಭಿಮಾನಿಗಳು ಶುಭಕೋರುತ್ತಿದ್ದಾರೆ.

# ವಿಜಯ ಹಜಾರೆ ಟೂರ್ನಿಯಿಂದ ಹಿಂದೆ ಸರಿದ ಕೆಎಲ್ ರಾಹುಲ್

ವಿಜಯ ಹಜಾರೆ ಟೂರ್ನಿಯಲ್ಲಿ ಕರ್ನಾಟಕ ತಂಡ ಕ್ವಾರ್ಟರ್ ಫೈನಲ್‌ಗೆ ತಲುಪಿದೆ. ಇದೀಗ ನಿರ್ಣಾಯಕ ಹಂತದಲ್ಲಿ ತಂಡಕ್ಕೆ ಸ್ಟಾರ್ ಆಟಗಾರರ ಆಗಮನವಾಗಿದೆ. ಅಂದರೆ ಆಸ್ಟ್ರೇಲಿಯಾ ವಿರುದ್ಧದ ಟೆಸ್ಟ್ ಸರಣಿಯಲ್ಲಿ ಕಾಣಿಸಿಕೊಂಡಿದ್ದ ದೇವದತ್ ಪಡಿಕ್ಕಲ್ ಹಾಗೂ ಪ್ರಸಿದ್ಧ್ ಕೃಷ್ಣ ಕ್ವಾರ್ಟರ್ ಫೈನಲ್‌ಗೂ ಮುನ್ನ ಕರ್ನಾಟಕ ತಂಡವನ್ನು ಕೂಡಿಕೊಂಡಿದ್ದಾರೆ.

ಆದರೆ ಕರ್ನಾಟಕದ ಸ್ಟಾರ್ ಆಟಗಾರ ಕೆಎಲ್ ರಾಹುಲ್ ವಿಜಯ ಹಜಾರೆ ಟೂರ್ನಿಯಿಂದ ಹಿಂದೆ ಸರಿದಿದ್ದಾರೆ. ಒಂದೇ ತಂಡದಲ್ಲಿದ್ದ ಪ್ರಸಿದ್ಧ ಕೃಷ್ಣ ಹಾಗೂ ದೇವದತ್ ಪಡಿಕ್ಕಲ್ ದೇಶೀಯ ಟೂರ್ನಿಗೆ ಮರಳಿದರೂ ರಾಹುಲ್ ಏಕೆ ರಾಜ್ಯ ತಂಡದ ಪರ ಕಣಕ್ಕಿಳಿಯಲು ಹಿಂದೇಟು ಹಾಕಿದ್ದಾರೆ ಎಂಬ ಪ್ರಶ್ನೆ ಮೂಡುವುದು ಸಹಜ. ಈ ಪ್ರಶ್ನೆಗೆ ಉತ್ತರ ವಿಶ್ರಾಂತಿ. ಬಾರ್ಡರ್-ಗವಾಸ್ಕರ್ ಟೆಸ್ಟ್ ಸರಣಿಯ ಎಲ್ಲಾ ಪಂದ್ಯಗಳಲ್ಲೂ ಕಣಕ್ಕಿಳಿದಿರುವ ರಾಹುಲ್ ವಿಶ್ರಾಂತಿಗಾಗಿ ಮನವಿ ಮಾಡಿದ್ದರು. ಇದಕ್ಕೆ ಬಿಸಿಸಿಐ ಕಡೆಯಿಂದ ಗ್ರೀನ್ ಸಿಗ್ನಲ್ ಸಿಕ್ಕಿದೆ. ವಿಜಯ ಹಜಾರೆ ಟೂರ್ನಿಯ ನಾಕೌಟ್ ಪಂದ್ಯಗಳಲ್ಲಿ ಕರ್ನಾಟಕ ಪರ ಕೆಎಲ್ ರಾಹುಲ್ ಕಾಣಿಸಿ ಕೊಳ್ಳುವುದಿಲ್ಲ. ಇನ್ನು ಕೆಎಲ್ ರಾಹುಲ್ ಮುಂಬರುವ ಇಂಗ್ಲೆಂಡ್ ವಿರುದ್ಧದ ಏಕದಿನ ಸರಣಿಯಲ್ಲಿ ಕಾಣಿಸಿಕೊಳ್ಳಲಿದ್ದಾರೆ. ಇದಾದ ಬಳಿಕ ನಡೆಯಲಿರುವ ಚಾಂಪಿಯನ್ಸ್ ಟ್ರೋಫಿಗೂ ಕನ್ನಡಿಗ ಆಯ್ಕೆಯಾಗುವ ನಿರೀಕ್ಷೆಯಿದೆ. ಪ್ರಸ್ತುತ ಮಾಹಿತಿ ಪ್ರಕಾರ ಚಾಂಪಿಯನ್ಸ್ ಟ್ರೋಫಿಗೆ ಕೆಎಲ್ ರಾಹುಲ್ ಅವರನ್ನು 2ನೇ ವಿಕೆಟ್ ಕೀಪರ್ ಬ್ಯಾಟರ್ ಆಗಿ ಪರಿಗಣಿಸುವ ಸಾಧ್ಯತೆ ಹೆಚ್ಚಿದೆ.



ಈ ಮೂಲಕ ರಾಹುಲ್ ಮತ್ತೆ ಬ್ಲೂ ಜೆರ್ಸಿಯಲ್ಲಿ ಕಣಕ್ಕಿಳಿಯಲಿದ್ದಾರೆ.

**ಕರ್ನಾಟಕ ಏಕದಿನ ತಂಡ:** ಮಯಾಂಕ್ ಅಗರ್ವಾಲ್ (ನಾಯಕ), ದೇವದತ್ ಪಡಿಕ್ಕಲ್, ನಿಕಿನ್ ಜೋಸ್, ಕೆವಿ ಅನೀಶ್, ಆರ್. ಸ್ಮರನ್, ಕೆಎಲ್ ಶ್ರೀಜಿತ್, ಅಭಿನವ್ ಮನೋಹರ್, ಶ್ರೇಯಸ್ ಗೋಪಾಲ್ (ಉಪನಾಯಕ), ಹಾರ್ದಿಕ್ ರಾಜ್, ಪ್ರಸಿದ್ಧ್ ಕೃಷ್ಣ, ವಿ. ಕೌಶಿಕ್, ವಿದ್ಯಾಧರ್ ಪಾಟೀಲ್, ಅಭಿಲಾಷ್ ಶೆಟ್ಟಿ, ಪ್ರವೀಣ್ ದುಬೆ, ಲುವ್ನಿತ್ ಸಿಸೋಡಿಯಾ, ಯಶೋವರ್ಧನ್ ಪರಂತಪ್.

# ಪಾಕಿಸ್ತಾನದಿಂದ ಚಾಂಪಿಯನ್ಸ್ ಟ್ರೋಫಿ ಎತ್ತಂಗಡಿ!

ವರ್ಷಗಳ ಬಳಿಕ ಐಸಿಸಿ ಟೂರ್ನಿಗೆ ಆತಿಥ್ಯ ನೀಡಲು ಸಾಕಷ್ಟು ಕಸರತ್ತು ನಡೆಸುತ್ತಿರುವ ಪಾಕಿಸ್ತಾನಕ್ಕೆ ಆಘಾತ ಎದುರಾಗಿದೆ . ಫೆಬ್ರುವರಿಯಲ್ಲಿ ಆರಂಭವಾಗುವ ಚಾಂಪಿಯನ್ಸ್ ಟ್ರೋಫಿಗೆ ಪಾಕಿಸ್ತಾನದ ಕ್ರೀಡಾಂಗಣಗಳು ಸಿದ್ಧವಾಗಿಲ್ಲ. ಕರಾಚಿ, ರಾವಲ್ಪಿಂಡಿ ಮತ್ತು ಲಾಹೋರ್‌ನ ಕ್ರೀಡಾಂಗಣಗಳ ನಿರ್ಮಾಣ ಕಾರ್ಯ ಇನ್ನೂ ನಡೆಯುತ್ತಿದೆ. ಐಸಿಸಿ ಅಧಿಕಾರಿಗಳು ಪರಿಶೀಲನೆ ನಡೆಸಲಿದ್ದು, ಸಿದ್ಧತೆಗಳ ಕೊರತೆಯಿಂದ ಟೂರ್ನಿಯನ್ನು ಯುಎಇಗೆ ಸ್ಥಳಾಂತರಿಸುವ ಸಾಧ್ಯತೆ ಇದೆ.


ಏಕಾಂಗಿಯಾಗಿ ಚಾಂಪಿಯನ್ಸ್ ಟ್ರೋಫಿಯನ್ನು ಆಯೋಜಿಸುವ ಆಸೆಯಲ್ಲಿದ್ದ ಪಾಕಿಸ್ತಾನಕ್ಕೆ ಭಾರತ ಹೈಬ್ರಿಡ್ ಮಾದರಿಯನ್ನು ಮುಂದಿಟ್ಟು ಬಿಗ್ ಶಾಕ್ ನೀಡಿತ್ತು. ಸಾಕಷ್ಟು ಹೋರಾಟದ ಬಳಿಕ ಹೈಬ್ರಿಡ್ ಮಾದರಿಗೆ ಪಾಕಿಸ್ತಾನ ಒಪ್ಪಿಕೊಳ್ಳಲೇಬೇಕಾಯಿತು. ಅದರಂತೆ ಇದೀಗ ಫೆಬ್ರವರಿಯಿಂದ ಆರಂಭವಾಗಲಿರುವ ಚಾಂಪಿಯನ್ಸ್ ಟ್ರೋಫಿಗೆ ಪಾಕಿಸ್ತಾನ ಹಾಗೂ ಯುಎಇ ಆತಿಥ್ಯವಹಿಸುತ್ತಿವೆ. ಅಂದರೆ ಭಾರತದ ಪಂದ್ಯಗಳು ಯುಎಇಯಲ್ಲಿ ನಡೆಯಲ್ಲಿವೆ. ಉಳಿದ ಪಂದ್ಯಗಳಿಗೆ ಪಾಕಿಸ್ತಾನ ಆತಿಥ್ಯ ನೀಡಲಿದೆ.

ಆದರೆ ಇದೀಗ ಹೊರಬಿದ್ದಿರುವ ಮಾಹಿತಿ ಪ್ರಕಾರ, ಇಡೀ ಪಂದ್ಯಾವಳಿ ಪಾಕಿಸ್ತಾನದಿಂದ ಬೇರೆಡೆಗೆ ಸ್ಥಳಾಂತರವಾಗಬಹುದು ಎಂದು ಹೇಳಲಾಗುತ್ತಿದೆ.ಇದಕ್ಕೆ ಕಾರಣವೂ ಇದ್ದು, ಚಾಂಪಿಯನ್ಸ್ ಟ್ರೋಫಿಯನ್ನು ನಡೆಸಲು ನಿಗದಿಪಡಿಸಿರುವ ಮೂರು ಕ್ರೀಡಾಂಗಣಗಳು ಈ ಟೂರ್ನಿಯನ್ನು ಆಯೋಜಿಸಲು ಇನ್ನು ಸಿದ್ಧವಾಗಿಲ್ಲ. ಹೀಗಾಗಿ ಇಡೀ ಪಂದ್ಯಾವಳಿಯನ್ನು ಯುಎಇಗೆ ಸ್ಥಳಾಂತರಿಸಬಹುದು ಎನ್ನಲಾಗುತ್ತಿದೆ.

**ನಿರ್ಮಾಣ ಕಾರ್ಯ ಇನ್ನೂ ನಡೆಯುತ್ತಿದೆ**

ಏಕದಿನ ಮಾದರಿಯಲ್ಲಿ ನಡೆಯಲ್ಲಿರುವ ಚಾಂಪಿಯನ್ಸ್ ಟ್ರೋಫಿ ಫೆಬ್ರವರಿ 19 ರಿಂದ ಆರಂಭವಾಗಲಿದ್ದು, ಮೊದಲ ಪಂದ್ಯ





ಪಾಕಿಸ್ತಾನದಲ್ಲಿ ನಡೆಯಲಿದೆ. ಚಾಂಪಿಯನ್ಸ್ ಟ್ರೋಫಿ ಪಂದ್ಯಗಳು ಪಾಕಿಸ್ತಾನದ ಲಾಹೋರ್, ರಾವಲ್ಪಿಂಡಿ ಮತ್ತು ಕರಾಚಿಯ 3 ಕ್ರೀಡಾಂಗಣಗಳಲ್ಲಿ ನಡೆಯಲಿವೆ. ವಿಸ್ಮಯಕಾರಿ ಸಂಗತಿ ಎಂದರೆ ಈ ಮೂರು ಕ್ರೀಡಾಂಗಣಗಳು ಇನ್ನೂ ಸಿದ್ಧವಾಗಿಲ್ಲ. ಇದೀಗ ಚಾಂಪಿಯನ್ಸ್ ಟ್ರೋಫಿ ಆರಂಭಕ್ಕೆ 40 ದಿನಗಳು ಮಾತ್ರ ಬಾಕಿ ಉಳಿದಿದ್ದು, ಪಾಕಿಸ್ತಾನದ ಎಲ್ಲಾ ಮೂರು ಕ್ರೀಡಾಂಗಣಗಳಲ್ಲಿ ನಿರ್ಮಾಣ ಕಾರ್ಯ ಇನ್ನೂ ನಡೆಯುತ್ತಿದೆ.

ಮುಂದಿನ ವಾರ ಐಸಿಸಿ ಅಧಿಕಾರಿಗಳು ಪಾಕಿಸ್ತಾನಕ್ಕೆ ತೆರಳಿ ಕರಾಚಿ, ರಾವಲ್ಪಿಂಡಿ ಮತ್ತು ಲಾಹೋರ್ ಸ್ಟೇಡಿಯಂಗಳನ್ನು ಪರಿಶೀಲಿಸಲಿದ್ದಾರೆ ಎಂಬ ವರದಿಗಳಿವೆ. ಸರಿಯಾದ ಸಮಯಕ್ಕೆ ಕ್ರೀಡಾಂಗಣವನ್ನು ಸಿದ್ಧಪಡಿಸಲು ಪಿಸಿಬಿಗೆ ಗಡುವು ನೀಡಲಾಗಿದೆ. ಪಿಸಿಬಿ ಈ ಗಡುವಿನೊಳಗೆ ಕ್ರೀಡಾಂಗಣಗಳನ್ನು ಸಿದ್ಧಪಡಿಸದಿದ್ದರೆ, ಇಡೀ ಪಂದ್ಯಾವಳಿಯನ್ನು ಪಾಕಿಸ್ತಾನದಿಂದ ಸ್ಥಳಾಂತರಿಸಬಹುದು. ಹೀಗಾದಲ್ಲಿ ಸಂಪೂರ್ಣ ಚಾಂಪಿಯನ್ಸ್ ಟ್ರೋಫಿ ಯುಎಇಯಲ್ಲಿ ಆಯೋಜನೆಯಾಗಲಿದೆ.

**ಪಾಕಿಸ್ತಾನಕ್ಕೆ ವಿಶ್ವ ಮಟ್ಟದಲ್ಲಿ ಮುಜುಗರ**

ಪಾಕಿಸ್ತಾನದ ಸ್ಟೇಡಿಯಂಗಳ ಬಗ್ಗೆ ಹೇಳುವುದಾದರೆ ಗಡಾಫಿ ಸ್ಟೇಡಿಯಂ ಇನ್ನೂ ಸಿದ್ಧವಾಗಿಲ್ಲ. ಅಲ್ಲಿ ಯಾವುದೇ ಶೆಡ್‌ಗಳನ್ನು ಅಳವಡಿಸಲಾಗಿಲ್ಲ, ಯಾವುದೇ ಫ್ಲಡ್ ಲೈಟ್‌ಗಳನ್ನು ಅಳವಡಿಸಲಾಗಿಲ್ಲ. ಅಷ್ಟೇ ಅಲ್ಲ ಫ್ಯಾನ್‌ಗಳಿಗೆ ಕುರ್ಚಿಗಳನ್ನೂ ಅಳವಡಿಸಿಲ್ಲ. ಕ್ರೀಡಾಂಗಣದ ಸಂಪೂರ್ಣ ಸಿದ್ಧತೆಗೆ ಜನವರಿ 25 ಗಡುವು ನೀಡಲಾಗಿದ್ದು, ಈ ದಿನಾಂಕದೊಳಗೆ ಸಂಪೂರ್ಣ ಕಾಮಗಾರಿ ಪೂರ್ಣಗೊಳ್ಳುವ ಸಾಧ್ಯತೆಗಳಿಲ್ಲ ಎಂದು ಹೇಳಲಾಗುತ್ತಿದೆ.

ಒಂದು ವೇಳೆ ಇದು ನಿಜವಾದರೆ ಪಾಕಿಸ್ತಾನದ ಪ್ರತಿಷ್ಠೆಗೆ ಧಕ್ಕೆಯಾಗುವುದು ಖಂಡಿತ. ಏಕೆಂದರೆ ಇಡೀ ಟೂರ್ನಿಯನ್ನು ಪಾಕಿಸ್ತಾನದಲ್ಲಿ ಆಯೋಜಿಸಲು ಪಿಸಿಬಿ, ಐಸಿಸಿ ಮುಂದೆ ಹಟ ಹಿಡಿದು ಕುಳಿತಿತ್ತು.

ಇದಲ್ಲದೆ ಬಿಸಿಸಿಐ ವಿರುದ್ಧವೂ ಬೆಂಕಿ ಉಗುಳಿತ್ತು. ಹೀಗಿರುವಾಗ ಕ್ರೀಡಾಂಗಣಗಳನ್ನು ಟೂರ್ನಿಗೆ ಸಿದ್ಧಪಡಿಸುವಲ್ಲಿ ಪಿಸಿಬಿ ಯಶಸ್ವಿಯಾಗದಿದ್ದರೆ, ವಿಶ್ವ ಕ್ರಿಕೆಟ್ ಮುಂದೆ ತಲೆಭಾಗಬೇಕಾಗುತ್ತದೆ.

# ಒಂದೇ ದಿನ 15 ವಿಕೆಟ್‌ಗಳು ಪತನವಾದರೂ ಸಿಡ್ನಿ ಮೈದಾನಕ್ಕೆ ಕ್ಲೀನ್ ಚಿಟ್



ಭಾರತ ಮತ್ತು ಆಸ್ಟ್ರೇಲಿಯಾ ನಡುವಿನ 5 ಪಂದ್ಯಗಳ ಟೆಸ್ಟ್ ಸರಣಿಯ ಕೊನೆಯ ಪಂದ್ಯ ಸಿಡ್ನಿಯಲ್ಲಿ ನಡೆಯಿತು. ಈ ಪಂದ್ಯದಲ್ಲಿ ಆಸ್ಟ್ರೇಲಿಯಾ ತಂಡ 6 ವಿಕೆಟ್‌ಗಳಿಂದ ಗೆದ್ದು ಬಾರ್ಡರ್ ಗವಾಸ್ಕರ್ ಟ್ರೋಫಿಯನ್ನು 3-1 ಅಂತರದಿಂದ ಗೆದ್ದುಕೊಂಡಿತು. ಇದೀಗ ಈ ಪಂದ್ಯ ಸೇರಿದಂತೆ ಇಡೀ ಸರಣಿಯಲ್ಲಿ ಬಳಸಲಾದ ಪಿಚ್‌ನ ರೇಟಿಂಗ್ ಅನ್ನು ಐಸಿಸಿ ಬಿಡುಗಡೆ ಮಾಡಿದೆ. ಆ ಪ್ರಕಾರ, ಪರ್ತ್, ಅಡಿಲೇಡ್, ಬ್ರಿಸ್ಬೇನ್ ಮತ್ತು ಮೆಲ್ಬೋರ್ನ್‌ನ ಪಿಚ್‌ಗಳನ್ನು 'ವೆರಿ ಗುಡ್' ಎಂದು ರೇಟ್ ಮಾಡಲಾಗಿದೆ. ಆದರೆ ಕೊನೆಯ ಟೆಸ್ಟ್‌ಗೆ ಆತಿಥ್ಯ ನೀಡಿದ್ದ ಸಿಡ್ನಿ ಪಿಚ್‌ಗೆ ಐಸಿಸಿ 'ತೃಪ್ತಿದಾಯಕ' ರೇಟಿಂಗ್ ನೀಡಿರುವುದು ಎಲ್ಲಾರ ಅಚ್ಚರಿಗೆ ಕಾರಣವಾಗಿದೆ. ಏಕೆಂದರೆ ಪಂದ್ಯದ ಮೊದಲ ದಿನ 11 ವಿಕೆಟ್‌ಗಳು ಬಿದ್ದರೆ, ಎರಡನೇ ದಿನ 15 ವಿಕೆಟ್‌ಗಳು ಬಿದ್ದವು. ಗ್ಲೆನ್ ಮೆಕ್‌ಗ್ರಾತ್ ಮತ್ತು ಸುನಿಲ್ ಗವಾಸ್ಕರ್ ಸೇರಿದಂತೆ ಅನೇಕ ಅನುಭವಿಗಳು ಈ ಪಿಚ್ ಬಗ್ಗೆ ಆಶ್ಚರ್ಯ ವ್ಯಕ್ತಪಡಿಸಿದ್ದರು ಮತ್ತು ಪ್ರಶ್ನೆಗಳನ್ನು ಸಹ ಎತ್ತಿದ್ದರು. ಇದರ ಜೊತೆಗೆ ಇದನ್ನು ಅತ್ಯಂತ ಕೆಟ್ಟ ಪಿಚ್ ಎಂದು ಕರೆದಿದ್ದರು.

**ಎರಡೂವರೆ ದಿನಗಳಲ್ಲಿ ಪಂದ್ಯ ಮುಕ್ತಾಯ**

ಸಿಡ್ನಿ ಮೈದಾನವನ್ನು ಸಾಮಾನ್ಯವಾಗಿ ಬ್ಯಾಟ್ಸ್‌ಮನ್‌ಗಳಿಗೆ ಅನುಕೂಲಕರವೆಂದು ಪರಿಗಣಿಸಲಾಗುತ್ತದೆ. ಈ ಬಾರಿಯೂ ಈ ಪಿಚ್‌ನಿಂದ ಅದೇ ರೀತಿಯ ನಿರೀಕ್ಷೆ ಇತ್ತು. ಆದರೆ ಪಂದ್ಯ ಆರಂಭವಾದ ಬಳಿಕ ಪ್ರತಿ ಬಾಲ್ ಆಡಲು ಬ್ಯಾಟ್ಸ್‌ಮನ್‌ಗಳು ಸಾಕಷ್ಟು ಪ್ರಯಾಸಪಡಬೇಕಾಯಿತು. ಇದರ ಫಲವಾಗಿ ಕೇವಲ ಎರಡೂವರೆ ದಿನಗಳಲ್ಲಿ ಪಂದ್ಯ ಮುಗಿದಿತ್ತು. ಕೇವಲ 1141 ಎಸೆತಗಳಲ್ಲಿ ಪಂದ್ಯದ ಫಲಿತಾಂಶ ಪ್ರಕಟವಾಯಿತು.

ಇದಕ್ಕೂ ಮುನ್ನ 1931ರಲ್ಲಿ ಆಸ್ಟ್ರೇಲಿಯಾ ಮತ್ತು ವೆಸ್ಟ್ ಇಂಡೀಸ್ ನಡುವಿನ ಪಂದ್ಯ 1184 ಎಸೆತಗಳಲ್ಲಿ ಕೊನೆಗೊಂಡಿತ್ತು. ಆ ಬಳಿಕ 1985 ರಲ್ಲಿ ನಡೆದಿದ್ದ ಆಸ್ಟ್ರೇಲಿಯಾ ಮತ್ತು ಇಂಗ್ಲೆಂಡ್ ನಡುವಿನ ಪಂದ್ಯವು 911 ಎಸೆತಗಳಲ್ಲಿ ಅಂತ್ಯಗೊಂಡಿತ್ತು. ಹಾಗೆಯೇ 1888 ರಲ್ಲಿ ಈ ಎರಡು ತಂಡಗಳ ನಡುವಿನ ಪಂದ್ಯದ ಫಲಿತಾಂಶವು ಕೇವಲ 1129 ಎಸೆತಗಳಲ್ಲಿ ಹೊರಬಂದಿತ್ತು. ಇದರಿಂದ ಪಿಚ್ ಎಷ್ಟು ಕೆಟ್ಟದಾಗಿರಬಹುದೆಂದು ಅಂದಾಜಿಸಬಹುದು. ಇದರ ಹೊರತಾಗಿಯೂ, ಐಸಿಸಿ ಈ ಪಿಚ್ ಅನ್ನು 'ತೃಪ್ತಿದಾಯಕ' ವಿಭಾಗದಲ್ಲಿ ಇರಿಸಿದೆ.

**ಅಚ್ಚರಿ ವ್ಯಕ್ತಪಡಿಸಿದ ಮಾಜಿ ಕ್ರಿಕೆಟಿಗರು**

ಸಿಡ್ನಿ ಪಿಚ್‌ನಲ್ಲಿ ಸಾಕಷ್ಟು ಹುಲ್ಲಿತ್ತು. ಇದರಿಂದಾಗಿ ಬೌಲರ್‌ಗಳು ಸ್ವಿಂಗ್ ಜೊತೆಗೆ ಸಾಕಷ್ಟು ಸೀಮ್ ಮೂವ್‌ಮೆಂಟ್ ಪಡೆಯುತ್ತಿದ್ದರು. ಈ ಕಾರಣಕ್ಕೆ ಎರಡೂ ತಂಡಗಳ ಬ್ಯಾಟ್ಸ್‌ಮನ್‌ಗಳು ರನ್ ಗಳಿಸಲು ಹರಸಾಹಸ ಪಡಬೇಕಾಯಿತು. ಕಳೆದ ಹಲವು ವರ್ಷಗಳಿಂದ ಸಿಡ್ನಿಯಲ್ಲಿ ಇಂತಹ ಪಿಚ್ ನೋಡಿರಲಿಲ್ಲ ಎಂದು ಸ್ವತಃ ಆಸ್ಟ್ರೇಲಿಯಾದ ದಿಗ್ಗಜ ಗ್ಲೆನ್ ಮೆಕ್‌ಗ್ರಾತ್ ಹೇಳಿದ್ದರು.

# ಏಕದಿನ ಸರಣಿ ತನ್ನದಾಗಿಸಿಕೊಂಡ ನ್ಯೂಜಿಲೆಂಡ್



ಟಿ20 ಹಾಗೂ ಏಕದಿನ ಸರಣಿಗಾಗಿ ನ್ಯೂಜಿಲೆಂಡ್ ಪ್ರವಾಸ ಮಾಡಿದ್ದ ಶ್ರೀಲಂಕಾ ತಂಡ ಖಾಲಿ ಕೈಯಲ್ಲಿ ತವರಿಗೆ ವಾಪಸ್ಸಾಗಬೇಕಾಗಿದೆ. ಈ ಮೊದಲು ಉಭಯ ತಂಡಗಳ ನಡುವೆ ನಡೆದಿದ್ದ ಟಿ20 ಸರಣಿಯನ್ನು 2-1 ಅಂತರದಿಂದ ವಶಪಡಿಸಿಕೊಂಡಿದ್ದ ನ್ಯೂಜಿಲೆಂಡ್ ತಂಡ, ಇದೀಗ ನಡೆಯುತ್ತಿರುವ ಏಕದಿನ ಸರಣಿಯನ್ನು ಸಹ ಇನ್ನೊಂದು ಪಂದ್ಯ ಬಾಕಿ ಇರುವಂತೆಯೇ ತನ್ನ ತೆಕ್ಕೆಗೆ ಹಾಕಿಕೊಂಡಿದೆ. ಪಂದ್ಯದಲ್ಲಿ ಮೊದಲು ಬ್ಯಾಟ್ ಮಾಡಿದ ನ್ಯೂಜಿಲೆಂಡ್ 255 ರನ್ ಕಲೆಹಾಕಿದರೆ, ಈ ಗುರಿ ಬೆನ್ನಟ್ಟಿದ ಶ್ರೀಲಂಕಾ ತಂಡ 142 ರನ್‌ಗಳಿಗೆ ಆಲೌಟ್ ಆಗುವ ಮೂಲಕ 113 ರನ್‌ಗಳಿಂದ ಸೋಲೊಪ್ಪಿಕೊಂಡಿದಲ್ಲದೆ ಸರಣಿಯನ್ನು ಕಳೆದುಕೊಂಡಿತು.

**ಕಿವೀಸ್‌ಗೆ ರಚಿನ್ - ಮಾರ್ಕ್ ಆಸರೆ**

ಉಭಯ ತಂಡಗಳ ನಡುವೆ ಇಂದು ನಡೆದ ಎರಡನೇ ಏಕದಿನ ಪಂದ್ಯಕ್ಕೆ ಮಳೆ ಅಡ್ಡಿಪಡಿಸಿತು. ಹೀಗಾಗಿ ಪಂದ್ಯವನ್ನು ತಲಾ 37 ಓವರ್‌ಗಳಿಗೆ ನಿಗದಿಪಡಿಸಲಾಯಿತು. ಅದರಂತೆ ಮೊದಲು ಬ್ಯಾಟ್ ಮಾಡಿದ ನ್ಯೂಜಿಲೆಂಡ್ ತಂಡ 31 ರನ್ ಗಳಿಸುವಷ್ಟರಲ್ಲಿ ಮೊದಲ ವಿಕೆಟ್ ಕಳೆದುಕೊಂಡರು. ಇದಾದ ನಂತರ ರಚಿನ್ ರವೀಂದ್ರ ಹಾಗೂ ಮಾರ್ಕ್ ಚಾಪ್ಮನ್ ಜೊತೆ 112 ರನ್‌ಗಳ ಜೊತೆಯಾಟ ನೀಡಿದರು.

ಈ ವೇಳೆ ರಚಿನ್ 79 ರನ್ ಕಲೆಹಾಕಿ ವಿಕೆಟ್ ಒಪ್ಪಿಸಿದರೆ, ಚಾಪ್ಮನ್ 63 ರನ್‌ಗಳ ಕಾಣಿಕೆ ನೀಡಿದರು. ಆದರೆ, ಇದಾದ ಬಳಿಕ ಕಿವೀಸ್ ತಂಡ ಸತತ ಅಂತರದಲ್ಲಿ 3 ವಿಕೆಟ್ ಕಳೆದುಕೊಂಡಿತು.ನಂತರ ಡ್ಯಾರಿಲ್ ಮಿಚೆಲ್ 38 ರನ್, ಗ್ಲೆನ್ ಫಿಲಿಪ್ಸ್ 22 ರನ್ ಮತ್ತು ನಾಯಕ ಮಿಚೆಲ್ ಸ್ಯಾಂಟ್ನರ್ 20 ರನ್ ಗಳಿಸಿ ತಂಡವನ್ನು 255 ರನ್‌ಗಳ ಉತ್ತಮ ಮೊತ್ತಕ್ಕೆ ಕೊಂಡೊಯ್ದರು.

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news

ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966